ಸಂಪುಟ: 04 ಸಂಚಿಕೆ: 195 ಪುಟಗಳು: 08 ಶುಕ್ರವಾರ 27 ಸೆಪ್ಟೆಂಬರ್ 2024
www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ
RNI No. KARKAN/2021/80833
9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**
ಮನುಷ್ಯ ಅವನ ಯೋಚನೆಗಳ ಉತ್ಪನ್ನವಾಗಿದ್ದಾನೆ. ಅವನ ಯೋಚನೆಯಂತೆ ಅವನಾಗುತ್ತಾನೆ

## ಸಿಎಂ ರಾಜೀನಾಮೆ ಕೊಡುವ ವಿಶ್ವಾಸವಿದೆ: ವಿ.ಸೋಮಣ್ಣ

• ಉದಯವಾಹಿನಿ, ಶಿವಮೊಗ್ಗ

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಪ್ರಾಸಿಕ್ಯೂಷನ್ ನಡೆಸಲು ಹೈಕೋರ್ಟ್ ಆದೇಶ ನೀಡಿರುವ ಹಿನ್ನೆಲೆಯಲ್ಲಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಹುದ್ದೆಗೆ ರಾಜೀನಾಮೆ ಕೊಡುತ್ತಾರೆ ಎಂದು ವೈಯಕ್ತಿಕವಾಗಿ ನನಗೆ ವಿಶ್ವಾಸವಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ. ಸೋಮಣ್ಣ ಹೇಳಿದರು. ಕಾನೂನಿಗಿಂತಲೂ ಯಾರು ದೊಡ್ಡವರಲ್ಲ. ಸಿದ್ದರಾಮಯ್ಯ ಜೊತೆಗೆ ಈ ಹಿಂದೆ ಮಂತ್ರಿಯಾಗಿ ಕೆಲಸ ಮಾಡಿದ್ದೇನೆ. ಅವರೊಬ್ಬ ಸೂಕ್ಷ್ಮ ಮನಸ್ಸಿನ ರಾಜಕಾರಣಿ. ಇದೀಗ ಅವರ ಮೇಲೆ ತನಿಖೆಗೆ ಆದೇಶಿಸಲಾಗಿದೆ. ಸಿಎಂ ಇದನ್ನು ಅರಿತುಕೊಳ್ಳುವ ಅಗತ್ಯವಿದೆ ಎಂದು ಗುರುವಾರ ಇಲ್ಲಿ ಸುದ್ದಿಗಾರರ ಪ್ರಶ್ನೆಗೆ ಪ್ರತಿಕ್ರಿಯಿಸಿದರು. ಕಾನೂನು ತನ್ನ ಪಾಡಿಗೆ ತಾನು ಕೆಲಸ ಮಾಡುತ್ತದೆ. ಹೀಗಾಗಿಯೇ ಆ ವಿಷಯದಲ್ಲಿ ನಾನು ಹೆಚ್ಚು ಮಾತನಾಡುವುದಿಲ್ಲ' ಎಂದು ಹೇಳಿದರು.

## ವಿಧಾನಸಭೆ ವಿಸರ್ಜನೆ ಮಾಡಿದ್ರೆ, ಕಾಕಾಪಾಟೀಲನೂ ಹಿಂದೆ ಬರಲ್ಲ

• ಉದಯವಾಹಿನಿ, ಬೆಂಗಳೂರು

ವಿಧಾನಸಭೆ ವಿಸರ್ಜನೆ ಮಾಡಿ ತಮ್ಮ ಹಿಂದೆ ರಾಜ್ಯದ ಜನರಿದ್ದಾರೆ ಎಂದು ತೋರಿಸಿಕೊಟ್ಟರೆ ಬಿಜೆಪಿ ನಿಮ್ಮ ವಿರುದ್ಧ ಪ್ರತಿಭಟನೆಯನ್ನೇ ಮಾಡುವುದಿಲ್ಲ ಎಂದು ವಿರೋಧ ಪಕ್ಷದ ನಾಯಕ ಆರ್. ಅಶೋಕ್ ಅವರು ಸವಾಲು ಹಾಕಿದರು. ಸಿಎಂ ರಾಜೀನಾಮೆಗೆ ಒತ್ತಾಯಿಸಿ ರಾಜ್ಯ ಬಿಜೆಪಿ ವತಿಯಿಂದ ವಿಧಾನಸೌಧದ ಗಾಂಧಿ ಪ್ರತಿಮೆ ಮುಂಭಾಗದಲ್ಲಿ ಇಂದು ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಸಿದ್ದರಾಮ್ಯನವರೇ ನೀವು ವಿಧಾನಸಭೆ ವಿಸರ್ಜನೆಗೆ ಮುಂದಾದರೆ ಕಾಂಗ್ರೆಸ್ಸಿನ 136 ಶಾಸಕರ ಪೈಕಿ 135 ಜನ ಶಾಸಕರೂ ನಿಮ್ಮ ಜೊತೆ ಇರುವುದಿಲ್ಲ. ಜಮೀರ್, ಮಹದೇವಪ್ಪ, ಕಾಕಾ ಪಾಟೀಲ ಕೂಡ ಇರುವುದಿಲ್ಲ ಎಂದು ತಿಳಿಸಿದರು. ರಾಜ್ಯದಲ್ಲಿ ಅಭಿವೃದ್ಧಿ ಕನಸಿನ ಮಾತಾಗಿದೆ. ಲೂಟಿ, ಭ್ರಷ್ಟಾಚಾರ ಮಿತಿ ಮೀರಿದೆ. ಈ ಸರಕಾರಕ್ಕೆ ವಿಧಾನಸೌಧದಲ್ಲಿ ಕ್ಯಾಬಿನೆಟ್ ಸಭೆ ಮಾಡಲು ಅಧಿಕಾರ, ಯೋಗ್ಯತೆ ಇಲ್ಲ ಎಂದ ಅವರು, ರಾಜೀನಾಮೆ ಕೊಡುವುದೊಂದೇ ನಿಮ್ಮ ಮುಂದಿನ ದಾರಿ. ಇವತ್ತು ಎಫ್‌ಐಆರ್ ಕೂಡ ಆಗಲಿದೆ. ಇನ್ಯಾತಕ್ಕೆ ಕಾಯುತ್ತಿದ್ದೀರಿ? ಎಂದು ಪ್ರಶ್ನಿಸಿದರು. ಹೈಕೋರ್ಟ್ ಆದೇಶ ಬಂದಿದೆ. ಜನಪ್ರತಿನಿಧಿಗಳ ಕೋರ್ಟಿನ ಆದೇಶವೂ ಬಂದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ರಾಜೀನಾಮೆ ಬಿಟ್ಟು ಬೇರೇನು ಮಾಡಲೂ ಸಾಧ್ಯವಿಲ್ಲ ಎಂದು ವಿಶ್ಲೇಷಿಸಿದರು.

## ಸಿದ್ದರಾಮಯ್ಯಗೆ ಕೇಜ್ರಿವಾಲ್ ಫೋನ್ ಮಾಡಿ ಹೇಳಿರಬಹುದು


• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ಅವರ ರಾಜೀನಾಮೆಗೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ ನಡೆಸುತ್ತಿದೆ. ಬಿಜೆಪಿ ನಾಯಕರು ವಿಧಾನಸೌಧ ಒಳ ನುಗ್ಗಲು ಯತ್ನಿಸಿದ್ದು, ಪೊಲೀಸರು ವಶಕ್ಕೆ ಪಡೆದಿದ್ದಾರೆ. ಈ ವೇಳೆ ನಟ, ರಾಜ್ಯಸಭಾ ಸಂಸದ ಜಗ್ಗೇಶ್ ಸಿದ್ದರಾಮಯ್ಯ ಬಗ್ಗೆ ಪ್ರತಿಕ್ರಿಯೆ ನೀಡಿದ್ದಾರೆ. ಕರ್ನಾಟಕದ ರಾಷ್ಟ್ರೀಯ ಮಟ್ಟದಲ್ಲಿ ಕುಖ್ಯಾತಿಗೆ ಒಳಗಾಗ್ತಿದೆ. ಮೋದಿ ಹತ್ತು ವರ್ಷ ರಾಷ್ಟ್ರವನ್ನು ಸ್ವಚ್ಛಗೊಳಿಸಿದ್ದಾರೆ. ಅಂತರಾಷ್ಟ್ರೀಯ ಮಟ್ಟದಲ್ಲಿ ರಾಷ್ಟ್ರದ ಗೌರವ ಹೆಚ್ಚಿಸುತ್ತಿದ್ದಾರೆ. ಸಿದ್ದರಾಮಯ್ಯ ಅವರ ವಿರುದ್ಧ ಯಾವುದೇ ಕಪ್ಪು ಚುಕ್ಕೆ ಇರಲಿಲ್ಲ. ಬಹಳ ಕ್ಲೀನ್ ಹ್ಯಾಂಡ್ ಎಂದು ತಿಳಿದಿದ್ದೆ. ಆದರೆ, ಇವರು ಒಳಗೊಂದು ಹೊರಗೊಂದು ಎಂದು ಕಿಡಿ ಕಾರಿದರು.

## ಪತ್ರಕರ್ತರ ಬಹುದಿನಗಳ ಬೇಡಿಕೆ ಪೂರೈಸಿದ ಸಿಎಂ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ಗ್ರಾಮೀಣ ಪತ್ರಕರ್ತರ ಬಹುದಿನಗಳ ಬೇಡಿಕೆಯಾದ ಉಚಿತ ಬಸ್ ಪಾಸ್ ಗೆ ಇಂದು ಸಿಎಂ ಸಿದ್ದರಾಮಯ್ಯ ಒಪ್ಪಿಗೆ ನೀಡಿದ್ದು, ಕೊನೆಗೂ ಬೇಡಿಕೆ ಈಡೇರಿದೆ. ಗ್ರಾಮೀಣ ಭಾಗದ ಪತ್ರಕರ್ತರಿಗೆ ತಮ್ಮ ಕರ್ತವ್ಯ ನಿರ್ವಹಿಸಲು ಅನುಕೂಲವಾಗುವಂತೆ ಉಚಿತ ಬಸ್ ಪಾಸ್ ನೀಡಬೇಕು ಎಂದು ಹಲವು ದಿನಗಳಿಂದ ಒತ್ತಾಯ ಕೇಳಿಬರುತ್ತಲೇ ಇತ್ತು. ಅದನ್ನೀಗ ಮುಖ್ಯಮಂತ್ರಿಗಳು ಕೊನೆಗೂ ಈಡೇರಿಸಿದ್ದಾರೆ. ಇಂದು ವಿಧಾನಸೌಧದಲ್ಲಿ ನಡೆದ ಕಾರ್ಯಕ್ರಮದಲ್ಲಿ ಸಿಎಂ ಗುಡ್ ನ್ಯೂಸ್ ಕೊಟ್ಟಿದ್ದಾರೆ. ಪತ್ರಕರ್ತರ ದಶಕಗಳ ಬೇಡಿಕೆಯಾದ ಗ್ರಾಮೀಣ ಪತ್ರಕರ್ತರಿಗೆ ಉಚಿತ ಬಸ್ ಪಾಸ್ ಸೌಲಭ್ಯಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುದ್ರೆ ಒತ್ತಿದ್ದಾರೆ. ಗ್ರಾಮೀಣ ಪತ್ರಕರ್ತರ ಉಚಿತ ಪಾಸ್ ಜಾರಿಗೆ ಅಧಿಕೃತ ಆದೇಶ ಹೊರ ಬಿದ್ದಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕೊಟ್ಟ ಭರವಸೆಯನ್ನು ಈಡೇರಿಸಿ ನುಡಿದಂತೆ ನಡೆದಿದ್ದಾರೆ. ಉಚಿತ ಬಸ್ ಪಾಸ್ ಬೇಡಿಕೆಯನ್ನು ದಡ ಮುಟ್ಟಿಸುವಲ್ಲಿ ಯಶಸ್ವಿಯಾದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ಅವರ ನಿರಂತರ ಶ್ರಮಕ್ಕೆ ಸಾರ್ಥಕತೆ ದೊರೆತಿದೆ. ತಮ್ಮ ಬಹುದಿನಗಳ ಬೇಡಿಕೆ ಈಡೇರಿದ್ದಕ್ಕೆ ಮಾಧ್ಯಮ ವಲಯದಿಂದಲೂ ಸಿಎಂಗೆ ಧನ್ಯವಾದ ಸಲ್ಲಿಕೆಯಾಗಿದೆ.





# ಕೈಗೇ ಕುಕ್ಕಿದ ಕೋಳಿವಾಡ

## ಪಕ್ಷಕ್ಕೆ ಮುಜುಗರ

■ ಸಿಎಂ ಸಿದ್ದು ರಾಜೀನಾಮೆಗೆ ಕೇಸರಿ ರಣಕಹಳೆ ■ ಸಿಎಂ ರಾಜೀನಾಮೆ ಆಗ್ರಹಿಸಿ ಬಿಜೆಪಿ ನಾಯಕರು ವಿಧಾನಸೌಧದೊಳಗೆ ನುಗ್ಗಲು ಯತ್ನ ■ ರಾಜೀನಾಮೆ ಕೊಟ್ಟು ಸಿದ್ದರಾಮಯ್ಯ ತನಿಖೆ ಎದುರಿಸಲಿ ■ ನಿರಪರಾಧಿಯಾಗಿದ್ರೆ ಮತ್ತೆ ಸಿಎಂ ಆಗಲಿ- ಸುನೀಲ್ ■ ಯಾರು ಸಿಎಂ ಆಗಬೇಕೆಂದು ಕಾಂಗ್ರೆಸ್ ನಲ್ಲಿ ಚರ್ಚೆ ■ ಸಿದ್ದರಾಮಯ್ಯ ರಾಜೀನಾಮೆ ನೀಡುವುದು ಸೂಕ್ತ: ಆರ್.ಅಶೋಕ್


1 ಇದು ರಾಜಕೀಯ ಪ್ರೇರಿತವಾಗಿದ್ದರೆ ಕೋರ್ಟ್‌ಗಳು ಏಕೆ ತೀರ್ಪು ನೀಡುತ್ತಿದ್ದವು?

2 ಈ ರೀತಿ ಕಾಂಗ್ರೆಸ್ ಪಕ್ಷ ಆರೋಪ ಮಾಡುವುದು ಸರಿಯಲ್ಲ

3 ಸಿಎಂ, ಡಿಸಿಎಂ ನಡುವೆ ಮೊದಲಿಂದಲೂ ಸಮಸ್ಯೆಗಳಿವೆ

### ಬೇರೆ ದಾರಿ ಇಲ್ಲ

ಸ್ವಜನ ಪಕ್ಷಪಾತ ಆಗಿರುವುದು ನಿಜ ಎಂದು ಹೈಕೋರ್ಟ್ ಅಭಿಪ್ರಾಯಪಟ್ಟಿದೆ. ಇನ್ನು ಯಾವುದೇ ಕೋರ್ಟ್‌ಗೆ ಹೋದರೂ ಅದೇ ವಾದವನ್ನು ಮಂಡಿಸಬೇಕಿದೆ. ಹೀಗಾಗಿ ರಾಜೀನಾಮೆ ಬಿಟ್ಟು ಬೇರೆ ದಾರಿ ಇಲ್ಲ. ರಾಜ್ಯದ ಜನರು ನನ್ನ ಜೊತೆಗಿದ್ದಾರೆ ಎಂದು ಸಿದ್ದರಾಮಯ್ಯ ಹೇಳಿದ್ದು, ಅದನ್ನು ಮೊದಲು ಸಾಬೀತಪಡಿಸಲಿ. ಚುನಾವಣೆ ನಡೆಸಿ ಎಷ್ಟು ಬೆಂಬಲ ಇದೆ ಎಂದು ತೋರಿಸಲಿ. ವಿಧಾನಸಭೆಯನ್ನು ವಿಸರ್ಜನೆ ಮಾಡಿ ಚುನಾವಣೆ ಎದುರಿಸಲಿ ಎಂದು ಸವಾಲೆಸೆದರು. ಇದು ರಾಜಕೀಯ ಪ್ರೇರಿತವಾಗಿದ್ದರೆ ಕೋರ್ಟ್‌ಗಳು ಏಕೆ ತೀರ್ಪು ನೀಡುತ್ತಿದ್ದವು? ಈ ರೀತಿ ಕಾಂಗ್ರೆಸ್ ಆರೋಪ ಮಾಡುವುದು ಒಂದು ರೀತಿ ದೊಂಬರಾಟವಾಗಿದೆ. ಮುಖ್ಯಮಂತ್ರಿ ಮತ್ತು ಉಪಮುಖ್ಯಮಂತ್ರಿ ನಡುವೆ ಮೊದಲಿಂದಲೂ ಸಮಸ್ಯೆ ಇದೆ. ಅನೇಕ ಬಾರಿ ಭಿನ್ನಮತ ಉಂಟಾಗಿದೆ. ಯಾರು ಸಿಎಂ ಆಗಬೇಕೆಂಬ ಚರ್ಚೆ ಕೂಡ ಕಾಂಗ್ರೆಸ್‌ನೊಳಗೆ ನಡೆಯುತ್ತಿದೆ. ಈ ಸಮಯದಲ್ಲಿ ಸಿದ್ದರಾಮಯ್ಯ ರಾಜೀನಾಮೆ ನೀಡುವುದು ಸೂಕ್ತ ಎಂದು ಅಶೋಕ್ ಹೇಳಿದರು.



• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣ ಸಂಬಂಧ ಸಿಎಂ ರಾಜೀನಾಮೆಗೆ ಪ್ರತಿಪಕ್ಷಗಳು ಆಗ್ರಹಿಸುತ್ತಿರುವುದರ ಜೊತೆಗೆ ಇದೀಗ ಸ್ವಪಕ್ಷೀಯರಿಂದಲೂ ಸಿದ್ದರಾಮಯ್ಯ ರಾಜೀನಾಮೆ ಕೂಗು ಕೇಳಿಬಂದಿದೆ. ಹೈಕೋರ್ಟ್, ಜನಪ್ರತಿನಿಧಿಗಳ ಕೋರ್ಟ್ ತೀರ್ಪಿನ ಹಿನ್ನೆಲೆ ಸಿಎಂ ಸಿದ್ದರಾಮಯ್ಯ ರಾಜೀನಾಮೆ ನೀಡುವುದು ಉತ್ತಮ ಎಂದು ಪಕ್ಷದ ಹಿರಿಯ ಮುಖಂಡ, ಮಾಜಿ ಸ್ಪೀಕರ್ ಕೆ.ಬಿ.ಕೋಳಿವಾಡ ಅಭಿಪ್ರಾಯಪಟ್ಟಿದ್ದಾರೆ. ತನಿಖೆ ಮುಗಿಯುವ ತನಕ ಸಿದ್ದರಾಮಯ್ಯ ರಾಜೀನಾಮೆ ನೀಡಲಿ. ತನಿಖೆಯಲ್ಲಿ ಆರೋಪ ಮುಕ್ತರಾದರೆ ಬಳಿಕ ಅವರು ಮತ್ತೆ ಸಿಎಂ ಆಗಿ ಮುಂದುವರಿಯಲಿ ಎಂದು ಒತ್ತಾಯಿಸಿದ್ದಾರೆ. ಪಕ್ಷಕ್ಕಾಗುವ ಮುಜುಗರ ತಪ್ಪಿಸಲು ಸಿದ್ದರಾಮಯ್ಯ ಸದ್ಯ ರಾಜೀನಾಮೆ ನೀಡುವುದು ಸೂಕ್ತ. ಬೇರೆ ರಾಜ್ಯಗಳಲ್ಲಿ ಚುನಾವಣೆ ನಡೆಯುತ್ತಿದೆ. ಅಲ್ಲೂ ಸಹ ಸಿಎಂ ವಿಚಾರ ಪ್ರಸ್ತಾಪಿಸಿ ಪ್ರತಿಪಕ್ಷಗಳು ರಾಜೀನಾಮೆ ವಿಚಾರ ಬಗ್ಗೆ ಮಾತನಾಡುತ್ತಿವೆ. ಪ್ರಧಾನಿ ಮೋದಿ ಹರಿಯಾಣ ರಾಜ್ಯದಲ್ಲಿ ಚುನಾವಣಾ ಪ್ರಚಾರ ವೇಳೆ ಈ ವಿಚಾರ ಪ್ರಸ್ತಾಪಿಸುತ್ತಿದ್ದಾರೆ. ಅದರಿಂದ ಪಕ್ಷಕ್ಕೆ ಮುಜುಗರ ಉಂಟಾಗುತ್ತಿದೆ. ಸಿದ್ದರಾಮಯ್ಯ ತಮ್ಮ ಸಿಎಂ ಸ್ಥಾನಕ್ಕೆ ರಾಜೀನಾಮೆ ಕೊಡುವುದು ಒಳಿತು ಎಂದು ಸಲಹೆ ನೀಡಿದರು.

ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನೈತಿಕ ಹೊಣೆ ಹೊತ್ತು ತಕ್ಷಣವೇ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕೆಂದು ಒತ್ತಾಯಿಸಿ ಪ್ರತಿಪಕ್ಷ ಬಿಜೆಪಿ ಬೃಹತ್ ಪ್ರತಿಭಟನೆ ನಡೆಸಿತು. ವಿಧಾನಸೌಧ ಹಾಗೂ ವಿಕಾಸಸೌಧದ ಮಧ್ಯಭಾಗದಲ್ಲಿರುವ ಗಾಂಧಿ ಪ್ರತಿಮೆ ಬಳಿ ನಡೆದ ಪ್ರತಿಭಟನೆಯಲ್ಲಿ ವಿಧಾನಸಭೆಯ ಪ್ರತಿಪಕ್ಷ ನಾಯಕ ಆರ್. ಅಶೋಕ್, ಉಪನಾಯಕ ಅರವಿಂದ್ ಬೆಲ್ಲದ್, ವಿಧಾನಪರಿಷತ್‌ನ ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದ ಗೋವಿಂದ ಕಾರಜೋಳ, ಶಾಸಕರಾದ ಅರಗ ಜ್ಞಾನೇಂದ್ರ, ಸುನೀಲ್‌ಕುಮಾರ್, ಜನಾರ್ಧನ ರೆಡ್ಡಿ, ಗೋಪಾಲಯ್ಯ, ಸಿದ್ದು ಸವದಿ, ಬಿ.ಸಿ.ಪಾಟೀಲ್ ಸೇರಿದಂತೆ ಬಹುತೇಕ ಎಲ್ಲಾ ಶಾಸಕರು ಭಾಗಿಯಾಗಿದ್ದರು.

ಅನಾರೋಗ್ಯದ ಹಿನ್ನಲೆ ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಗೈರು ಹಾಜರಾಗಿದ್ದರು. ಪ್ರತಿಭಟನೆಯಲ್ಲಿ ಭಾಗಿಯಾಗಿದ್ದ ಬಹುತೇಕ ಶಾಸಕರು ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಮತ್ತು ಸಿದ್ದರಾಮಯ್ಯ ವಿರುದ್ಧ ಧಿಕ್ಕಾರದ ಘೋಷಣೆಗಳನ್ನು ಕೂಗಿ ರಾಜೀನಾಮೆಗೆ ಒತ್ತಾಯಿಸಿದರು. ಬೇಕೇ ಬೇಕು ರಾಜೀನಾಮೆ ಬೇಕು. ಕೊಡಬೇಕು, ಕೊಡಬೇಕು ರಾಜೀನಾಮೆ ಕೊಡಬೇಕು, ಮುಡಾ ಸೈಟು ಹೊಡೆದ ಸಿದ್ದರಾಮಯ್ಯ, ಭ್ರಷ್ಟ ಮುಖ್ಯಮಂತ್ರಿ ಸಿದ್ದರಾಮಯ್ಯ ಎಂದು ಕೂಗಿ ರಾಜೀನಾಮೆಗೆ ಆಗ್ರಹಿಸಿದರು.

ಪ್ರತಿಭಟನೆಯಲ್ಲಿ ಮಾತನಾಡಿದ ಬಹುತೇಕ ನಾಯಕರು ನ್ಯಾಯಾಲಯವೇ ಎಫ್‌ಐಆರ್ ದಾಖಲಿಸಲು ಸಿದ್ದರಾಮಯ್ಯ ವಿರುದ್ಧ ಆದೇಶ ನೀಡಿದೆ.

ಇನ್ಯಾವ ಮುಖ ಹೊತ್ತು ಸಿಎಂ ಸ್ಥಾನದಲ್ಲಿ ಮುಂದುವರೆಯುತ್ತಾರೆ ಎಂದು ಪ್ರಶ್ನೆ ಮಾಡಿದರು. ಇನ್ನೊಬ್ಬರ ನೈತಿಕತೆ ಬಗ್ಗೆ ಮಾತನಾಡುವ ಸಿದ್ದರಾಮಯ್ಯನವರು ಅಧಿಕಾರದಲ್ಲಿ ಮುಂದುವರೆಯಲು ಭಂಡತನ ತೋರಬಾರದು. 40 ವರ್ಷ ರಾಜಕೀಯ ಜೀವನದಲ್ಲಿ ನನ್ನ ವಿರುದ್ಧ ಒಂದೇ ಒಂದು ಕಪ್ಪು ಚುಕ್ಕೆ ಇಲ್ಲ ಎನ್ನುತ್ತಿದ್ದ ಅವರ ಮುಖಕ್ಕೆ ಈಗ ಅಳಿಸಲಾಗದ ದೊಡ್ಡ ಕಪ್ಪುಚುಕ್ಕೆ ಅಂಟಿಕೊಂಡಿದೆ. ಅಧಿಕಾರದಲ್ಲಿ ಮುಂದುವರೆಯುವ ನೈತಿಕತೆಯನ್ನು ಕಳೆದುಕೊಂಡಿದ್ದಾರೆ ಎಂದು ಪ್ರತಿಭಟನಾನಿರತರು ವಾಗ್ದಾಳಿ ನಡೆಸಿದರು. ಸಿದ್ದರಾಮಯ್ಯನವರಿಗೆ ದೇಶದ ಕಾನೂನು ವ್ಯವಸ್ಥೆಯಲ್ಲಿ ನಂಬಿಕೆ ಇದ್ದರೆ ತಮ ಸ್ಥಾನಕ್ಕೆ ರಾಜೀನಾಮೆ ನೀಡಬೇಕು. ಒಂದು ವೇಳೆ ಪ್ರಕರಣದಲ್ಲಿ ಅವರ ಪಾತ್ರ ಏನೂ ಇಲ್ಲ ಎಂದು ಸಾಬೀತಾದರೆ ಪುನಃ ಅವರೇ ಅಧಿಕಾರದಲ್ಲಿ ಮುಂದುವರೆಯಲಿ. ಅವರು ಅಧಿಕಾರದಲ್ಲಿರುವಾಗ ನಿಷ್ಪಕ್ಷಪಾತ ತನಿಖೆ ನಡೆಯಲು ಸಾಧ್ಯವಿಲ್ಲ. ಹೀಗಾಗಿ ನೈತಿಕತೆ ಹೊಣೆ ಹೊತ್ತು ರಾಜೀನಾಮೆ ನೀಡಲಿ. ಇಲ್ಲದಿದ್ದರೆ ರಾಜ್ಯಪಾಲರು ಮಧ್ಯಪ್ರವೇಶ ಮಾಡಬೇಕೆಂದು ಆಗ್ರಹಿಸಿದರು. ಪ್ರತಿಭಟನೆ ಬಳಿಕ ಶಾಸಕರು ವಿಧಾನಸೌಧದೊಳಗೆ ನುಗ್ಗಲು ಯತ್ನಿಸಿದಾಗ ಪೊಲೀಸರು ಕೆಂಗಲ್ ಗೇಟ್ ಬಳಿಯೇ ಪ್ರತಿಭಟನಾಕಾರರನ್ನು ತಡೆದರು. ಈ ವೇಳೆ ಬಿಜೆಪಿ ನಾಯಕರು ಹಾಗೂ ಪೊಲೀಸರ ನಡುವೆ ವಾಗ್ವಾದ ನಡೆಯಿತು. ಪರಿಸ್ಥಿತಿ ವಿಕೋಪಕ್ಕೆ ಹೋಗುತ್ತಿದ್ದಂತೆ ಬಿಜೆಪಿ ನಾಯಕರನ್ನು ಪೊಲೀಸರು ಬಂಧಿಸಿದರಲ್ಲದೆ, ತೀವ್ರ ಪ್ರತಿಭಟನೆಗಿಳಿದ ಅಶೋಕ್, ಛಲವಾದಿ, ಸಿಟಿ ರವಿ, ಸುನೀಲ್ ಕುಮಾರ್ ಸೇರಿ ಹಲವು ನಾಯಕರನ್ನು ಹೊತ್ತೊಯ್ದು ಬಸ್‌ನೊಳಗೆ ಬಲವಂತವಾಗಿ ನುಗ್ಗಿಸಿದರು.

### ಮೇಲ್ಮನವಿಗೆ ಸಿದ್ಧತೆ

ಇನ್ನು ಹೈಕೋರ್ಟ್ ನೀಡಿರುವ ತೀರ್ಪು ಪ್ರಶ್ನಿಸಿ ಸಿಎಂ ಸಿದ್ದರಾಮಯ್ಯ ಅವರು ವಿಭಾಗೀಯ ಪೀಠದಲ್ಲಿ ಮೇಲ್ಮನವಿ ಸಲ್ಲಿಸಲಿದ್ದಾರೆ. ವಿಭಾಗೀಯ ಪೀಠ ಯಾವಾಗ ವಿಚಾರಣೆಯನ್ನು ಕೈಗೆತ್ತಿಕೊಳ್ಳಲಿದೆ ಎಂಬುವುದು ಕುತೂಹಲಕ್ಕೆ ಕಾರಣವಾಗಿದೆ.

### ಮೊದಲು ವಿರೋಧ ಪಕ್ಷದವರು ರಾಜೀನಾಮೆ ನೀಡಲಿ

ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ಅವರು ತಪ್ಪು ಮಾಡಿಲ್ಲ. ಹಾಗಿರುವಾಗ ರಾಜೀನಾಮೆ ಕೊಡುವ ಪ್ರಶ್ನೆಯೇ ಬರುವುದಿಲ್ಲ. ವಿರೋಧ ಪಕ್ಷಗಳ ನಾಯಕರ ವಿರುದ್ಧವೂ ಆರೋಪಗಳು ಇವೆ. ಹಾಗಾಗಿ ಮೊದಲು ವಿರೋಧ ಪಕ್ಷಗಳ ನಾಯಕರು ರಾಜೀನಾಮೆ ನೀಡಲಿ ಎಂದು ಡಿಸಿಎಂ ಡಿಕೆ ಶಿವಕುಮಾರ್ ವಾಗ್ದಾಳಿ ನಡೆಸಿದರು. ಸಿದ್ದರಾಮಯ್ಯ ಅವರ ರಾಜೀನಾಮೆ ಆಗ್ರಹಿಸಿ ವಿಧಾನಸೌಧದ ಗಾಂಧಿ ಪ್ರತಿಮೆ ಬಳಿ ಬಿಜೆಪಿ, ಜೆಡಿಎಸ್ ನಾಯಕರು ಪ್ರತಿಭಟನೆ ನಡೆಸುವ ಬಗ್ಗೆ ಕೇಳಿದಾಗ, ಯಾವ ಪ್ರಕರಣದಲ್ಲಿ ಯಾವ ಯಾವ ಕೇಂದ್ರ ಸಚಿವರ ವಿರುದ್ಧ ತನಿಖೆ ನಡೆಯುತ್ತಿದೆ. ಅವರು ಅಧಿಕಾರದಲ್ಲಿ ಮುಂದುವರಿದಿಲ್ಲವೇ? ಮೊದಲು ಅವರ ರಾಜೀನಾಮೆ ತೆಗೆದುಕೊಳ್ಳಿ. ನಂತರ ನಮ್ಮ ಮುಖ್ಯಮಂತ್ರಿಗಳ ರಾಜೀನಾಮೆ ಬಗ್ಗೆ ಚರ್ಚೆ ಮಾಡೋಣ ಎಂದು ತಿಳಿಸಿದರು.



## ವಿಧಾನಸೌಧಕ್ಕೆ ಬೀಗ ಹಾಕಲೆತ್ನಿಸಿದ ಬಿಜೆಪಿ ನಾಯಕರು

• ಉದಯವಾಹಿನಿ, ಬೆಂಗಳೂರು

ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ ನಡೆಸುತ್ತಿರುವ ರಾಜ್ಯ ಬಿಜೆಪಿ ನಾಯಕರು ಇಂದು ವಿಧಾನಸೌಧಕ್ಕೆ ಬೀಗ ಹಾಕಲು ಯತ್ನಿಸಿದರು. ಈ ವೇಳೆ ಅವರನ್ನು ಪೊಲೀಸರು ಬಂಧಿಸಿದ್ದಾರೆ. ಮೊದಲು ವಿಧಾನಸೌಧದ ಮುಂಭಾಗ ಗಾಂಧಿ ಪ್ರತಿಮೆಯ ಮುಂದೆ ಭಿತ್ತಿಪತ್ರಗಳನ್ನು ಹಿಡಿದು ಬಿಜೆಪಿ ಶಾಸಕರು, ಸಂಸದರು ಘೋಷಣೆಗಳನ್ನು ಕೂಗುತ್ತಾ ಪ್ರತಿಭಟನೆ ನಡೆಸಿದರು.

ಇದಾಗಿ ಕೆಲ ಹೊತ್ತಿನ ಬಳಿಕ ವಿಧಾನಸೌಧಕ್ಕೆ ಮುತ್ತಿಗೆ ಹಾಕಿದ್ದಾರೆ. ಈ ವೇಳೆ ವಿಧಾನಸೌಧಕ್ಕೆ ಬೀಗ ಜಡಿಯಲೂ ಮುಂದಾಗಿದ್ದಾರೆ.

ವಿಧಾನಪರಿಷತ್ ನಾಯಕ ಛಲವಾದಿ ನಾರಾಯಣಸ್ವಾಮಿ ದೊಡ್ಡ ಗಾತ್ರದ ಬೀಗ ಹಿಡಿದು ಪ್ರತಿಭಟನೆ ನಡೆಸಿದ್ದಾರೆ. ಈ ವೇಳೆ ಪೊಲೀಸರು ಬಿಜೆಪಿ ನಾಯಕರನ್ನು ಬಂಧಿಸಿ ಹೊರಗೆ ಕರೆದೊಯ್ದಿದ್ದಾರೆ.



**ಕೈಕಾಲೆತ್ತಿ ಹೊರಗೆ ಕಳುಹಿಸಿದ ಪೊಲೀಸರು**

ಇಂದು ಬಿಜೆಪಿ ನಾಯಕರು ಹೊರಗೆ ಪ್ರತಿಭಟನೆ ನಡೆಸುತ್ತಿದ್ದಾಗ ಸಿಎಂ ಸಿದ್ದರಾಮಯ್ಯ ಕೂಡಾ ಒಳಗಿದ್ದರು. ಇನ್ನು, ಬಿಜೆಪಿ ನಾಯಕರು ವಿಧಾನಸೌಧಕ್ಕೆ ಮುತ್ತಿಗೆ ಹಾಕಲಿದ್ದಾರೆ ಎಂದು ಮೊದಲೇ ಮಾಹಿತಿಯಿದ್ದಿದ್ದರಿಂದ ಪೊಲೀಸರು ಭಾರೀ ಸಂಖ್ಯೆಯಲ್ಲಿ ಇದ್ದು ಭದ್ರತೆ ಒದಗಿಸಿದ್ದರು. ಪೊಲೀಸರ ಕಣ್ಣು ತಪ್ಪಿಸಿ ಅರವಿಂದ್ ಬೆಲ್ಲದ ಬೀಗ ಹಾಕಲೆತ್ನಿಸಿದರು. ಆಗ ಹೈಡ್ರಾಮಾವೇ ನಡೆಯಿತು. ಕೊನೆಗೆ ಪೊಲೀಸರು ಎಲ್ಲಾ ನಾಯಕರನ್ನು ವಶಕ್ಕೆ ಪಡೆದರು.

## ಎಸ್‌ಪಿಯನ್ನ ಸಿಎಂ ಕಿಡ್ನಾಪ್ ಮಾಡಿಸಿರಬಹುದು

• ಉದಯವಾಹಿನಿ, ಮೈಸೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ನಿನ್ನೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯವು ಸಿಎಂ ಸಿದ್ದರಾಮಯ್ಯ ವಿರುದ್ಧ ಲೋಕಾಯುಕ್ತ ತನಿಖೆಗೆ ಆದೇಶ ನೀಡಿದೆ. ಡಿಸೆಂಬರ್ 24ರ ಒಳಗಾಗಿ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ತಿಳಿಸಿದೆ. ಇದರ ಬೆನ್ನಲ್ಲೇ ದೂರುದಾರ ಸ್ನೇಹಮಯಿ ಕೃಷ್ಣ ಎಫ್‌ಐಆರ್ ದಾಖಲಿಸಲು ಲೋಕಾಯುಕ್ತ ಎಸ್ ಪಿ ಕಾಣಿಸುತ್ತಿಲ್ಲ ಬಹುಶಹ ಸಿಎಂ ಸಿದ್ದರಾಮಯ್ಯ ಅವರೇ ಕಿಡ್ನ್ಯಾಪ್ ಮಾಡಿಸಿರಬಹುದು ಎಂದು ಆರೋಪಿಸಿದರು.



ಲೋಕಾಯುಕ್ತ ಎಸ್.ಪಿ ವಿರುದ್ಧವೇ ದೂರು ಕೊಡುತ್ತೇನೆ. ಸಿಎಂ ವಿರುದ್ಧ ದೂರುದಾರ ಸ್ನೇಹಮಯಿ ಕೃಷ್ಣ ಲೋಕಾಯುಕ್ತ ಎಸ್ಪಿ ನಾಪತ್ತೆಯಾಗಿದ್ದಾರೆ. ಫೋನ್ ತೆಗಿತಿಲ್ಲ ಎಸ್ ಪಿ ಕಾಣೆಯಾಗಿದ್ದಾರೆ ಎಂದು ದೂರು ಕೊಡುತ್ತೇನೆ. ಸಿದ್ದರಾಮಯ್ಯ ಕಿಡ್ನಾಪ್ ಮಾಡಿಸಿದ್ದರು ಮಾಡಿರಬಹುದು ಮೈಸೂರಿನಲ್ಲಿ ದೂರುದಾರ ಸ್ನೇಹಮಯಿ ಕೃಷ್ಣ ಆರೋಪಿಸಿದ್ದಾರೆ.

ಮಧ್ಯಾಹ್ನ 3 ಗಂಟೆ ಒಳಗೆ ಎಫ್‌ಐಆರ್ ಹಾಕದಿದ್ದರೆ ಎಸ್ ಪಿ ವಿರುದ್ಧವೇ ದೂರು ನೀಡುತ್ತೇನೆ. ಲೋಕಾಯುಕ್ತ ಎಸ್ ಪಿ ಕಾಣೆಯಾಗಿದ್ದಾರೆ ಅಂತ ಅನಿಸುತ್ತಿದೆ. ಮಧ್ಯಾಹ್ನ 3 ಗಂಟೆ ವರೆಗೆ ಲೋಕಾಯುಕ್ತ ಕಚೇರಿಯಲ್ಲಿ ಇರುತ್ತೇನೆ. ಒಂದು ವೇಳೆ ಬರೆದಿದ್ದರೆ ಎಸ್ ಪಿ ಹುಡುಕಿ ಕೊಡಿ ಎಂದು ದೂರು ಕೊಡಬೇಕಾಗುತ್ತದೆ ಎಂದರು.

# 5800 ಎಕರೆಯಲ್ಲಿ 'ಕ್ವಿನ್ ಸಿಟಿ' ನಿರ್ಮಾಣಕ್ಕೆ ಸಿಎಂ ಗ್ರೀನ್ ಸಿಗ್ನಲ್

## ಸ್ಯಾಟ್‌ಲೈಟ್ ಟೌನ್ ರಿಂಗ್ ರಸ್ತೆಯ ಆಸುಪಾಸಿನಲ್ಲಿ ಸುಮಾರು 2000 ಎಕರೆ ಜಾಗದಲ್ಲಿ ಹೊಸ ಕ್ವಿನ್ ಸಿಟಿ ನಿರ್ಮಾಣ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದ ಮಹತ್ವಾಕಾಂಕ್ಷೆಯ ನೂತನ 'ಜ್ಞಾನ, ಆರೋಗ್ಯ ಮತ್ತು ಸಂಶೋಧನಾ ನಗರ' ನಿರ್ಮಾಣ ಯೋಜನೆಯ ಕಾಮಗಾರಿಗೆ ಸಿಎಂ ಸಿದ್ದರಾಮಯ್ಯ ಅವರು ಹಸಿರು ನಿಶಾನೆ ತೋರಿಸಿದರು. 2000 ಎಕರೆಯಲ್ಲಿ ಯೋಜನೆ ಮೊದಲ ಹಂತದ ಕಾಮಗಾರಿ ಆರಂಭವಾಯಿತು.

**ಮೊದಲ ಹಂತದ ಕಾಮಗಾರಿ ಆರಂಭ**

ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ನಡೆದ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಬೆಂಗಳೂರು ಸಮೀಪದ ಡಾಬಸಪೇಟೆ ಮತ್ತು ದೊಡ್ಡಬಳ್ಳಾಪುರದ ಮಧ್ಯದಲ್ಲಿ ಸ್ಯಾಟ್‌ಲೈಟ್ ಟೌನ್ ರಿಂಗ್ ರಸ್ತೆಯ ಆಸುಪಾಸಿನಲ್ಲಿ ಸುಮಾರು 2000 ಎಕರೆ ಜಾಗದಲ್ಲಿ ಹೊಸ ಕ್ವಿನ್ ಸಿಟಿ ನಿರ್ಮಿಸಲಾಗುತ್ತಿದೆ.

ಈ ಯೋಜನೆ ಮೂಲಕ ಕರ್ನಾಟಕ ದೇಶದ ಜ್ಞಾನಾಧಾರಿತ ಆರ್ಥಿಕತೆಯಲ್ಲಿ ಪ್ರಥಮ ಸ್ಥಾನಕ್ಕೇರಲಿದೆ. ಈ ಕ್ವಿನ್ ಸಿಟಿಯು ಕರ್ನಾಟಕ ಮತ್ತು ಭಾರತದ ಮಟ್ಟಿಗೆ ಹೊಸ ಭಾಷ್ಯ ಬರೆಯಲಿದೆ. ಸಾಕಷ್ಟು ರಂಗಗಳಿಗೆ ಉತ್ತೇಜನ




ನೀಡುವ ಈ ಸಿಟಿಯಲ್ಲಿ ಜಾಗತಿಕ ಮಟ್ಟದ ಸಹಭಾಗಿತ್ವ ಮತ್ತು ನಾವೀನ್ಯತೆಗಳಿಗೆ ಆದ್ಯತೆ ಸಿಗಲಿದೆ. ಇಲ್ಲಿನ ಜೀವನ ಶೈಲಿ 'ಸ್ಮಾರ್ಟ್ ಲಿವಿಂಗ್' ಆಗಿರಲಿದೆ ಎಂದು ಅವರು ಹೇಳಿದರು. ಇದೇ ವೇಳೆ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಮಾತನಾಡಿ, ಬೆಂಗಳೂರಿನ ಕೈಗಾರಿಕಾ ಬೆಳವಣಿಗೆಗೆ ಹೇರಳ ಅವಕಾಶಗಳಿದ್ದು, ಅವೆಲ್ಲವನ್ನು ನಮ್ಮ ಸರ್ಕಾರ ಸಾಕಾರಗೊಳಿಸಲು ಬದ್ಧವಾಗಿದೆ. ಎರಡು ವಾರಗಳಲ್ಲಿ ಕಾವೇರಿ 5ನೇ ಹಂತದ ಕುಡಿವ ನೀರು ಪೂರೈಕೆ ಆರಂಭವಾಗಲಿದೆ. ಈ ಯೋಜನೆ ಆರಂಭವಾದ ಬಳಿಕ ರಾಜಧಾನಿಯಲ್ಲಿ ಮುಂದಿನ ಎರಡು ದಶಕಗಳ (20 ವರ್ಷ) ಕಾಲ ಕುಡಿಯುವ ನೀರಿನ ಕೊರತೆಯಾಗಲಿ, ವಿದ್ಯುತ್ ಸಮಸ್ಯೆ ಆಗಲಿ ತಲೆದೂರುವುದಿಲ್ಲ. ಇನ್ನು ಟ್ರಾಫಿಕ್ ವ್ಯವಸ್ಥೆಯಲ್ಲಿ ಸಮಸ್ಯೆ ಇರುವುದು ನಿಜ. ಅದನ್ನು ಕ್ಷಿಪ್ರಗತಿಯಲ್ಲಿ ಬಗೆಹರಿಸಲು ಸರ್ಕಾರ ದಿಟ್ಟ ಹೆಜ್ಜೆ ಇಡಲಿದೆ. ರಾಜ್ಯದಲ್ಲಿ ಇರುವಷ್ಟು ಕೈಗಾರಿಕೆಗಳಿಗೆ ಬೇಕಾದ ಅಗತ್ಯ ಸಂಪನ್ಮೂಲ ಬೇರೆಲ್ಲೂ ಸಿಗುವುದಿಲ್ಲ ಎಂದು ಅವರು ಹೇಳಿದರು.

ಸಮಾರಂಭದಲ್ಲಿ ಕೈಗಾರಿಕೆ ಸಚಿವ ಎಂಬಿ ಪಾಟೀಲ್ ಅವರು ಮಾತನಾಡಿ, ಆರಂಭದಲ್ಲಿ 2000 ಎಕರೆ ಯೋಜನೆ ಆರಂಭಿಸಲಾಗುವುದು.

ಮೊದಲ ಹಂತದಲ್ಲಿ 500 ಎಕರೆಯಲ್ಲಿ ಯೋಜನೆ ಆರಂಭಿಸಲಾಗುವುದು ಎನ್ನಲಾಗಿತ್ತು. ಆದರೆ ಈಗ ಕ್ವಿನ್ ಸಿಟಿ ಯೋಜನೆ ಒಟ್ಟಾರೆ 5,800 ಎಕರೆಯಲ್ಲಿ ಅಭಿವೃದ್ಧಿ ಆಗಲಿದೆ. ಪ್ರಥಮ ಹಂತದಲ್ಲಿ 2,000 ಎಕರೆಯಲ್ಲಿ ಸಾಕಾರಗೊಳ್ಳಲಿದೆ.

### ವೈದ್ಯಕೀಯ ಪ್ರವಾಸೋದ್ಯಮಕ್ಕೆ ಉತ್ತೇಜನ

ಈ ವಿನೂತನ ನಗರದಲ್ಲಿ ಐದು ಲಕ್ಷ ಜನರು ವಾಸಿಸಲಿದ್ದಾರೆ. ವಿನೂತನ ನಗರದ ಪರಿಧಿಯಲ್ಲಿ ಶೇಕಡಾ 40ರಷ್ಟು ಜಾಗದಲ್ಲಿ ಉದ್ಯಾನಗಳು ತಲೆಎತ್ತಲಿವೆ. 0.69 ಮೆಗಾವ್ಯಾಟ್ ಸಾಮರ್ಥ್ಯದ ಸೌರ ವಿದ್ಯುತ್ ಘಟಕಕ್ಕೆ 465 ಎಕರೆ, ವರ್ಷಕ್ಕೆ 7 ಸಾವಿರ ಟನ್ ಹಣ್ಣು-ತರಕಾರಿ ಬೆಳೆಯಲು 200 ಎಕರೆ, ಶೇಕಡ 50ರಿಂದ 70ರಷ್ಟು ಜಲ ಮರುಪೂರಣ ವ್ಯವಸ್ಥೆ ಇರಲಿದೆ ಎಂದು ವಿವರಿಸಿದರು. ಈ ನಗರದಲ್ಲಿ ಗುಣಮಟ್ಟದ ಶಾಲಾ ಕಾಲೇಜು, ವಿಶ್ವವಿದ್ಯಾಲಯಗಳ ಸ್ಥಾಪನೆ ಆಗಲಿವೆ. ಜಗತ್ತಿನ 500 ವಿಶ್ವವಿದ್ಯಾಲಯಗಳ ಕ್ಯಾಂಪಸ್ ತೆರೆಯಲಾಗುತ್ತದೆ. ಉನ್ನತ ದರ್ಜೆಯ ದರ್ಜೆಯ ಆಸ್ಪತ್ರೆಗಳು, ವೈದ್ಯಕೀಯ ಸಂಶೋಧನಾ ಸಂಸ್ಥೆಗಳು ಮತ್ತು ವೈದ್ಯಕೀಯ ಪ್ರವಾಸೋದ್ಯಮಕ್ಕೆ ಉತ್ತೇಜನ ನೀಡಲಾಗುವುದು. 40 ಸಾವಿರ ಕೋಟಿ ರೂ. ಹೂಡಿಕೆಯ ಯೋಜನೆ ಎಂದು ಅವರು ತಿಳಿಸಿದರು.

**ಈ ದಿನದ ದರ** ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,702/Gram24ct ₹7,060/Gram22ct | ಬೆಳ್ಳಿ: ₹95.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ ರಾಮೋಹಳ್ಳಿ**

## ನಾತ್ಮಾನಂ ಅವಸಾದಯೇತ್

ತನ್ನನ್ನು ತಾನು ಸಾಯಿಸಿಕೊಳ್ಳಬಾರದು. ಭಗವದ್ಗೀತೆಯ ಮಾತು. ಬೇಗ ಸಾಯಿ ಎಂದರೆ ಎಲ್ಲಿಲ್ಲದ ಸಿಟ್ಟು. ಸಾವು ಅಪಶಕುನ, ಹೇಳಬಾರದು ಎನ್ನುತ್ತೇವೆ. ನಾವೇ ನಾವಾಗಿ ಸಾಯುವುದುಂಟು. ಇದೇ ಆಶ್ಚರ್ಯ. ಬದುಕಿಗಾಗಿ ಕೊಲೆ. ಆದರೂ ಬದುಕಲಾಗದು. ನೇಪಾಳ ಮೂಲದ ಬೆಂಗಳೂರಿನ ಮಹಾಲಕ್ಷ್ಮೀಯನ್ನು ಒಡಿಶಾದ ಮುಕ್ತಿರಂಜನರಾಯ್ ಪ್ರೀತಿಸಿದ. ಮದುವೆಯಾಗೆಂದು ಹಣ ಕೊಡು ಎಂದು ಪೀಡಿಸಿದಾಗ ಅವಳನ್ನು ಸಾಯಿಸಿ ಐವತ್ತೊಂಭತ್ತು ತುಂಡು ಮಾಡಿ ಫ್ರಿಜ್ನಲ್ಲಿಟ್ಟು ಪರಾರಿಯಾದ. ಒಡಿಶಾದಲ್ಲಿ ಮರಕ್ಕೆ ನೇಣು ಹಾಕಿಕೊಂಡು ಸತ್ತ. ಗೋವಾದ ಉದ್ಯಮಿ ಗುರುಪ್ರಸಾದ್ ಸುಪಾರಿ ನೀಡಿ ಕಾರವಾರ ಬಳಿ ಉದ್ಯಮಿ ವಿನಾಯಕ ನಾಯ್ಕ ಅವರನ್ನು ಹತ್ಯೆ ಮಾಡಿಸಿದ. ಬಳಿಕ ಗುರುಪ್ರಸಾದ್ ಗೋವಾದ ನದೀ ತೀರದಲ್ಲಿ ಆತ್ಮಹತ್ಯೆ ಮಾಡಿಕೊಂಡ. ಸಾಯಿಸಿಯೂ ಸಾಯುವುದೇಕೆ? ಕೆಲ ಮುಗ್ಧ ನಿರಪರಾಧಿಗಳು ಹಿಂಸೆ ತಾಳದೇ ಸಾಯುವರು. ಸಾಲದ ಬಾಧೆಯಿಂದ ನಷ್ಟದಿಂದ ಸಾಯುವವರನೇಕರು. ಹತ್ಯೆಗೆ ಒಳಗಾಗುವುದು ಮತ್ತು ಆತ್ಮಹತ್ಯೆ ಈ ಎರಡೂ ಒಂದರ್ಥದಲ್ಲಿ ತನ್ನನ್ನು ತಾನೇ ಸಾಯಿಸಿಕೊಂಡಂತೆ. ಗೀತೆ ಹೇಳುವುದು, ಹೀಗಾಗಬಾರದು. ಹತ್ಯೆಗೆ ಒಳಗಾಗುವಂಥ ದುರ್ಬಲತೆ ಇರಕೂಡದು. ಜೀವ ತೆಗೆಯುವ ಹಕ್ಕು ಯಾರಿಗೂ ಇಲ್ಲ. ಅದು ಪರಿಹಾರವಲ್ಲ. ಆತ್ಮಹತ್ಯೆಯನ್ನು ಮಾಡಿಕೊಳ್ಳುವ ಅನಿವಾರ್ಯತೆಗೆ ಕಾರಣವಾಗುವ ಅಪರಾಧ ತಪ್ಪು ನಿರ್ಧಾರ ತೆಗೆದುಕೊಳ್ಳಬಾರದು. ಅಮೂಲ್ಯ ಜೀವವನ್ನು ದೀರ್ಘಾವಧಿ ಉಳಿಸಿಕೊಳ್ಳುವ ಜಾಣ ನಡೆ ಇರಲಿ.

## ಎನ್‌ಐಎ ಭರ್ಜರಿ ಬೇಟೆ : ಶಂಕಿತ ಉಗ್ರನ ಹೆಡೆಮುರಿ ಕಟ್ಟಿದ ಅಧಿಕಾರಿಗಳು

• ಉದಯವಾಹಿನಿ ಬೆಂಗಳೂರು



ಉದಯವಾಹಿನಿ ಚಿತ್ರ

ಬೆಂಗಳೂರಿನಲ್ಲಿ ಎನ್‌ಐಎ ಅಧಿಕಾರಿಗಳು ಭರ್ಜರಿ ಕಾರ್ಯಾಚರಣೆ ನಡೆಸಿದ್ದು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆನೇಕಲ್ ತಾಲೂಕಿನ ಜಿಗಣಿ ಪ್ರದೇಶದಲ್ಲಿ ಶಂಕಿತ ಉಗ್ರನೊಬ್ಬನನ್ನು ಬಂಧಿಸಿದ್ದಾರೆ. ಹೌದು ಜಿಗಣಿಯಲ್ಲಿ ಗಿರೀಶ್ ಬೋರಾ ಅಲಿಯಾಸ್ ಗೌತಮ್ ಎಂಬ ಶಂಕಿತ ಉಗ್ರನನ್ನು ಎನ್ ಐ ಎ ಅಧಿಕಾರಿಗಳು ಅರೆಸ್ಟ್ ಮಾಡಿದ್ದಾರೆ.ಖಚಿತ ಮಾಹಿತಿಯ ಮೇರೆಗೆ ಎನ್‌ಐಎ ಅಧಿಕಾರಿಗಳು ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಆನೇಕಲ್ ತಾಲ್ಲೂಕಿನ ಜಿಗಣಿ ಪ್ರದೇಶಕ್ಕೆ ತೆರಳಿದ್ದಾರೆ. ಈ ವೇಳೆ ಗಿರೀಶ್ ಬೋರಾ ಅಲಿಯಾಸ್ ಗೌತಮನನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ ಎಂದು ತಿಳಿದುಬಂದಿದೆ.

## ವಿಧಾನಸೌಧ, ವಿಕಾಸಸೌಧದಲ್ಲೂ ಶಾಸಕ ಮುನಿರತ್ನರೇ : ಸಂತ್ರಸ್ತೆ ಸ್ಫೋಟಕ ಹೇಳಿಕೆ

• ಉದಯವಾಹಿನಿ ಬೆಂಗಳೂರು

ಮಹಿಳೆ ಮೇಲಿನ ಅತ್ಯಾಚಾರ ಪ್ರಕರಣದಲ್ಲಿ ಬಿಜೆಪಿ ಶಾಸಕ ಮುನಿರತ್ನ ಜೈಲುಪಾಲಾಗಿದ್ದಾರೆ. ಅವರ ವಿರುದ್ಧ ಈಗ ಸಂತ್ರಸ್ತೆ ಮತ್ತೊಂದು ಸ್ಫೋಟಕ ಹೇಳಿಕೆ ಹೊರ ಹಾಕಿದ್ದಾರೆ. ಅದೇ ಶಾಕಿಂಗ್ ಎನ್ನುವಂತೆ ಮುನಿರತ್ನ ತಮ್ಮ ಮೇಲೆ ವಿಧಾನಸೌಧ, ವಿಕಾಸಸೌಧದಲ್ಲೂ ಅತ್ಯಾಚಾರ ಎಸಗಿರುವುದಾಗಿ ಹೇಳಿದ್ದಾರೆ. ಬಿಜೆಪಿ ಶಾಸಕ ಮುನಿರತ್ನ ಅವರ ವಿರುದ್ಧ ಅತ್ಯಾಚಾರ ಆರೋಪ ಕೇಳಿ ಬಂದಿತ್ತು. ಆ ಸಂಬಂಧ ಕೇಸ್ ದಾಖಲಾಗಿ, ಮುನಿರತ್ನ ಜೈಲುಪಾಲಾಗಿದ್ದಾರೆ. ಅವರ ವಿರುದ್ಧ ಅತ್ಯಾಚಾರ ಆರೋಪ ಮಾಡಿರುವಂತ ಸಂತ್ರಸ್ತೆಯನ್ನು ಪೊಲೀಸರು ವಿಚಾರಣೆಗೆ ಒಳಪಡಿಸಿದ್ದು, ವಿಚಾರಣೆ ವೇಳೆ ಮತ್ತೊಂದು ಶಾಕಿಂಗ್ ಹೇಳಿಕೆ ನೀಡಿದ್ದಾರೆ. ಪೊಲೀಸರ ಮುಂದೆ ವಿಚಾರಣೆಯ ವೇಳೆಯಲ್ಲಿ ಸಂತ್ರಸ್ತ ಮಹಿಳೆಯು ಬಿಜೆಪಿ ಶಾಸಕ ಮುನಿರತ್ನ ಅವರು ವಿಧಾನಸೌಧ ಹಾಗೂ ವಿಕಾಸಸೌಧದಲ್ಲಿಯೂ ನನ್ನ ಮೇಲೆ ರೇಪ್ ಮಾಡಿದ್ದಾರೆ ಎಂಬುದಾಗಿ ಸ್ಫೋಟಕ ಮಾಹಿತಿ ಬಿಚ್ಚಿಟ್ಟಿದ್ದಾರೆ ಎನ್ನಲಾಗಿದೆ. 2020ರಿಂದ 2023ರವರೆಗೆ ತನ್ನ ಮೇಲೆ ಅತ್ಯಾಚಾರ ನಡೆಸಲಾಗಿದೆ. ಮುನಿರತ್ನ ಸಚಿವರಾಗಿದ್ದಾಗ ಕಚೇರಿ ಕರೆಸಿಕೊಂಡಿದ್ದರು. ಇದೇ ಕಚೇರಿಯಲ್ಲಿ ನನ್ನ ಮೇಲೆ ಅತ್ಯಾಚಾರ ನಡೆಸಲಾಗಿದೆ ಎಂಬುದಾಗಿ ಆರೋಪಿಸಿದ್ದಾರೆ.

## ರಾಜ್ಯ ಸರ್ಕಾರದಿಂದ ವರ್ಷದ ಅತ್ಯುತ್ತಮ ಕಂದಾಯ ಅಧಿಕಾರಿ-2024 ಪ್ರಶಸ್ತಿ ಪ್ರಕಟ

• ಉದಯವಾಹಿನಿ ಬೆಂಗಳೂರು

ಕಂದಾಯ ಇಲಾಖೆಯ ವಿವಿಧ ಸೇವೆಗಳನ್ನು ಸಾರ್ವಜನಿಕರಿಗೆ ಅತ್ಯುತ್ತಮವಾಗಿ ಒದಗಿಸಿರುವ ಕಂದಾಯ ಅಧಿಕಾರಿಗಳ ಶ್ರೇಷ್ಠ ಸೇವೆಯನ್ನು ಗುರುತಿಸಿ ಜಿಲ್ಲಾಧಿಕಾರಿಗಳಿಗೆ, ಸಹಾಯಕ ಆಯುಕ್ತರುಗಳಿಗೆ, ತಹಶೀಲ್ದಾರಗಳಿಗೆ ಹಾಗೂ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸರ್ಕಾರವು ವರ್ಷದ ಅತ್ಯುತ್ತಮ ಕಂದಾಯ ಅಧಿಕಾರಿ-2024 ಪ್ರಶಸ್ತಿಯನ್ನು ಘೋಷಿಸಲಾಗಿದೆ. ರಾಜ್ಯ ಸರ್ಕಾರವು ವರ್ಷದ ಅತ್ಯುತ್ತಮ ಕಂದಾಯ ಅಧಿಕಾರಿ-2024 ಪ್ರಶಸ್ತಿಗಳನ್ನು ಘೋಷಿಸಿದ್ದು, ಕಂದಾಯ ಇಲಾಖೆಯ ವಿವಿಧ ಸೇವೆಗಳನ್ನು ಸಾರ್ವಜನಿಕರಿಗೆ ಅತ್ಯುತ್ತಮವಾಗಿ ಒದಗಿಸಿರುವ ಕಂದಾಯ ಅಧಿಕಾರಿಗಳ ಶ್ರೇಷ್ಠ ಸೇವೆಯನ್ನು ಗುರುತಿಸಿ ಜಿಲ್ಲಾಧಿಕಾರಿಗಳಿಗೆ, ಸಹಾಯಕ ಆಯುಕ್ತರುಗಳಿಗೆ, ತಹಶೀಲ್ದಾರಗಳಿಗೆ ಹಾಗೂ ಗ್ರಾಮ ಆಡಳಿತ ಅಧಿಕಾರಿಗಳಿಗೆ ಸರ್ಕಾರವು ವರ್ಷದ ಅತ್ಯುತ್ತಮ ಕಂದಾಯ ಅಧಿಕಾರಿ-2024 ಪ್ರಶಸ್ತಿಯನ್ನು ನೀಡಲು ಹರ್ಷಿಸುತ್ತದೆ. ಈ ಹಿನ್ನೆಲೆಯಲ್ಲಿ ದಿನಾಂಕ:27.09.2024 ರಂದು ಬೆಳಿಗ್ಗೆ 10 ಗಂಟೆಗೆ ಮಾನ್ಯ ಕಂದಾಯ ಸಚಿವರ ಅಧ್ಯಕ್ಷತೆಯಲ್ಲಿ, ವಿಕಾಸ ಸೌಧ, ಕೊಠಡಿ ಸಂಖ್ಯೆ 419 ರಲ್ಲಿ ನಡೆಯಲಿರುವ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ಹಾಗೂ ಅಭಿನಂದನಾ ಸಭೆಯಲ್ಲಿ ವರ್ಷದ ಅತ್ಯುತ್ತಮ ಕಂದಾಯ ಅಧಿಕಾರಿ-2024 ಪ್ರಶಸ್ತಿಯನ್ನು ನೀಡಲು ತೀರ್ಮಾನಿಸಲಾಗಿದೆ.


ಉದಯವಾಹಿನಿ ಚಿತ್ರ

## ಅತಿಯಾದ ಕೆಲಸದ ಒತ್ತಡ : ರಾಜ್ಯಾದ್ಯಂತ ಗ್ರಾಮ ಲೆಕ್ಕಾಧಿಕಾರಿಗಳ ಪ್ರತಿಭಟನೆ


• ಉದಯವಾಹಿನಿ ಬೆಂಗಳೂರು

ಅತಿಯಾದ ಕೆಲಸದ ಒತ್ತಡದ ಸಹಿಸದೇ ರಾಜ್ಯಾದ್ಯಂತ ಗ್ರಾಮ ಲೆಕ್ಕಾಧಿಕಾರಿಗಳು ಪ್ರತಿಭಟನೆ ನಡೆಸುತ್ತಿದ್ದಾರೆ. ಬೆಂಗಳೂರು ಸೇರಿದಂತೆ ರಾಜ್ಯದ ಹಲವು ಕಡೆ ಗ್ರಾಮ ಲೆಕ್ಕಾಧಿಕಾರಿಗಳು ಪ್ರತಿಭಟನೆ ನಡೆಸಿದ್ದಾರೆ. ಕೆಲಸದ ಒತ್ತಡ ಹೆಚ್ಚಾಗುತ್ತಿದೆ. ಇದರಿಂದ ಬ್ರೈನ್ ಹ್ಯಾಮರೇಜ್, ಹೃದಯ ಸಂಬಂಧಿ ಕಾಯಿಲೆಗಳು ಹೆಚ್ಚಾಗುತ್ತಿದೆ. ಕೆಲಸದ ಒತ್ತಡ ತಾಳಲಾರದೇ 50 ಕ್ಕೂ ಹೆಚ್ಚು ಮಂದಿ ಮೃತಪಟ್ಟಿದ್ದಾರೆ ಎಂದು ಪ್ರತಿಭಟನಾಕಾರರು ಆಕ್ರೋಶ ಹೊರ ಹಾಕಿದ್ದಾರೆ. ರಾಜ್ಯಾದ್ಯಂತ ಎಲ್ಲಾ ಗ್ರಾಮ ಲೆಕ್ಕಾಧಿಕಾರಿಗಳು ಕೆಲಸಕ್ಕೆ ಗೈರಾಗಿ ಆಯಾ ತಹಶೀಲ್ದಾರರ ಕಚೇರಿ ಮುಂದೆ ಧರಣಿ ನಡೆಸುತ್ತಿದ್ದಾರೆ. ಮೇಲಾಧಿಕಾರಿಗಳು ಗ್ರಾಮ ಲೆಕ್ಕಾಧಿಕಾರಿಗಳಿಗೆ ತೀವ್ರ ಕೆಲಸದ ಒತ್ತಡ ಹೇರುತ್ತಿದ್ದಾರೆ. ಕೆಲಸ ಮಾಡುವುದಕ್ಕೆ ಸರಿಯಾದ ಮೂಲಭೂತ ಸೌಲಭ್ಯಗಳೂ ಇಲ್ಲ. ಹಿರಿಯ ಅಧಿಕಾರಿಗಳು ಪ್ರತಿದಿನ ಸಂಜೆ 7 ಗಂಟೆಯ ನಂತರ ವಿಡಿಯೋ ಕಾನ್ಫರೆನ್ಸ್ ತಗೊಂಡು ಕೊಟ್ಟ ಕೆಲಸ ಮಾಡಿಲ್ಲ ಎಂದು ಟಾರ್ಚರ್ ನೀಡುತ್ತಾರೆ ಕಿಡಿಕಾರಿದ್ದಾರೆ.

# ಜಮೀನಿನ ದಾರಿಗೆ ಬಂತು ಹೊಸ ರೂಲ್ಸ್!

■ ರೈತರಿಗೆ ರಾಜ್ಯ ಸರ್ಕಾರವು ಸಿಹಿಸುದ್ದಿ ನೀಡಿದ್ದು, ಕೃಷಿ ಜಮೀನಿಗೆ ದಾರಿ ನೀಡುವ ಕುರಿತು ಮಹತ್ವದ ಸೂಚನೆ

• ಉದಯವಾಹಿನಿ ಬೆಂಗಳೂರು


ಉದಯವಾಹಿನಿ ಚಿತ್ರ

ಕೃಷಿ ಜಮೀನಿಗೆ ಹೋಗಲು ದಾರಿ ಇಲ್ಲದೆ ಪರದಾಡುತ್ತಿದ್ದ ರೈತರಿಗೆ ರಾಜ್ಯ ಸರ್ಕಾರವು ಸಿಹಿಸುದ್ದಿ ನೀಡಿದ್ದು, ಕೃಷಿ ಜಮೀನಿಗೆ ದಾರಿ ನೀಡುವ ಕುರಿತು ಮಹತ್ವದ ಸೂಚನೆ ನೀಡಿದೆ.

ರಾಜ್ಯದಲ್ಲಿ ರೈತರು ವ್ಯವಸಾಯದ ಉದ್ದೇಶಗಳಿಗಾಗಿ ಬಳಸುವ ಕೃಷಿ ಸಲಕರಣೆಗಳನ್ನು ಸಾಗಿಸಲು ಅನ್ನ ಭೂಮಾಲೀಕರ ಖಾಸಗಿ ಜಮೀನುಗಳಲ್ಲಿ ತಿರುಗಾಡಲು 'ದಾರಿ' ಸಮಸ್ಯೆ ಇದು ಬಳಕೆದಾರ ರೈತರುಗಳಿಗೆ ತೊಂದರೆಗಳಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ದಾರಿ ಸಮಸ್ಯೆ ಬಹುಕಾಲದಿಂದಲೂ ಇದ್ದು ಅಕ್ಕಪಕ್ಕದ ಜಮೀನುಗಳ ರೈತರು ಕೆಲವು ಖಾಸಗಿ ಜಮೀನುಗಳನ್ನು ದಾಟಿಕೊಂಡು ಕೃಷಿ ಪೂರಕ ಚಟುವಟಿಕೆಗಳನ್ನು ಜರುಗಿಸಲು ಹಾಗೂ ಬೆಳೆದ ಫಸಲನ್ನು ಹೊರತರಲಾಗದೆ ನಷ್ಟ ಹೊಂದುತ್ತಿರುವುದು ಕೆಲವು ಮಾಧ್ಯಮಗಳಿಂದ ತಿಳಿದು ಬಂದಿರುತ್ತದೆ ಹಾಗೂ ಈ ಬಗ್ಗೆ ಸಾರ್ವಜನಿಕರಿಂದ ಮನವಿ/ದೂರುಗಳು ಸ್ವೀಕೃತವಾಗಿರುತ್ತವೆ.

**ಕಂದಾಯ ಇಲಾಖೆಯಿಂದ ಸಾರ್ವಜನಿಕರಿಗೆ ಅನುಕೂಲ**

ಕಂದಾಯ ಇಲಾಖೆಯಿಂದ ಸಾರ್ವಜನಿಕರ ಅನುಕೂಲಕ್ಕಾಗಿ ಆಯಾ ಊರಿನ ವ್ಯಾಪ್ತಿಯ ನಕ್ಷೆಯನ್ನು ಆನ್ ಲೈನ್‌ನಲ್ಲಿ ಡೌನ್ ಲೋಡ್ ಮಾಡಲು ಅವಕಾಶ ನೀಡಲಾಗುತ್ತಿದೆ. ನೀವು ನಿಮ್ಮೂರಿನ ಕಂದಾಯ ನಕ್ಷೆಯನ್ನು ಕುಳಿತಲ್ಲೇ ಡೌನ್ ಲೋಡ್ ಮಾಡಿಕೊಳ್ಳಲು ಮುಂದಿನ ಹಂತಗಳನ್ನು ಅನುಸರಿಸಿ.

ಅತಿ ಪುರಾತನ ಕಾಲದಿಂದಲೂ ಯಾವುದೇ ರೀತಿಯ ಸರ್ಕಾರದಲ್ಲಾಗಲೀ, ಅಂದರೆ, ಚಕ್ರಾದಿಪತ್ಯ, ರಾಜಪ್ರಭುತ್ವ, ನಿರಂಕುಶಪ್ರಭುತ್ವ ಅಥವಾ ಪ್ರಜಾಪ್ರಭುತ್ವ ಕಾಲದಿಂದಲೂ ಭೂನಿರ್ವಹಣೆ, ಭೂಕಂದಾಯ ಸಂಗ್ರಹಣೆ, ಭೂಮಾಲಿಕತ್ವ ನಿರ್ಬಂಧನೆ ಮತ್ತು ಭೂ ಉಪಯೋಗ ಮತ್ತು ಭೂಸ್ವಾಧೀನ ಹಕ್ಕುಗಳು ಮುಂತಾದವುಗಳೆಲ್ಲವೂ ರಾಜ್ಯ ಸರ್ಕಾರದ ಪ್ರಮುಖ ಜವಾಬ್ದಾರಿಗಳಾಗಿದ್ದವು. ಪ್ರಾಚೀನ ಭಾರತದಲ್ಲಿ ವಾಸ್ತವವಾಗಿ ಸರ್ಕಾರದಲ್ಲಿ ಎರಡು ಇಲಾಖೆಗಳು ಮಾತ್ರ ಅಸ್ತಿತ್ವದಲ್ಲಿರುತ್ತಿದ್ದವು. ಇಂತ ಕಂದಾಯ ಇಲಾಖೆಯು ಕರ್ನಾಟಕದ ಜನರಿಗೆ ಪ್ರತಿ ಹಳ್ಳಿಯ ಕಂದಾಯ ನಕ್ಷೆಯನ್ನು ಆನ್ ಲೈನ್ ಮೂಲಕವೇ ಡೌನ್ ಲೋಡ್ ಮಾಡಿಕೊಳ್ಳೋದಕ್ಕೆ ಅವಕಾಶ ನೀಡಲಾಗಿದೆ. ಇದಕ್ಕಾಗಿ ನೀವು https://landrecords.karnataka.gov.in/service3/ಗೆ ಭೇಟಿ ನೀಡಿ.

> **ಕಾಲ ಬದಲಾವಣೆಯಾದಂತೆ ಹಲವಾರು ಇಲಾಖೆಗಳು ರೂಪಿತಗೊಂಡು ಅಸ್ತಿತ್ವಕ್ಕೆ ಬಂದವು. ವಾಸ್ತವದ ಸಂಗತಿಯೆಂದರೆ ಪ್ರಾರಂಭದಲ್ಲಿ ಎಲ್ಲಾ ಇಲಾಖೆಗಳು ಕಂದಾಯ ಇಲಾಖೆಯಡಿಯಲ್ಲಿಯೇ ಕಾರ್ಯ ನಿರ್ವಹಿಸುತ್ತಿದ್ದು, ನಂತರ ಒಂದೊಂದಾಗಿ ಪ್ರತ್ಯೇಕಗೊಂಡವು. ಏನೇ ಆದರೂ ಇಂದಿಗೂ ಸಹ ರಾಜ್ಯದ ಹಾಗೂ ಸಮಾಜದ ಪ್ರಮುಖವಾದ ದೈನಂದಿನ ಕೆಲಸ ಕಾರ್ಯಗಳನ್ನು ಕಂದಾಯ ಇಲಾಖೆಯೇ ನಿರ್ವಹಿಸುತ್ತಿದೆ. ಈ ಕಾರಣಗಳಿಂದಾಗಿಯೇ ಸರ್ಕಾರದಲ್ಲಿ ಕಂದಾಯ ಇಲಾಖೆಯು ಮಾತೃ ಇಲಾಖೆಯೆಂದು ಕರೆಯಲ್ಪಡುತ್ತದೆ.**

ಈ ಹಂತ ಅನುಸರಿಸಿ, ಕುಳಿತಲ್ಲೇ ಕಂದಾಯ ನಕ್ಷೆ ಡೌನ್ ಲೋಡ್ ಮಾಡಿ https://landrecords.karnataka.gov.in/service3/ ಈ ಲಿಂಕ್ ಕ್ಲಿಕ್ ಮಾಡಿ, ಕಂದಾಯ ಇಲಾಖೆಯ ಅಧಿಕೃತ ಜಾಲತಾಣಕ್ಕೆ ಭೇಟಿ ನೀಡಿ.ಈ ಮೇಲ್ಕಂಡ ಲಿಂಕ್ ಕ್ಲಿಕ್ ಮಾಡಿದ ನಂತ್ರ ನಿಮಗೆ ನಿಮ್ಮ ಜಿಲ್ಲೆ, ತಾಲ್ಲೂಕು, ಹೋಬಳಿ ಹಾಗೂ ಗ್ರಾಮದ ಆಯ್ಕೆಯನ್ನು ತೋರಿಸುತ್ತದೆ ಅದನ್ನು ಆಯ್ಕೆ ಮಾಡಿಕೊಳ್ಳಿ.

### ಮೊದಲನೇ ಇಲಾಖೆಯು ರಾಜಸ್ವ ಸಂಗ್ರಹಣೆ

**ಮೊದಲನೆಯದೆಂದರೆ ಭೂನಿರ್ವಹಣೆ ಮತ್ತು ಭೂಕಂದಾಯ ಇಲಾಖೆ ಮತ್ತು ಎರಡನೆಯದೆಂದರೆ ರಾಜ್ಯವನ್ನು ಬಾಹ್ಯ ದಾಳಿಯ ವಿರುದ್ಧ ಹೋರಾಡಲು ಅಗಾಧವಾದ ಭೂಸೇನೆಯ ರಕ್ಷಣಾ ಇಲಾಖೆ. ಮೊದಲನೇ ಇಲಾಖೆಯು ರಾಜಸ್ವ ಸಂಗ್ರಹಣೆ ಹಾಗೂ ಒಳಾಡಳಿತ ನಿರ್ವಹಣೆಯನ್ನು ಎರಡನೇ ಇಲಾಖೆಯು ಪ್ರಾಂತ್ಯಗಳ ರಕ್ಷಣೆ, ಸಮಗ್ರತೆಯನ್ನು ಬಾಹ್ಯದಾಳಿಗೀಡಾಗುವುದರಿಂದ ರಕ್ಷಿಸುವ ಕಾರ್ಯವನ್ನು ನಿರ್ವಹಿಸುತ್ತಿದ್ದವು. ಸಮಾಜವು ಹೆಚ್ಚು ವೃದ್ಧಿಯಾದಂತೆ ವೃತ್ತಿಗಳಲ್ಲಿನ ತಾರತಮ್ಯ, ರಾಜ್ಯದ ಕ್ಲಿಷ್ಟಕರವಾದ ಆಡಳಿತ ನಿರ್ವಹಣೆಗೆ ವಿಶಿಷ್ಟ ಇಲಾಖೆಗಳು ಹೊರಹೊಮ್ಮಿದವು.**

ಇದಾದ ಬಳಿಕ ನಿಮ್ಮ ಹೋಬಳಿಯ ಸಂಪೂರ್ಣ ಹಳ್ಳಿಗಳ ಕಂದಾಯ ನಕ್ಷೆಯನ್ನು ಪಿಡಿಎಫ್ ಫಾರ್ಮೆಟ್‌ನಲ್ಲಿ ತೋರಿಸಲಿದೆ. ನೀವು ನಿಮಗೆ ಬೇಕಾದ ಹಳ್ಳಿಯ ಕಂದಾಯ ನಕ್ಷೆಯನ್ನು ಪಕ್ಕದಲ್ಲಿ ಕಾಣುವಂತ ಪಿಡಿಎಫ್ ಮೇಲೆ ಕ್ಲಿಕ್ ಮಾಡಿ ಡೌನ್ ಲೋಡ್ ಮಾಡಿಕೊಳ್ಳಬಹುದಾಗಿದೆ.

## ಸಿದ್ದರಾಮಯ್ಯರವರ ವಿರುದ್ಧ ಸುಳ್ಳು ಆರೋಪ

• ಉದಯವಾಹಿನಿ ಬೆಂಗಳೂರು


ಉದಯವಾಹಿನಿ ಚಿತ್ರ

ಕಾಂಗ್ರೆಸ್ ಭವನದಲ್ಲಿ ಹರಿಯಾಣ ಚುನಾವಣೆ ಪ್ರಚಾರ ವೇಳೆಯಲ್ಲಿ ರಾಜ್ಯದ ಮುಖ್ಯಮಂತ್ರಿ ಮತ್ತು ಕಾಂಗ್ರೆಸ್ ಸರ್ಕಾರ ವಿರುದ್ಧ ಸುಳ್ಳು ಆರೋಪ ಮಾಡಿರುವ ಪ್ರಧಾನಿ ನರೇಂದ್ರಮೋದಿರವರ ವಿರುದ್ಧ ಕಾಂಗ್ರೆಸ್ ಪಕ್ಷದ ವತಿಯಿಂದ ವಿನೂತನ ಪ್ರತಿಭಟನೆ.

ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಎಸ್.ಮನೋಹರ್, ಕಾಂಗ್ರೆಸ್ ಪಕ್ಷದ ಮುಖಂಡರುಗಳಾದ ಆನಂದ್, ಪುಟ್ಟರಾಜು, ಪ್ರಕಾಶ್, ಚಂದ್ರಶೇಖರ್, ಹೇಮರಾಜು, ಉಮೇಶ್, ರವಿ ರವರು ಕಾಂಗ್ರೆಸ್ ಪಕ್ಷದ ಕಾರ್ಯಕರ್ತರುಗಳು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು. ಎಸ್.ಮನೋಹರ್ ರವರು ಮಾತನಾಡಿ ಪ್ರಧಾನಿ ನರೇಂದ್ರಮೋದಿರವರು ಭ್ರಷ್ಟಚಾರಿಗಳು, ಅತ್ಯಚಾರಿಗಳು, ಭೂಹಗರಣದಲ್ಲಿ ಸಿಲುಕಿರುವ ಬಿಜೆಪಿ, ಜೆಡಿಎಸ್ ನಾಯಕರುಗಳಾದ ಬಿ.ಎಸ್.ಯಡಿಯೂರಪ್ಪ, ಬಸವರಾಜ್ ಬೊಮ್ಮಾಯಿ, ಆರ್.ಅಶೋಕ್, ಬಿ.ವೈ.ವಿಜಯೇಂದ್ರ, ಪ್ರಜ್ವಲ್ ರೇವಣ್ಣ ನಂತಹವರ ಜೊತೆಯಲ್ಲಿ ವೇದಿಕೆ ಹಂಚಿಕೊಂಡಿದ್ದಾರೆ.

ಇಡಿ ರಾಷ್ಟ್ರದ ಜನರು ತಲೆತಗ್ಗಿಸುವ ವಿಚಾರವಾಗಿದೆ. ಬಿಜೆಪಿಯೇತರ ರಾಜ್ಯ ಸರ್ಕಾರಗಳನ್ನು ಉರುಳಿಸಲು ಕೇಂದ್ರ ಬಿಜೆಪಿ ಸರ್ಕಾರ ಪ್ರಯತ್ನ ಮಾಡುತ್ತಿದೆ, ಹಲವಾರು ರಾಜ್ಯಗಳಲ್ಲಿ ಆಪರೇಷನ್ ಕಮಲ ಮೂಲಕ ರಾಜ್ಯ ಸರ್ಕಾರವನ್ನು ಉರುಳಿಸಿದ ಅಪಕೀರ್ತಿ ಇದೆ.

ರಾಜ್ಯ ಕಾಂಗ್ರೆಸ್ ಸರ್ಕಾರದ ಜನಪ್ರಿಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯರವರು ಅನ್ನರಾಮಯ್ಯ ಎಂಬ ಕೀರ್ತಿಗೆ ಪಾತ್ರರಾಗಿದ್ದಾರೆ. 40ವರ್ಷಗಳ ಸಾರ್ವಜನಿಕ ಜೀವನದಲ್ಲಿ ಕಪ್ಪು ಚುಕ್ಕೆ ಇಲ್ಲದಂತೆ ರಾಜಕೀಯ ಕ್ಷೇತ್ರದಲ್ಲಿ ಇದ್ದಾರೆ.

ಮುಖ್ಯಮಂತ್ರಿ ಸಿದ್ದರಾಮಯ್ಯರವರ ವಿರುದ್ಧ ಸುಳ್ಳು ಅರೋಪ ಮಾಡಿರುವ ಪ್ರಧಾನಿ ನರೇಂದ್ರಮೋದಿರವರು ಕೊಡಲೆ ರಾಷ್ಟ್ರ ಮತ್ತು ಜನತೆಯ ಮುಂದೆ ಕ್ಷಮೆ ಹೇಳಬೇಕು ಎಂದು ಒತ್ತಾಯ ಮಾಡಿದರು.

## ಶ್ರೀ ಸರ್ಕಲ್ ಮಾರಮ್ಮ ದೇವಸ್ಥಾನದಲ್ಲಿ ದಸರಾ ಮಹೋತ್ಸವ

• ಉದಯವಾಹಿನಿ ಬೆಂಗಳೂರು


ಉದಯವಾಹಿನಿ ಚಿತ್ರ

**ಶ್ರೀ ಅಮ್ಮನವರ ಮುತ್ತಿನ ಪಲ್ಲಕ್ಕಿ ಉತ್ಸವ**

ಮಲ್ಲೇಶ್ವರದ 18ನೇ ಅಡ್ಡರಸ್ತೆಯಲ್ಲಿರುವ ಶ್ರೀ ಸರ್ಕಲ್ ಮಾರಮ್ಮ ದೇವಸ್ಥಾನ ಅಕ್ಟೋಬರ್ 3 ರಿಂದ 12ರ ವರೆಗೆ ದಸರಾ ಮಹೋತ್ಸವ ಆಚರಿಸುತ್ತಿದ್ದು ಆ ಎಲ್ಲಾ ದಿನಗಳಲ್ಲೂ ದೇವಿಗೆ ವಿಶೇಷ ಅಲಂಕಾರ, ಪೂಜಾ ಕೈಂಕರ್ಯಗಳು ನಡೆಯಲಿದೆ. ಅಕ್ಟೋಬರ್ 3 ರಂದು ಸಂಜೆ 5-00ಕ್ಕೆ ಶ್ರೀ ದುರ್ಗಾ ಹೋಮ ಇರುತ್ತದೆ.

ಪ್ರತಿದಿನ ಸಂಜೆ 6-30ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮಗಳು: ಅಕ್ಟೋಬರ್ 4ರಂದು ವಿ|| ಶ್ರೀಮಾತಾ ರಮಾನಂದ ಮತ್ತು ಸಂಗಡಿಗರು ಕರ್ನಾಟಕ ಶಾಸ್ತ್ರೀಯ ಸಂಗೀತ, ಅಕ್ಟೋಬರ್ 5 ರಂದು ಶ್ರೀಮತಿ ರೂಪಾ ಹೇಮಂತ್ ಅವರ ನಿರ್ದೇಶನದಲ್ಲಿ ದೇವಸ್ಥಾನದ ಲಲಿತ ಕಲಾ ಕೇಂದ್ರದ ಮಕ್ಕಳಿಂದ ಭರತನಾಟ್ಯ, ಅಕ್ಟೋಬರ್ 6 ರಂದು ಶ್ರೀಮತಿ ಶ್ರೀದೇವಿ ಗರ್ತಿಕೆರೆ ಅವರ ನಿರ್ದೇಶನದಲ್ಲಿ ಲಲಿತ ಕಲಾ ಕೇಂದ್ರದ ಕಲಾವಿದರಿಂದ ಭಕ್ತಿಗೀತೆಗಳ ಗಾಯನ, ಅಕ್ಟೋಬರ್ 7 ರಂದು ಶ್ರೀ ರಂಜನಿ ಗಾನ ಮಂಡಲಿಯ ಶ್ರೀಮತಿ ಶಾಂತಾ ಸಾಗರ್ ಮತ್ತು ಸಂಗಡಿಗರಿಂದ ಭಕ್ತಿ ಗೀತೆಗಳು, ಅಕ್ಟೋಬರ್ 8 ರಂದು ಶ್ರೀಮತಿ ರೂಪಶ್ರೀ ಪ್ರಭಂಜನ ಮತ್ತು ಸಂಗಡಿಗರಿಂದ ದಾಸವಾಣಿ, ಅಕ್ಟೋಬರ್ 9 ರಂದು ವಿ|| ಶ್ರೀಮತಿ ಗೀತಾ ರಮಾನಂದ ಇವರಿಂದ ವೀಣಾ ವಾದನ ಮೃದಂಗ : ವಿ|| ಅದಮ್ಯ ರಮಾನಂದ, ಅಕ್ಟೋಬರ್ 10 ರಂದು ಕು|| ಎಸ್.ವಿ. ಚಂದನ ಇವರಿಂದ ಹರಿನಾಮ ಸಂಕೀರ್ತನೆ ವಾದ್ಯ ಸಹಕಾರ : ವಿ|| ಟಿ.ಎಸ್. ರಮೇಶ್ (ಕೀ-ಬೋರ್ಡ್), ಶ್ರೀ ಸರ್ವೋತ್ತಮ (ತಬಲಾ), ಅಕ್ಟೋಬರ್ 11 ರಂದು 'ತತ್ವ-18' ತಂಡದವರಿಂದ ಭಜನಾಮೃತ, ಅಕ್ಟೋಬರ್ 12ರಂದು ಸಂಜೆ 6-00ಕ್ಕೆ : ವಿವಿಧ ಜಾನಪದ ಕಲಾ ತಂಡಗಳೊಂದಿಗೆ ಶ್ರೀ ಗಣಪತಿ, ಶ್ರೀ ಅಮ್ಮನವರ ಮುತ್ತಿನ ಪಲ್ಲಕ್ಕಿ ಉತ್ಸವಗಳು ನಡೆಯಲಿವೆ.

## ನಮ್ಮ ಮೆಟ್ರೋದಲ್ಲಿ ತಲೆ ತಿರುಗಿ ಬಿದ್ದ ಯುವತಿ: ಸಹಪ್ರಯಾಣಿಕರಿಂದ ರಕ್ಷಣೆ

• ಉದಯವಾಹಿನಿ ಬೆಂಗಳೂರು



ರಾಜಧಾನಿ ಬೆಂಗಳೂರು ದಿನದಿಂದ ದಿನಕ್ಕೆ ಬೆಳೆಯುತ್ತಿದ್ದು, ಮಿತಿ ಮೀರಿದ ಜನದಟ್ಟಣೆ, ಟ್ರಾಫಿಕ್ ಸಮಸ್ಯೆ ಹೆಚ್ಚಾಗುತ್ತಿದೆ. ಇದರ ಮಧ್ಯ ಮೆಟ್ರೋ ಟ್ರೈನ್‌ನಲ್ಲಿ ಎಲ್ಲಿಯೂ ಸಹ ನಿಂತುಕೊಳ್ಳುವುದಕ್ಕೂ ಜಾಗವಿಲ್ಲದಷ್ಟು ಜನಸಂಖ್ಯೆ ಹೆಚ್ಚಾಗುತ್ತಿದೆ. ಇದೀಗ ಮೆಟ್ರೋ ಟ್ರೈನಿನಲ್ಲಿ ಯುವತಿ ಒಬ್ಬಳು ತಲೆ ತಿರುಗಿ ಬಿದ್ದಿರುವ ಘಟನೆ ನಡೆದಿದೆ.

ಹೌದು ನಿನ್ನೆ ಸಂಜೆ 6 ಗಂಟೆ ಸುಮಾರಿಗೆ ನೇರಳೆ ಮಾರ್ಗದಲ್ಲಿ ವೈಟ್‌ಫೀಲ್ಡ್-ಕೆಂಪೇಗೌಡ ಇಂಟರ್‌ಚೇಂಜ್ ಮೆಟ್ರೋ ನಿಲ್ದಾಣಕ್ಕೆ ತೆರಳುತ್ತಿದ್ದ ಮೆಟ್ರೋ ರೈಲಿನಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಜನರು ಪ್ರಯಾಣಿಸಿದ್ದು, ಈ ವೇಳೆ ಯುವತಿಯೊರ್ವಳು ತಲೆ ತಿರುಗಿ ಬಿದ್ದಿದ್ದಾರೆ.ಕೂಡಲೇ ಸಹ ಪ್ರಯಾಣಿಕರು ಅವರನ್ನು ರಕ್ಷಣೆ ಮಾಡಿ, ನೀರು ಕೊಟ್ಟಿದ್ದಾರೆ. ನಿನ್ನೆ ಸಂಜೆ ಆರು ಗಂಟೆಗೆ ಕೆ ಆರ್ ಪುರದಲ್ಲಿ ಯುವತಿ ಮೆಟ್ರೋ ಟ್ರೈನ್ ಹತ್ತಿದ್ದಾಳೆ. ಈ ವೇಳೆ ಟ್ರೈನ್ ಪ್ರಯಾಣಿಕರಿಂದ ತುಂಬಿ ತುಳುಕುತ್ತಿತ್ತು. ಕೂಡಲೇ ಯುವತಿಗೆ ನಿಂತಲ್ಲಿ ಕುಸಿದು ಬೀಳಲು ಆರಂಭಿಸಿದ್ದಾಳೆ ತಕ್ಷಣ ಸಹ ಪ್ರಯಾಣಿಕರರು ಆಕೆಯನ್ನು ಆಸನದಲ್ಲಿ ಕೂರಿಸಿ ಸ್ವಲ್ಪ ನೀರು ಕೊಟ್ಟು ಉಪಚರಿಸಿದ್ದಾರೆ. ಅಷ್ಟರಲ್ಲಿ ರೈಲು ಸ್ವಾಮಿ ವಿವೇಕಾನಂದ ರಸ್ತೆಯ ಮೆಟ್ರೋ ನಿಲ್ದಾಣ ತಲುಪಿತು. ನಿಲ್ದಾಣದಲ್ಲಿದ್ದ ಸಿಬ್ಬಂದಿಗೆ ಸಹಾಯಕ್ಕಾಗಿ ಕೂಗಲಾಯಿತು. ಆದರೆ, ಆ ವ್ಯಕ್ತಿ ಪ್ರತಿಕ್ರಿಯಿಸಲಿಲ್ಲ. ನಂತರ ರೈಲು ಮುಂದೆ ಚಲಿಸಿ, ಬಳಿಕ ತನ್ನ ಜೊತೆಗೆ ಬಂದಿದ್ದ ವ್ಯಕ್ತಿಯೊಂದಿಗೆ ಯುವತಿ ಹಲಸೂರು ಮೆಟ್ರೋ ನಿಲ್ದಾಣದಲ್ಲಿ ಇಳಿದು ಹೋದರು.

## ಸಿಎಂ ಸಿದ್ದರಾಮಯ್ಯಗೆ ಮುಡಾ ಸಂಕಷ್ಟ: ರಾಜೀನಾಮೆಗೆ ವಿಪಕ್ಷಗಳ ಬಿಗಿ ಪಟ್ಟು!

• ಉದಯವಾಹಿನಿ ಬೆಂಗಳೂರು



ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ಲೋಕಾಯುಕ್ತ ತನಿಖೆಗೆ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಆದೇಶ ನೀಡಿದ ಬೆನ್ನಲ್ಲೆ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ವಿಪಕ್ಷಗಳು ಆಗ್ರಹಿಸಿವೆ.

ಮುಡಾ ಹಗರಣ ಸಂಬಂಧ ಸಿಎಂ ಸ್ಥಾನಕ್ಕೆ ರಾಜೀನಾಮೆ ನೀಡಿ ತನಿಖೆ ಎದುರಿಸಿ ಎಂದು ಜೆಡಿಎಸ್ ಒತ್ತಾಯಿಸಿದ್ದು, ಮಿಸ್ಟರ್ ಸಿದ್ದಣ್ಣ ಅವರೇ?. ಅಂದು ನೀವೇ ಆಡಿದ್ದ ಮಾತಿಗೆ ಇಂದು ಬದ್ಧರಾಗಿ ಮುಡಾ ಪ್ರಕರಣದಲ್ಲಿ ಸಿದ್ದರಾಮಯ್ಯ ವಿರುದ್ಧ ಎಫ್‌ಐಆರ್ ದಾಖಲಿಸಿ ತನಿಖೆಗೆ ನ್ಯಾಯಾಲಯ ಆದೇಶಿಸಿದೆ. ಲೋಕಾಯುಕ್ತ ಪೊಲೀಸರು ತನಿಖೆ ನಡೆಸಬೇಕು. ಈಗ ರಾಜ್ಯದ ಮುಖ್ಯಮಂತ್ರಿ ನೀವೇ ಆಗಿದ್ದೀರಿ. ಎಲ್ಲಾ ತನಿಖಾ ಸಂಸ್ಥೆಗಳು ನಿಮ್ಮ ಅಧೀನದಲ್ಲೇ ಇವೆ. ಗೃಹ ಇಲಾಖೆ ಮತ್ತು ಪೊಲೀಸರು ನಿಮ್ಮ ಅಡಿಯಲ್ಲಿ ಕೆಲಸ ಮಾಡುತ್ತಾರೆ. ನೀವು ಮುಖ್ಯಮಂತ್ರಿ ಹುದ್ದೆಯಲ್ಲೇ ಇದ್ದರೇ ನ್ಯಾಯಸಮ್ಮತ ತನಿಖೆ ಸಾಧ್ಯವೇ..? ಸಿಎಂ ಆಗಿ ಮುಂದುವರಿಯುವ ಅರ್ಹತೆ ನಿಮಗಿಲ್ಲ.. ರಾಜೀನಾಮೆ ಕೊಟ್ಟು ತನಿಖೆ ಎದುರಿಸಿ ಎಂದು ಜೆಡಿಎಸ್ ಟ್ವೀಟ್ ಮಾಡಿದೆ. ಬಿಜೆಪಿ ಕೂಡ ಸಿಎಂ ಸಿದ್ದರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಇಂದು ವಿಧಾನಸೌಧದ ಮುಂಭಾಗ ಬೃಹತ್ ಪ್ರತಿಭಟನೆ ನಡೆಸುತ್ತಿದ್ದು, ಸಿಎಂ ಸಿದ್ದರಾಮಯ್ಯ ಅವರೆ, ನಾನ್ಯಾಕೆ ರಾಜೀನಾಮೆ ಕೊಡಬೇಕು ಎನ್ನುವ ನಿಮ್ಮ ಭಂಡತನಕ್ಕೆ ಹೈಕೋರ್ಟ್ ಸ್ಪಷ್ಟ ಉತ್ತರ ನೀಡಿದೆ. ಹೈಕೋರ್ಟ್ ತೀರ್ಪನ್ನು ಗೌರವಿಸಿ ಮೊದಲು ರಾಜೀನಾಮೆ ನೀಡಿ ಎಂದು ಬಿಜೆಪಿ ಟ್ವೀಟ್ ಮಾಡಿದೆ.

## ಸಿಎಂ ರಾಜೀನಾಮೆಗೆ ಆಗ್ರಹಿಸಿ ಪ್ರತಿಭಟನೆ

• ಉದಯವಾಹಿನಿ ಬೆಂಗಳೂರು


ಉದಯವಾಹಿನಿ ಚಿತ್ರ

ರಾಜ್ಯ ಬಿಜೆಪಿ ವತಿಯಿಂದ ವಿಧಾನಸೌಧದ ಗಾಂಧಿ ಪ್ರತಿಮೆ ಮುಂಭಾಗದಲ್ಲಿ ಸಿಎಂ ಸಿದ್ಧರಾಮಯ್ಯ ರಾಜೀನಾಮೆಗೆ ಆಗ್ರಹಿಸಿ ಬೃಹತ್ ಪ್ರತಿಭಟನೆಯನ್ನು ಬಿಜೆಪಿ ಶಾಸಕರು, ವಿಧಾನಪರಿಷತ್ ಸದಸ್ಯರು, ಸಂಸದರು, ಜನಪ್ರತಿನಿಧಿಗಳು ನಡೆಸಿದರು. ಇಂತಹ ಬಿಜೆಪಿ ಮುಖಂಡರನ್ನು ಪೊಲೀಸರು ವಶಕ್ಕೆ ಪಡೆದರು.

ರಾಜ್ಯ ಬಿಜೆಪಿ ವತಿಯಿಂದ ವಿಧಾನಸೌಧದ ಗಾಂಧಿ ಪ್ರತಿಮೆ ಮುಂಭಾಗದಲ್ಲಿ ಬೃಹತ್ ಪ್ರತಿಭಟನೆಯನ್ನು ಹಮ್ಮಿಕೊಳ್ಳಲಾಗಿತ್ತು. ಮುಖ್ಯಮಂತ್ರಿ ಸಿದ್ದರಾಮಯ್ಯನವರ ರಾಜೀನಾಮೆಗೆ ಆಗ್ರಹಿಸಲಾಯಿತು. ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ. ವಿಜಯೇಂದ್ರ ಅವರ ಕರೆಯನ್ವಯ ಪ್ರತಿಭಟನೆ ನಡೆಯಿತು. ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಉಪ ನಾಯಕ ಅರವಿಂದ ಬೆಲ್ಲದ, ವಿಧಾನಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ, ಸಂಸದರು, ಶಾಸಕರು ಮತ್ತು ವಿಧಾನಪರಿಷತ್ ಸದಸ್ಯರು ಉಪಸ್ಥಿತರಿದ್ದರು. ಭ್ರಷ್ಟ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಗೆ ಧಿಕ್ಕಾರ, ಧಿಕ್ಕಾರ, ಮೂಡ ಸೈಟ್‌ಗಳನ್ನು ಕೊಳ್ಳೆ ಹೊಡೆದ ಭ್ರಷ್ಟ ಮುಖ್ಯಮಂತ್ರಿ ಸಿದ್ದ ರಾಮಯ್ಯನವರಿಗೆ ಧಿಕ್ಕಾರ, ಧಿಕ್ಕಾರ, ಸಿದ್ದ ರಾಮಯ್ಯ ಅವರೇ ಕೊಡಲೇಬೇಕು ಕೊಡ ಲೇಬೇಕು- ರಾಜೀನಾಮೆ ಕೊಡಲೇ ಬೇಕು, ಭ್ರಷ್ಟ ಸರಕಾರ ನಡೆಸುವ ಭ್ರಷ್ಟ ಮುಖ್ಯ ಮಂತ್ರಿ ಸಿದ್ದರಾಮಯ್ಯನವರಿಗೆ ಧಿಕ್ಕಾರ, ಧಿಕ್ಕಾರ, ಬೆಲೆ ಏರಿಕೆ, ತೆರಿಗೆ ಏರಿಕೆ ಸಿಎಂ ಸಿದ್ದ ರಾಮಯ್ಯನವರಿಗೆ ಧಿಕ್ಕಾರ, ಧಿಕ್ಕಾರ- ಇವೇ ಮೊದಲಾದ ಘೋಷಣೆಗಳನ್ನು ಕೂಗಿದರು. ವಿಧಾನಪರಿಷತ್ ಸದಸ್ಯ ಎನ್.ರವಿಕುಮಾರ್ ಅವರು ಘೋಷಣೆಗಳನ್ನು ಕಾರ್ಯಕರ್ತರಿಗೆ ತಿಳಿಸಿದರು, ಕಾರ್ಯಕ್ರಮ ನಿರೂಪಿಸಿದರು.

> **ಭಾರತ್ ಮಾತಾ ಕೀ ಜೈ ಘೋಷಣೆಯನ್ನೂ ಕೂಗಲಾಯಿತು. ಬಿಜೆಪಿ ಪ್ರಮುಖರು ಮಾತನಾಡಿ, ಹಗರಣಗಳ ಹಿನ್ನೆಲೆಯಲ್ಲಿ ಸಿದ್ದರಾಮಯ್ಯನವರು ಕೂಡಲೇ ರಾಜೀನಾಮೆ ಕೊಡಬೇಕು. ಕರ್ನಾಟಕ ಕಂಡ ಅತ್ಯಂತ ಭ್ರಷ್ಟ ಸರಕಾರ ಇದೆಂದು ಟೀಕಿಸಿದರು.**

# ಉಚಿತ ಬಸ್ ಪಾಸ್ ವಿತರಣೆಗೆ ರಾಜ್ಯ ಸರ್ಕಾರ ಆದೇಶ

■ ಗ್ರಾಮೀಣ ಪತ್ರಕರ್ತರಿಗೆ ಭರ್ಜರಿ ಸಿಹಿಸುದ್ದಿ ■ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣಿಸಲು ಬಸ್ ಪಾಸ್ ಸೌಲಭ್ಯ ಪ್ರಾರಂಭ

• ಉದಯವಾಹಿನಿ ಬೆಂಗಳೂರು

ರಾಜ್ಯದ ಗ್ರಾಮೀಣ ಪತ್ರಕರ್ತರಿಗೆ ಭರ್ಜರಿ ಸಿಹಿಸುದ್ದಿ ಎನ್ನುವಂತೆ ಗ್ರಾಮೀಣ ಪತ್ರಕರ್ತರಿಗೆ ವೃತ್ತಿಗೆ ಸಂಬಂಧಿ ಚಟುವಟಿಕೆಗಳಿಗೆ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣಿಸಲು ಉಚಿತ ಬಸ್ ಪಾಸ್ ವಿತರಣೆಗೆ ಸರ್ಕಾರ ಆದೇಶಿಸಿದೆ.

ಕನ್ನಡ, ಸಂಸ್ಕೃತಿ ಮತ್ತು ವಾರ್ತಾ ಇಲಾಖೆ ಸರ್ಕಾರದ ಅಧೀನ ಕಾರ್ಯದರ್ಶಿ ನಡವಳಿಯನ್ನು ಹೊರಡಿಸಿದ್ದು,ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಡಿ 2024-25ನೇ ಸಾಲಿನ ಅಯವ್ಯಯ ಭಾಷಣದ ಕಂಡಿಕೆ 431ರಲ್ಲಿ ಗ್ರಾಮೀಣ ಪತ್ರಕರ್ತರಿಗೆ ವೃತ್ತಿ ಸಂಬಂಧಿ ಚಟುವಟಿಕೆಗಳಿಗೆ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣಿಸಲು ಬಸ್ ಪಾಸ್ ಸೌಲಭ್ಯವನ್ನು ಪ್ರಾರಂಭಿಸಲಾಗುವುದು' ಎಂದು ಘೋಷಿಸಲಾಗಿರುತ್ತದೆ ಎಂದಿದ್ದಾರೆ.

ರಾಜ್ಯದ ಜಿಲ್ಲಾ ಕೇಂದ್ರಗಳಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ವಿದ್ಯುನ್ಮಾನ/ಮುದ್ರಣ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮೀಣ ಪತ್ರಕರ್ತರಿಗೆ ವೃತ್ತಿ ಸಂಬಂಧಿತ ಚಟುವಟಿಕೆಗಳಿಗೆ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣಿಸಲು ಉಚಿತ ಬಸ್‌ಪಾಸ್ ಸೌಲಭ್ಯವನ್ನು ಅನುಷ್ಠಾನಗೊಳಿಸುವುದಕ್ಕೆ ಸಂಬಂಧಿಸಿದಂತೆ ದಿನಾಂಕ: 21/03/2024ರಲ್ಲಿದ್ದಂತೆ ಮಾಧ್ಯಮ ಪಟ್ಟಿಯಲ್ಲಿರುವ ಮುದ್ರಣ/ವಿದ್ಯುನ್ಮಾನ ಮಾಧ್ಯಮಗಳ ಸಂಖ್ಯೆಯನ್ನಾಧರಿಸಿ, ರಾಜ್ಯಾದ್ಯಂತ ಒಟ್ಟು 5222 ಪತ್ರಕರ್ತರಿಗೆ ಈ ಯೋಜನೆಯನ್ನು ಒದಗಿಸಲು, ಕೆ.ಎಸ್.ಆರ್.ಟಿ.ಸಿ ಸಂಸ್ಥೆಯು ನೀಡಿರುವ ಅಂದಾಜಿನಂತೆ, ಪ್ರತಿ ಪಾಸುದಾರರಿಗೆ ಪ್ರತಿ ತಿಂಗಳಿಗೆ ರೂ.2500/- ಗಳಾಗಬಹುದೆಂದು ವೆಚ್ಚವನ್ನು ಅಂದಾಜಿಸಲಾಗಿದೆ ಎಂದು ತಿಳಿಸಲಾಗಿದೆ. ಸದರಿ ಲೆಕ್ಕಚಾರದಂತೆ ಪ್ರತಿ ತಿಂಗಳಿಗೆ ರೂ. 1,30,55,000/- ವಾರ್ಷಿಕ ಅಂದಾಜು ಅನುದಾನ ರೂ. 15,66,60,000/-ಗಳ ಅವಶ್ಯಕತೆ ಇರುತ್ತದೆ ಎಂದು ಅಂದಾಜಿಸಲಾಗಿದೆ ಎಂದಿದ್ದಾರೆ. ಆರ್ಥಿಕ ಇಲಾಖೆಯು ಇದು ಮುಂದುವರೆದ ಮಾರ್ಪಾಡಿತ ಯೋಜನೆ ಯಾಗಿದ್ದು, ಸಾರಿಗೆ ಇಲಾಖೆಯ ಸಹಯೋಗದೊಂದಿಗೆ ಅನುಷ್ಠಾನಗೊಳಿಸುವುದು ಎಂದು ಸೂಚಿಸಿರುತ್ತದೆ ಎಂದು ತಿಳಿಸಿದ್ದಾರೆ. ಅರ್ಜಿದಾರರು ಪ್ರತಿನಿಧಿಸುವ ಮಾಧ್ಯಮ ಸಂಸ್ಥೆಗಳು ವಾರ್ತಾ, ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿ ಇರಬೇಕು. ಅರ್ಜಿದಾರರು ಪೂರ್ಣಾವಧಿಗೆ ನೇಮಕವಾಗಿದ್ದು ಕನಿಷ್ಟ ನಾಲ್ಕು, (4) ವರ್ಷಗಳಾಗಿರಬೇಕು. ವಿದ್ಯುನ್ಮಾನ, ಮುದ್ರಣ ಮಾಧ್ಯಮ ಕ್ಷೇತ್ರದಲ್ಲಿ ಸೇವಾ ಅನುಭವ ಹೊಂದಿರಬೇಕು. ಪೂರ್ಣಾವಧಿ ಪತ್ರಕರ್ತರಾಗಿ ಸೇವೆ ಸಲ್ಲಿಸುತ್ತಿರುವ ಬಗ್ಗೆ, ನೇಮಕಾತಿ ಆದೇಶ, ವೇತನ ರಸೀತಿ/ಬ್ಯಾಂಕ್ ಸ್ಟೇಟ್ ಮೆಂಟ್ ಅಥವಾ ಸೇವಾನುಭವಕ್ಕೆ ಸಂಬಂಧಪಟ್ಟಂತೆ ಸೂಕ್ತ ದಾಖಲೆಗಳನ್ನು ಒದಗಿಸಬೇಕು. ಸಾಮಾನ್ಯ ಮನರಂಜನಾ, ಇತರ ಪ್ರಕಾರಗಳ ವಾಹಿನಿಗಳ ಪ್ರತಿನಿಧಿಗಳಿಗೆ ಬಸ್ ಪಾಸ್‌ಗಳನ್ನು ನೀಡ ಲಾಗುವುದಿಲ್ಲ. ಈ ಯೋಜನೆಯನ್ನು ಜಿಲ್ಲಾ ವ್ಯಾಪ್ತಿಯಲ್ಲಿ ಸಂಚರಿಸುವ ಕರ್ನಾಟಕ ಸಾರಿಗೆ ವ್ಯಾಪ್ತಿಯ (ಎಕ್ಸ್ ಪ್ರೆಸ್ ಸೇರಿದಂತೆ ಎಲ್ಲಾ ಬಸ್ಸುಗಳಲ್ಲಿ ಉಚಿತವಾಗಿ ಸಂಚರಿಸಲು ಸೀಮಿತಗೊಳಿಸಿದೆ. ಆಸಕ್ತ ಪತ್ರಕರ್ತರು ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಭರ್ತಿ ಮಾಡಿ, ಸಂಪಾದಕರ/ ಮುಖ್ಯಸ್ಥರ ಶಿಫಾರಸ್ಸಿನೊಂದಿಗೆ ಪೂರಕ ದಾಖಲೆಗಳೊಂದಿಗೆ ಅರ್ಜಿಗಳನ್ನು ವಾರ್ತಾ, ಸಾರ್ವಜನಿಕ ಸಂಪರ್ಕ ಇಲಾಖೆ ಯ ತಮ್ಮ ಕಾರ್ಯ ವ್ಯಾಪ್ತಿಯ ಜಿಲ್ಲಾ ಮಟ್ಟದ ಉಪ ನಿರ್ದೇಶಕರು/ಹಿರಿಯ ಸಹಾಯಕ ನಿರ್ದೇಶಕರು/ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಬೇಕು. ಜಿಲ್ಲಾ ಕೇಂದ್ರಗಳಿಂದ ಈ ಸೌಲಭ್ಯಕ್ಕೆ ಆಯ್ಕೆಯಾದ ಪತ್ರಕರ್ತರ ಪಟ್ಟಿಯನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕ್ರೋಢೀಕರಿಸಿ ಕೆ.ಎಸ್.ಆರ್.ಟಿ.ಸಿ ಸಂಸ್ಥೆಗೆ ನೀಡಲಾಗುವುದು. ಸದರಿ ಸಂಸ್ಥೆಯು ಮುದ್ರಿಸಿಕೊಡುವ ಬಸ್‌ಪಾಸ್‌ಗಳನ್ನು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯಿಂದ ಜಿಲ್ಲಾ ಪತ್ರಿಕಾ ಸಂಪಾದಕರಿಗೆ/ವರದಿಗಾರರಿಗೆ ವಿತರಿಸಲು ಕ್ರಮ ಕೈಗೊಳ್ಳಲಾಗುವುದು.

> **ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ 2024-25ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 431ರಲ್ಲಿನ ಘೋಷಣೆಯನ್ವಯ, ವಾರ್ತಾ ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ವಿದ್ಯುನ್ಮಾನ/ಮುದ್ರಣ ಮಾಧ್ಯಮ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಗ್ರಾಮೀಣ ಪತ್ರಕರ್ತ ರಿಗೆ ವೃತ್ತಿ ಸಂಬಂಧಿತ ಚಟುವಟಿಕೆಗಳಿಗೆ ಜಿಲ್ಲಾ ವ್ಯಾಪ್ತಿಯಲ್ಲಿ ಪ್ರಯಾಣಿಸಲು ಉಚಿತ ಬಸ್ ಪಾಸ್ ಸೌಲಭ್ಯವನ್ನು ನೀಡುವ ಯೋಜನೆಯನ್ನು ಸಾರಿಗೆ ಇಲಾಖೆಯ ಸಹಯೋಗದೊಂದಿಗೆ ಈ ಕೆಳಗಿನ ಮಾರ್ಗಸೂಚಿಗಳು ಹಾಗೂ ಷರತ್ತುಗಳನ್ವಯ ತಕ್ಷಣ ದಿಂದ ಜಾರಿಗೆ ಬರುವಂತೆ ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆ ನೀಡಲಾಗಿದೆ ಎಂದು ಹೇಳಿದ್ದಾರೆ.**

> **ಪತ್ರಿಕೆಗಳ ಸಂಖ್ಯೆ, ವಿದ್ಯುನ್ಮಾನ ವಾಹಿನಿಗಳ ಸಂಖ್ಯೆ ಹೆಚ್ಚಾದಂತೆ ಪತ್ರಕರ್ತರ ಸಂಖ್ಯೆಯೂ ಸಹ ಹೆಚ್ಚಾಗುವುದರಿಂದ ಅಂದಾಜು ವೆಚ್ಚವೂ ಸಹ ಹೆಚ್ಚಾಗುವ ಸಾಧ್ಯತೆ ಇರುವುದಾಗಿ ತಿಳಿಸುತ್ತಾ, ಬೇಕಾಗುವ ಅನುದಾನದ ವಿವರಗಳ ಅಂದಾಜು ವೆಚ್ಚ ಹಾಗೂ ಸದರಿ ಯೋಜನೆಯನ್ನು ಅನುಷ್ಠಾನಗೊಳಿಸಲು ಮಾರ್ಗಸೂಚಿಗಳನ್ನು ಒಳಗೊಂಡ ವಿವರವಾದ ಪಸ್ತಾವನೆಯನ್ನು ಸಲ್ಲಿಸಿ ಯೋಜನೆಯ ಅನುಷ್ಠಾನಕ್ಕೆ ಸರ್ಕಾರದ ಆದೇಶ ಹೊರಡಿಸುವಂತೆ ಆಯುಕ್ತರು, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರು, ಕೋರಿರುತ್ತಾರೆ ಎಂದು ಹೇಳಿದ್ದಾರೆ.**



# ಸಿಡಿಗುಂಡಿನ ಆರ್ಭಟ: ಕದಲದ ಗಜಪಡೆ, ತಾಲೀಮು ಯಶಸ್ವಿ

## 7 ಫಿರಂಗಿಗಳಲ್ಲಿ ಸಿಡಿದ ಕುಶಾಲತೋಪಿಗೆ ಅಂಬಾರಿ ಆನೆ ಅಭಿಮನ್ಯು ನೇತೃತ್ವದ ಗಜಪಡೆ ಕದಲದೆ ಧೈರ್ಯ ಪ್ರದರ್ಶನ

• **ಉದಯವಾಹಿನಿ ಮೈಸೂರು**

ಭೂಮಿ ನಡುಗುವಂತೆ ಏಳು ಫಿರಂಗಿಗಳಲ್ಲಿ ಸಿಡಿದ 'ಕುಶಾಲತೋಪಿ'ಗೆ ಅಂಬಾರಿ ಆನೆ 'ಅಭಿಮನ್ಯು' ನೇತೃತ್ವದ 'ಗಜಪಡೆ' ಕದಲದೆ ಧೈರ್ಯ ಪ್ರದರ್ಶಿಸಿದತು. ಅದನ್ನು ಕಂಡ ಆನೆಪ್ರಿಯರಲ್ಲಿ ಸಂತಸ ಮೂಡಿತ್ತು.

ದಸರಾ ವಸ್ತುಪ್ರದರ್ಶನದ ವಾಹನ ನಿಲ್ದಾಣದ ಅಂಗಳದಲ್ಲಿ ಗುರುವಾರ ಬೆಳಿಗ್ಗೆ 11.30ಕ್ಕೆ ನಡೆದ ಕುಶಾಲತೋಪಿನ ತಾಲೀಮು ಯಶಸ್ವಿಯಾಗಿ ನೆರವೇರಿತು.

ಅನುಭವಿಗಳಾದ 'ಅಭಿಮನ್ಯು, ಮಹೇಂದ್ರ, ಪ್ರಶಾಂತ', 'ಭೀಮ', 'ಧನಂಜಯ' ಹಾಗೂ 'ಗೋಪಿ' ಆನೆಗಳು 'ಏನೂ ಆಗೇ ಇಲ್ಲವೆಂಬಂತೆ' ಧ್ಯಾನಸ್ಥ ಸ್ಥಿತಿಯಲ್ಲಿದ್ದವು. ಅಕ್ಕಪಕ್ಕ ನಿಂತಿದ್ದ ಕುಮ್ಕಿ ಹಾಗೂ ಕಿರಿಯ ಆನೆಗಳು ಅವುಗಳನ್ನು ತಾಗಿ ನಿಂತು ಧೈರ್ಯ ತಂದುಕೊಂಡವು. ಕಿರಿಯ ಆನೆ 'ರೋಹಿತ್' ಎಂದಿನಂತೆ ಹಿಂದೆ ತಿರುಗಿದ. ಅವನನ್ನು ಮಾವುತ ಸೈಯದ್ ಉಸ್ಮಾನ್, ಕಾವಾಡಿ ಮಾದು ತಹಬದಿಗೆ ತಂದರು. ದೊಡ್ಡಹರವೆ ಲಕ್ಷ್ಮಿಯೂ ಸ್ವಲ್ಪ ಬೆಚ್ಚಿದಳು. ಹಿರಿಯ

> 30 ಮಂದಿ ಸಿಎಆರ್ ಪೊಲೀಸರು ಸಿಡಿಮದ್ದು ಸಿಡಿಸುವಲ್ಲಿ ನಿರತರಾಗಿದ್ದರು. ಮೂರನೇ ಸುತ್ತಿನ ಕುಶಾಲತೋಪು ಸಿಡಿಯುತ್ತಿದ್ದಾಗ ಫಿರಂಗಿ ಬಳಿಗೆ ಸಾಗಿ ನಾವು ಯಾವುದಕ್ಕೂ ಹೆದರುವುದಿಲ್ಲವೆಂದು ಎಲ್ಲಾ ಆನೆಗಳು ಸಾಬೀತು ಮಾಡಿದವು.

**ಪೂರ್ವಭ್ಯಾಸ ನೀಡುವುದು ವಾಡಿಕೆ**

ಆನೆಗಳೊಂದಿಗೆ ಇದೇ ಮೊದಲ ಬಾರಿಗೆ ದಸರೆಗೆ ಬಂದಿರುವ 'ಏಕಲವ್ಯ' ನೂ ಒಂದು ಹೆಜ್ಜೆ ಹಿಂದಿಡಿಯಿಡದೇ 'ಅಭಿಮನ್ಯು' ಜೊತೆ ಗಂಭೀರವಾಗಿ ನಿಂತು 'ಭವಿಷ್ಯದ ಭರವಸೆಯ ಅಂಬಾರಿ ಆನೆಗಳಲ್ಲಿ ನಾನೂ ಕೂಡ ಒಬ್ಬ' ಎಂಬುದನ್ನು ಸಾಬೀತುಗೊಳಿಸಿದ ನಾಲ್ಕು ದಸರೆ ಕಂಡಿರುವ 'ಭೀಮನು ಗಜಪಡೆಯ ಬಲ ತುದಿಯಲ್ಲಿ ನಿಂತು ಮಾಸ್ಟರ್ 'ಅರ್ಜುನ'ನನ್ನು ನೆನಪಿಸಿದ. ಅವನನ್ನು ತಾಗಿಕೊಂಡೆ ನಿಂತ ಈ ಬಾರಿಯ



ಉದಯವಾಹಿನಿ ಚಿತ್ರ

ಪಟ್ಟದಾನೆ 'ಕಂಜನ್'ಗೆ ಧೈರ್ಯ ತುಂಬಿದ. ಪ್ರಶಾಂತ, ಸುಗ್ರೀವರ ಮಧ್ಯೆ ನಿಂತಿದ್ದ 'ಹಿರಣ್ಯ' ಸೊಂಡಿಲೆತ್ತಿ ನಮಿಸುತ್ತಿದ್ದಳು.

ಮೊದಲ ಸುತ್ತಿನ ಕುಶಾಲ ತೋಪಿನಲ್ಲಿ ಬೆಚ್ಚಿದ ಸುಗ್ರೀವ 'ಗೋಪಿ'ಯನ್ನು ಒತ್ತರಿಸಿಕೊಂಡು ನಿಂತನು. 'ಮಹೇಂದ್ರ' ಎಂದಿನಂತೆ ಗಾಂಭಿರ್ಯತೆ ಪ್ರದರ್ಶಿಸಿದನು. ಹುಲಿ ಕಾರ್ಯಾಚರಣೆಯಲ್ಲಿ ಧೈರ್ಯ ತೋರುವ 'ಧನಂಜಯ' ಸಿಡಿಮದ್ದಿಗೆ ಸಾಮಾನ್ಯ ಇಷ್ಟು ವರ್ಷದ ದಸರೆಯಲ್ಲಿ ಹೆದರುತ್ತಿದ್ದ. ಇದೇ ಮೊದಲ ಬಾರಿ ತಟಸ್ಥನಾಗಿ ನಿಂತಿದ್ದು, ಆಶ್ಚರ್ಯ ಮೂಡಿಸಿತು. ಕುಶಲ ತೋಪು ತಾಲೀಮು... ಮೈಸೂರು ದಸರಾ

### ಫಿರಂಗಿಯ ನಳಿಕೆಯಿಂದ ಹೊರಹೊಮ್ಮುತ್ತಿದ್ದ ಬೃಹತ್ ಬೆಂಕಿಯುಂಡೆಗಳು

ಮೊದಲ ಸುತ್ತಿನ ಸಿಡಿಮದ್ದು ಸ್ಫೋಟಗೊಳ್ಳುತ್ತಿದ್ದಂತೆ ಸ್ವಲ್ಪ ಬೆದರಿದ ಈ ಆನೆಗಳು ಹಿಂದೆ-ಮುಂದೆ ಚಲಿಸಿವು. ಈ ವೇಳೆ ಮಾವುತರು ಆನೆಗಳನ್ನು ನಿಯಂತ್ರಿಸಿದರು. ಫಿರಂಗಿಯ ನಳಿಕೆಯಿಂದ ಹೊರಹೊಮ್ಮುತ್ತಿದ್ದ ಬೃಹತ್ ಬೆಂಕಿಯುಂಡೆಗಳು, ಅವುಗಳ ಜೊತೆಗೆ ಆವರಿಸುತ್ತಿದ್ದ ದಟ್ಟ ಹೊಗೆಯನ್ನು, ಅಂಬಾರಿ ಹೊರುವ ಅಭಿಮನ್ಯು, ಮಹೇಂದ್ರ ಪದೇ ದೃಷ್ಟಿಯಿಂದ ದಿಟ್ಟಿಸುತ್ತಾ ಸೊಂಡಿಲೆತ್ತಿದ್ದು ವಿಶೇಷವಾಗಿತ್ತು. ಆನೆ- ಕುದುರೆಗಳನ್ನು ಪ್ರವಾಸಿಗರು, ನಾಗರಿಕರು ಕಣ್ತುಂಬಿಕೊಂಡರು.

ಮಹೋತ್ಸವದ ಪೂರ್ವಭಾವಿಯಾಗಿ ಗುರುವಾರ ವಸ್ತು ಪ್ರದರ್ಶನ ಆವರಣದಲ್ಲಿ ಫಿರಂಗಿಗಳಿಂದ ಸಿಡಿಮದ್ದು ಸಿಡಿಸುವ ತಾಲೀಮು ನಡೆಯಿತು. ಜಂಬೂ ಸವಾರಿಯ ದಿನವಾದ ವಿಜಯದಶಮಿಯಂದು ಚಾಮುಂಡೇಶ್ವರಿಗೆ ಪುಷ್ಪಾರ್ಚನೆ ಮಾಡಿದ ನಂತರ 21 ಸುತ್ತಿನ ಕುಶಾಲತೋಪು ಸಿಡಿಸುವಾಗ ಹೊಮ್ಮುವ ಕಿವಿಗಡಚಿಕ್ಕುವ ಶಬ್ದಕ್ಕೆ ಕುದುರೆ, ಆನೆಗಳು ಬೆಚ್ಚದಂತೆ ಮಾಡಲು, ಪೂರ್ವಭ್ಯಾಸ ನೀಡುವುದು ವಾಡಿಕೆ. ಪಂಜಿನ ಕವಾಯತು ನಡೆವಾಗಲೂ ಕುಶಾಲ ತೋಪು ಸಿಡಿಸಲಾಗುತ್ತದೆ. ಅದರಂತೆ ಸಿಡಿಮದ್ದು ಸಿಡಿಸಲು 7 ಫಿರಂಗಿಗಳನ್ನು ಅಣಿಗೊಳಿಸಲಾಗಿತ್ತು.

ಅಭಿಮನ್ಯು ನೇತೃತ್ವದ 14 ಆನೆಗಳು ಹಾಗೂ ಅಶ್ವಾರೋಹಿ ದಳದ 35 ಕುದುರೆಗಳು ತಾಲೀಮಿನ ಅಂಗಳದತ್ತ ಹೆಜ್ಜೆ ಹಾಕಿದವು. ಎಲ್ಲಾ ಆನೆಗಳನ್ನು ಒಂದೇ ಸಾಲಿನಲ್ಲಿ ನಿಲ್ಲಿಸಲಾಗಿತ್ತು. ಈ ಮೊದಲು ಬೆಚ್ಚುವ ಆನೆಗಳನ್ನು ಎರಡನೇ ಸಾಲಿನಲ್ಲಿ ನಿಲ್ಲಿಸಲಾಗುತ್ತಿತ್ತು.

ಡಿಸಿಎಫ್‌ಗಳಾದ ಐ.ಬಿ.ಪ್ರಭುಗೌಡ, ಕೆ.ಎನ್. ಬಸವರಾಜ್, ಡಿಸಿಪಿ ಎಂ.ಮುತ್ತುರಾಜ್, ಆರ್ ಎಫ್‌ಒ ಸಂತೋಷ್ ಹೂಗಾರ್, ವೈದ್ಯ ಮುಜೀಬ್ ರೆಹಮಾನ್ ಹಾಜರಿದ್ದರು.

---

# ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳು ಮತ್ತು ಸಮಸ್ಯೆಗಳನ್ನು ಕುರಿತು ಸಭೆ ನಡೆಸುವಂತೆ, ಸಮಸ್ಯೆಗಳಿಗೆ ಸ್ಪಂದಿಸುವಂತೆ ಮನವಿ

• **ಉದಯವಾಹಿನಿ, ಬಂಗಾರಪೇಟೆ**

ಪಟ್ಟಣದ ತಾಲ್ಲೂಕು ಆಡಳಿತ ಕಚೇರಿಯ ಮುಂಭಾಗದಲ್ಲಿ ತಾಲ್ಲೂಕು ಗ್ರಾಮ ಆಡಳಿತ ಅಧಿಕಾರಿಗಳ ಸಂಘದ ನೇತೃತ್ವದಲ್ಲಿ ಆಯೋಜಿಸಲಾಗಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿ, ಕರ್ನಾಟಕ ಸರ್ಕಾರವು ಗ್ರಾಮ ಆಡಳಿತ ಅಧಿಕಾರಿಗಳ ಬೇಡಿಕೆಗಳು ಮತ್ತು ಸಮಸ್ಯೆಗಳನ್ನು ಕುರಿತು ಸಭೆ ನಡೆಸುವಂತೆ ಹಾಗೂ ಸಮಸ್ಯೆಗಳಿಗೆ ಸ್ಪಂದಿಸುವಂತೆ 10 ಹಲವು ಮನವಿಗಳನ್ನು ಸಲ್ಲಿಸಿದ್ದರು. ಸಹ ಸರ್ಕಾರದ ವತಿಯಿಂದ ಯಾವುದೇ ಸಕಾರಾತ್ಮಕ ಸ್ಪಂದನೆ ದೊರೆತಿರುವುದಿಲ್ಲ. ಆದ್ದರಿಂದ ಸಮಸ್ಯೆಗಳ ಸುಳಿಯಲ್ಲಿ ಸಿಲುಕಿರುವ ನಮ್ಮ ಬೇಡಿಕೆಗಳನ್ನು ಈ ಕೂಡಲೇ ಸರ್ಕಾರ ಈಡೇರಿಸಬೇಕು, ಮತ್ತು ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಹಾಗೂ ಕಂದಾಯ ಸಚಿವರ ಉಪಸ್ಥಿತಿಯಲ್ಲಿ ಸಭೆ ಏರ್ಪಡಿಸುವಂತೆ ಆಗ್ರಹಿಸಿ ತಾಹಸಿಲ್ದಾರ್ ಅವರಿಗೆ ಮನವಿ ನೀಡಿದರು.

ಕರ್ನಾಟಕ ಉಚ್ಚನ್ಯಾಯಾಲಯದ ರಿಟ್ ಪಿಟಿಷನ್ ಸಂಖ್ಯೆ: 329/23 ರ ಅಂತಿಮ ತೀರ್ಪಿಗೆ ಒಳಪಡಿಸಿ ರಾಜ್ಯಾದ್ಯಂತ ಎಲ್ಲಾ ಜಿಲ್ಲೆಗಳಲ್ಲಿ ಖಾಲಿ ಇರುವ ಪ್ರ.ದ.ಸ/ರಾ.ನಿ ಹುದ್ದೆಗಳಿಗೆ ತಕ್ಷಣವೇ ಪದೊನ್ನತಿ ನೀಡಲು ಕ್ರಮವಹಿಸಬೇಕು. ಅಂತರ್ ಜಿಲ್ಲಾ ಪತಿ-ಪತ್ನಿ ಪ್ರಕರಣಗಳ ವರ್ಗಾವಣೆಯ ಚಾಲನೆ ನೀಡಿ ಅಂತಿಮ ಆದೇಶಕ್ಕಾಗಿ ಬಾಕಿ ಇರುವ ಪ್ರಕರಣಗಳ



ಉದಯವಾಹಿನಿ ಚಿತ್ರ

ವರ್ಗಾವಣೆ ಆದೇಶ ನೀಡಬೇಕು.

ಹಾಗೂ ಜಿಲ್ಲಾ ವರ್ಗಾವಣೆಯ ಕೆ.ಸಿ.ಎಸ್.ಆರ್ ನಿಯಮ 16ಎ ರ ಉಪಖಂಡ(2)ನ್ನು ಮರುಸ್ಥಾಪಿಸುವುದು, ಕೆಲವು ವಿಶೇಷ ಚೇತನ, ತೀವ್ರ ಅನಿವಾರ್ಯ ಹಾಗೂ ಆರೋಗ್ಯದ ಸಮಸ್ಯೆ ಇರುವ ಪ್ರಕರಣಗಳ ನಿಯೋಜನೆಗಳನ್ನು ಕೌನ್ಸಿಲಿಂಗ್ ಮೂಲಕ ನಿಯೋಜನೆ ಆದೇಶಗಳನ್ನು ಮಾಡಬೇಕು ಎಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಉಪಾಧ್ಯಕ್ಷ ಅಂಬರೀಶ್, ಗ್ರಾಮ ಲೆಕ್ಕಾಧಿಕಾರಿಗಳಾದ ಚೇತನ್, ಲೋಹಿತ್, ಸುರೇಶ್, ದಿವ್ಯ ಆರಾಧನಾ, ರಂಜಿತಾ, ಲಾವಣ್ಯ, ಯೋಗಿ, ವಿನಯ್, ಜಗನ್ನಾಥ್, ನದಿಸಾಬ್, ನಂದಿನಿ, ಶ್ವೇತ, ನಂದಿನಿ, ಅಂಜಲಿ ಹಾಗೂ ಇನ್ನಿತರರು ಭಾಗವಹಿಸಿದ್ದರು.

# ಮಕ್ಕಳಲ್ಲಿ ಅಪೌಷ್ಟಿಕತೆಯನ್ನು ಹೋಗಲಾಡಿಸಿ ದೈಹಿಕ ಬೆಳವಣಿಗೆ ವೃದ್ಧಿಸಿ

• **ಉದಯವಾಹಿನಿ,ಶಿಡ್ಲಘಟ್ಟ**

ಮಕ್ಕಳಲ್ಲಿ ಅಪೌಷ್ಟಿಕತೆಯನ್ನು ಹೋಗಲಾಡಿಸಿ ದೈಹಿಕ ಬೆಳವಣಿಗೆ ವೃದ್ಧಿಸಬೇಕಿದೆ. ಆಮೂಲಕ ಮಾನಸಿಕ ಸ್ವಾಸ್ಥ್ಯ ಹೆಚ್ಚಿದಾಗ ಕಲಿಕೆಯು ಸುಲಭ ಸಾಧ್ಯ ಎಂದು ಕ್ಷೇತ್ರಶಿಕ್ಷಣಾಧಿಕಾರಿ ಸಿ.ಎ.ನರೇಂದ್ರಕುಮಾರ್ ತಿಳಿಸಿದರು. ತಾಲ್ಲೂಕಿನ ಚೀಮಂಗಲ ಸರ್ಕಾರಿ ಪ್ರೌಢಶಾಲೆಯಲ್ಲಿ ಅಜೀಂಪ್ರೇಮ್ ಜಿ ಫೌಂಡೇಶನ್ ನಿಂದ ವಾರಪೂರ್ತಿ ಎಲ್ಲಾ ದಿನಗಳಲ್ಲಿಯೂ ವಿದ್ಯಾರ್ಥಿಗಳಿಗೆ ಉಚಿತ ಮೊಟ್ಟೆ, ಚಿಕ್ಕಿ, ಬಾಳೆಹಣ್ಣು ವಿತರಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ತಾಲ್ಲೂಕು ಅಕ್ಷರದಾಸೋಹ ಸಹಾಯಕ ನಿರ್ದೇಶಕ ಆಂಜನೇಯ ಮಾತನಾಡಿ, ಪೋಷಣ್ ಶಕ್ತಿನಿರ್ಮಾಣ್ ಯೋಜನೆಯಡಿ ಮಕ್ಕಳಿಗೆ ಬೇಕಾದ ಎಲ್ಲಾ ಪೋಷಕಾಂಶಯುತ ಆಹಾರವನ್ನು ಸರ್ಕಾರಿ ಶಾಲೆಗಳಲ್ಲಿ ಒದಗಿಸಲಾಗುತ್ತಿದೆ. ಮಕ್ಕಳಿಗೆ ಸಮತೋಲನ ಆಹಾರ ನೀಡುತ್ತಿರುವುದಲ್ಲದೇ ಹಾಲು, ಮೊಟ್ಟೆ, ಶೇಂಗಾ ಚಿಕ್ಕಿ, ಬಾಳೆಹಣ್ಣು ವಿತರಿಸಲಾಗುತ್ತಿದೆ. ಇದರಿಂದಾಗಿ ವಿದ್ಯಾರ್ಥಿಗಳ ಹಾಜರಾತಿ ಹೆಚ್ಚಳ, ಬೆಳವಣಿಗೆ ಮತ್ತು ವಿಕಾಸದ ಮೇಲೆ ಉತ್ತಮ ಪರಿಣಾವುಂಟಾಗಿದೆ.

ಈಗಾಗಲೇ ಸರ್ಕಾರ ಅನುದಾನದಲ್ಲಿ ಮಂಗಳವಾರ ಮತ್ತು ಶುಕ್ರವಾರದಂದು ಮೊಟ್ಟೆ ನೀಡಲಾಗುತ್ತಿದ್ದು, ವಾರದಲ್ಲಿ ಉಳಿದ ಸೋಮ, ಬುಧ, ಗುರು, ಶನಿವಾರದಂದು ಅಜೀಂಪ್ರೇಮ್‌ಜಿ ಫೌಂಡೇಶನ್ ಅನುದಾನದಲ್ಲಿ ನಾಲ್ಕು ದಿನಗಳ ಮೊಟ್ಟೆ, ಶೇಂಗಾ,ಚಿಕ್ಕಿ, ಬಾಳೆಹಣ್ಣು ವಿತರಿಸಲಾಗುವುದು ಎಂದರು. ಚೀಮಂಗಲ ಸರ್ಕಾರಿ ಪ್ರೌಢಶಾಲೆಯ ಮುಖ್ಯಶಿಕ್ಷಕ ಎಸ್.ಶಿವಶಂಕರ್ ಮಾತನಾಡಿ, ವಿದ್ಯಾರ್ಥಿಗಳು ಜಂಕ್‌ಫುಡ್ ಕಡೆಗೆ ಒಲವು ತೋರದೇ ಹಣ್ಣು, ತರಕಾರಿ, ಮೊಟ್ಟೆ,



ಉದಯವಾಹಿನಿ ಚಿತ್ರ

> ಸರ್ಕಾರವು ಮಕ್ಕಳ ಭೌತಿಕ ಮತ್ತು ಭೌದ್ಧಿಕ ಬೆಳವಣಿಗೆಗೆ ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿದೆ. ಸರ್ಕಾರಿ ಶಾಲೆಗಳಲ್ಲಿ ಗ್ರಾಮೀಣ ಮಕ್ಕಳ ಗುಣಾತ್ಮಕ ಶಿಕ್ಷಣಕ್ಕೆ ಒತ್ತು ನೀಡಲಾಗಿದ್ದು, ಮಕ್ಕಳ ಕಲಿಕಾಪ್ರಗತಿ, ದೈಹಿಕ ಮಾನಸಿಕ ಬೆಳವಣಿಗೆಯಲ್ಲಿ ಪೋಷಕರು ಮತ್ತು ಶಿಕ್ಷಕರು ಹೆಚ್ಚು ಗಮನವಹಿಸಬೇಕು
> 
> -ಸಿ.ಎ.ನರೇಂದ್ರಕುಮಾರ್, ಕ್ಷೇತ್ರಶಿಕ್ಷಣಾಧಿಕಾರಿ

ಸೊಪ್ಪು ಮತ್ತಿತರ ಉತ್ತಮ ಆಹಾರ ಪದಾರ್ಥಗಳನ್ನು ಹೆಚ್ಚೆಚ್ಚು ತಿನ್ನುವುದರಿಂದ ಜ್ಞಾಪಕ ಶಕ್ತಿ ಹೆಚ್ಚಳ, ಸೋಮಾರಿತನ ದೂರವಾಗಿ ಕಲಿಯಲು ಬೇಕಾದ ಮಾನಸಿಕ ಸಾಮರ್ಥ್ಯ ವೃದ್ಧಿಯಾಗುತ್ತದೆ.

ವಿದ್ಯಾರ್ಥಿದಿಸೆಯಿಂದಲೇ ಉತ್ತಮ ಆರೋಗ್ಯ ಕ್ರಮಗಳನ್ನು ಅನುಸರಿಸುವ ಅಗತ್ಯವಿದೆ ಎಂದರು. ಚೀಮಂಗಲ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಸರಸ್ವತಮ್ಮ, ಎಸ್‌ಡಿಎಂಸಿ ಅಧ್ಯಕ್ಷ ಉಮೇಶ್, ಬಿಆರ್‌ಪಿ ಕೆ.ಮಂಜುನಾಥ್ ಮಾತನಾಡಿದರು, ಸಿಆರ್‌ಪಿ ಹೇಮಲತಾ, ನಿವೃತ್ತ ಮುಖ್ಯಶಿಕ್ಷಕ ಸಿ.ಎಂ.ಮುನಿರಾಜು, ಶಿಕ್ಷಕ ಎಂ.ಶಿವಕುಮಾರ್, ನವೀನ್ ಕುಮಾರ್, ಶ್ರೀನಿವಾಸ್, ಎಸ್‌ಡಿಎಂಸಿ ಸದಸ್ಯರು ಉಪಸ್ಥಿತರಿದ್ದರು.

---

# ಸಕಾಲಕ್ಕೆ ರೈತರು ಸಾಲವನ್ನ ಹಿಂತಿರುಗಿಸಿ

• **ಉದಯವಾಹಿನಿ, ಶಿಡ್ಲಘಟ್ಟ**

ರೈತರು ಸಕಾಲಕ್ಕೆ ಸಾಲವನ್ನು ಬ್ಯಾಂಕ್ ಗೆ ಕಟ್ಟಿದರೆ ಸರ್ಕಾರದಿಂದ 8.25 % ರಷ್ಟು ಸಾಲ ಬಡ್ಡಿ ಮನ್ನಾ ಮಾಡುತ್ತದೆ. ಇಂತಹ ಅವಕಾಶಗಳನ್ನ ರೈತರು ಸದುಪಯೋಗಪಡಿಸಿಕೊಳ್ಳಿ ಎಂದು ಶಾಸಕ ಬಿ.ಎನ್ ರವಿಕುಮಾರ್ ಹೇಳಿದರು. ನಗರದ ರೇಷ್ಮೆಗೂಡು ಮಾರುಕಟ್ಟೆ ಬಳಿಯ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಆವರಣದಲ್ಲಿ ಹಮ್ಮಿಕೊಂಡಿದ್ದ 86 ನೇ ವರ್ಷದ ಸರ್ವಸದಸ್ಯರ ವಾರ್ಷಿಕ ಮಹಾಸಭೆ ಮತ್ತು ನೂತನ ಅಂಗಡಿ ಮಳಿಗೆಗಳನ್ನು ಉದ್ಘಾಟಿಸಿ ಮಾತನಾಡಿದರು.

ರೈತರು ಪಿಎಲ್ ಡಿ - ಬ್ಯಾಂಕಿನಿಂದ ಅನೇಕ ಸೌಲಭ್ಯಗಳನ್ನು ಪಡೆಯಬಹುದು. ಸಾಲದ ಹಣ ಸಕಾಲಿಕ ಮರುಪಾವತಿಯಾದರೆ ಬ್ಯಾಂಕು ಮತ್ತಷ್ಟು ಯೋಜನೆಗಳನ್ನು ಅಳವಡಿಸಲು ಸಹಾಯಕಾರಿಯಾಗುತ್ತದೆ.

ಕೋಚಿಮೂಲ್ ನಿರ್ದೇಶಕ ಶ್ರೀನಿವಾಸ್ ರಾಮಯ್ಯ ಮಾತನಾಡಿ,ರೈತರಿಗೆ ವ್ಯವಸಾಯ ಮಾಡಲು ಸಾಲ ಬೇಕಾಗಿತ್ತು ಆಗ ಅಂದಿನ ಸರ್ಕಾರಿ ಬ್ಯಾಂಕ್‌ಗಳು ಹೆಚ್ಚು ಸಾಲ ನೀಡುತ್ತಿರಲಿಲ್ಲ. ರೈತರಿಗಾಗಿಯೇ ಈ ಬ್ಯಾಂಕ್ ಸ್ಥಾಪಿಸಲಾಯಿತು. ಸಹಕಾರಿ ಸಂಸ್ಥೆಗಳಲ್ಲಿ ಯಾವುದೇ ರೀತಿಯ ರಾಜಕೀಯ ಮಾಡದೇ ಪ್ರತಿಯೊಬ್ಬ ರೈತರಿಗೂ ಸಮಾನವಾದ ಸೇವೆ ನೀಡಬೇಕು. ರೈತರು ಬ್ಯಾಂಕ್



ಉದಯವಾಹಿನಿ ಚಿತ್ರ

ನಲ್ಲಿ ತೆಗೆದುಕೊಂಡಿರುವ ಸಾಲವನ್ನು ಪಾವತಿ ಮಾಡಿ ಇತರೆ ರೈತರಿಗೆ ಅನೂಕೂಲ ಮಾಡಿಕೊಡಿ ಎಂದುರು. ಸಾಲ ಮನ್ನಾ ಮಾಡುತ್ತಾರೆ ಎಂದು ಬಡ್ಡಿಯನ್ನ ಕಟ್ಟದೇ ಇರುವ ರೈತರು ಸಾಲಾ ಮನ್ನಾ ಮಾಡ್ತಾರೆ ಎಂದು ಸಾಲ ಕಟ್ಟದೇ ಇದ್ದರೆ ನಿಮ್ಮ ಸಾಲವನ್ನು ನೀವೇ ತೀರಿಸಬೇಕು. ಆದ್ದರಿಂದ ನಿವು ಆದಷ್ಟು ಬೇಗ ನಿಮ್ಮ ಸಾಲವನ್ನು ಪಾವತಿ ಮಾಡಿ ಎಂದರು.

ನಿವೃತ್ತ ವ್ಯವಸ್ಥಾಪಕ ಸಿಎನ್ ಕೃಷ್ಣನ್ ವಾರ್ಷಿಕ ಮಹಾ ಸಭೆಯ ನಡಾವಳಿ ಓದಿ ಮಂಡಿಸಿದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಸಹಕಾರ ಕೃಷಿ ಮತ್ತು ಗ್ರಾಮೀಣ ಅಭಿವೃದ್ಧಿ ಬ್ಯಾಂಕ್ ಅಧ್ಯಕ್ಷ ಡಿ.ಸಿ ರಾಮಚಂದ್ರ, ಉಪಾಧ್ಯಕ್ಷ ನಾರಾಯಣಪ್ಪ,ಯಲವಾಲ ಸೊಣ್ಣೇಗೌಡ,ನಿರ್ದೇಶಕರುಗಳಾದ ಬಂಕ್ ಮುನಿ

> 2024 ರಲ್ಲಿ ರಾಜ್ಯ ಸರ್ಕಾರ ಸಾಲ ಮನ್ನಾ ಮಾಡಿತು. ರಾಜ್ಯ ಸರ್ಕಾರಕ್ಕೆ ಕೃತಜ್ಞತೆಗಳನ್ನು ಸಲ್ಲಿಸುತ್ತೇನೆ. ರಾಜ್ಯ ಸರ್ಕಾರ ಸಾಲ ಮನ್ನಾ ಮಾಡಿದ್ದು, ನಮ್ಮ ಶಿಡ್ಲಘಟ್ಟ ವಿಧಾನಸಭಾ ಕ್ಷೇತ್ರದ ರೈತರಿಗೆ ಸುಮಾರು 1.82 ಕೋಟಿ ಸಾಲ ಮನ್ನಾ ಮಾಡಿದೆ. ಅದೇ ರೀತಿ ಇನ್ನೂ ಸುಮಾರು 2.22 ಕೋಟಿ ರೈತರು ಸಾಲ ಕಟ್ಟಿದ್ದರೆ, 1.5 ಕೋಟಿ ಹೆಚ್ಚಿನ ಹಣ ಸಾಲ ಮನ್ನಾ ಆಗುತ್ತಿತ್ತು
> 
> -ಬಿ.ಎನ್ ರವಿಕುಮಾರ್, ಶಾಸಕ

ಯಪ್ಪ, ಡಿಬಿ ವೆಂಕಟೇಶ್,ಕೆ.ಎಂ ಭೀಮೇಶ್, ಎಂಪಿ ರವಿ,ನಾರಾಯಣಸ್ವಾಮಿ,ಮುರಳಿ,

ಕೆ ಎಂ ಬೈರೇಗೌಡ,ನಗರಸಭೆ ಅಧ್ಯಕ್ಷ ವೆಂಕಸ್ವಾಮಿ ,ಉಪಾಧ್ಯಕ್ಷ ರೂಪಾ ನವೀನ್,ಎಸ್ ಎಂ ರಮೇಶ್, ಸೀಕಲ್ ಆನಂದ ಗೌಡ, ಆಂಜನೇಯರೆಡ್ಡಿ,ರಾಯಪ್ಪನಹಳ್ಳಿ ಅಶ್ವತ್ಥನಾರಾಯಣರೆಡ್ಡಿ,ಡಾ.ಧನಂಜಯ್ ರೆಡ್ಡಿ,ವಕೀಲ ಸಂಘದ ಅಧ್ಯಕ್ಷ ಎ ನಾರಾಯಣಸ್ವಾಮಿ, ಅನಸೂಯಮ್ಮ,ಸುನಂದಮ್ಮ,ಬ್ಯಾಂಕ್ ಸಿಬ್ಬಂದಿ ಇದ್ದರು.

# ಭ್ರೂಣ ಹತ್ಯೆ ಪ್ರಕರಣಗಳು ಕಂಡು ಬಂದಲ್ಲಿ ಕಾನೂನು ಕ್ರಮ: ಡಾ|| ಚಂದ್ರಶೇಖರ್



ಉದಯವಾಹಿನಿ ಚಿತ್ರ

• **ಉದಯವಾಹಿನಿ, ತುಮಕೂರು**

ಜಿಲ್ಲೆಯ ಯಾವುದೇ ಆಸ್ಪತ್ರೆಯಲ್ಲಿ ಭ್ರೂಣ ಹತ್ಯೆ, ಲಿಂಗಪತ್ತೆ ಪ್ರಕರಣಗಳು ಕಂಡು ಬಂದಲ್ಲಿ ಅಂತಹ ವೈದ್ಯರ ಮೇಲೆ ಕ್ರಿಮಿನಲ್ ಮೊಕದ್ದಮೆ ದಾಖಲು ಮಾಡಲಾಗುತ್ತದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ|| ಚಂದ್ರಶೇಖರ್ ತಿಳಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಪಿಸಿಪಿಎನ್‌ಡಿಟಿ ಜಿಲ್ಲಾ ಸಲಹಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಭ್ರೂಣ ಹತ್ಯೆ, ಲಿಂಗಪತ್ತೆ ಪ್ರಕರಣಗಳನ್ನು ನಿಯಂತ್ರಿಸುವ ಉದ್ದೇಶದಿಂದ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಮತ್ತು ನಿಷ್ಕ್ರಿಯೆಗೊಂಡ ಎಲ್ಲಾ ಸ್ಕ್ಯಾನಿಂಗ್ ಮಿಷನ್‌ಗಳ ವರದಿಯನ್ನು ಸಲ್ಲಿಸುವಂತೆ ಎಲ್ಲಾ ಆಸ್ಪತ್ರೆ , ಕ್ಲಿನಿಕ್‌ಗಳಿಗೂ ಸೂಚನೆ ನೀಡಲಾಗುತ್ತದೆ ಎಂದು ತಿಳಿಸಿದರು. ಹೊಸದಾಗಿ ಸ್ಕ್ಯಾನಿಂಗ್ ಯಂತ್ರ ಖರೀದಿಸುತ್ತಿರುವ ಸೆಂಟರ್‌ಗಳಿಗೆ ಹಾಗೂ ಡೆಮೋ ನೀಡಲು ಅನುಮತಿ ಕೋರಿರುವ ಸ್ಕ್ಯಾನಿಂಗ್ ಯಂತ್ರಗಳಿಗೆ ಪಿಸಿಪಿಎನ್‌ಡಿಟಿ ಕಾಯ್ದೆಯನ್ವಯ ನಿಬಂಧನೆಗಳಿಗನುಗುಣವಾಗಿ ಅನುಮತಿ ನೀಡಲಾಗುತ್ತದೆ. ಜಿಲ್ಲೆಯಲ್ಲಿ ಯಾವುದೇ ಅನಧಿಕೃತ ಸ್ಕ್ಯಾನಿಂಗ್ ಯಂತ್ರಗಳು ಕಾರ್ಯಾರಂಭಗೊಳ್ಳದಂತೆ ಕ್ರಮವಹಿಸಲಾಗುತ್ತಿದೆ ಎಂದರು. ಜಿಲ್ಲಾ ಕುಟುಂಬ ಕಲಾ ಣಾಧಿಕಾರಿ ಡಾ. ಮೋಹನ್, ಪ್ರಸೂತಿ ಮತ್ತು ಸ್ತ್ರೀರೋಗ ತಜ್ಞ ಡಾ.ಲೋಕೇಶ್, ಮಕ್ಕಳ ವೈದ್ಯ ಡಾ. ಸಂತೋಷ್, ವಕೀಲ ಕುಮಾರ ಸ್ವಾಮಿ ಎಂ.ಎನ್, ಸಮಾಜ ಸೇವಕರಾದ ರಾಣಿ ಚಂದ್ರಶೇಖರ್ ಹಾಜರಿದ್ದರು.

---

# ಎಸ್‌ಎಫ್‌ಐ ರಾಜ್ಯ ಸಮ್ಮೇಳನಕ್ಕೆ ಚಾಲನೆ

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ನಗರದ ಕೆಇಬಿ ಸಮುದಾಯ ಭವನದಲ್ಲಿ ಭಾರತ ವಿದ್ಯಾರ್ಥಿ ಫೆಡರೇಷನ್ (ಎಸ್ ಎಫ್ ಐ) ರಾಜ್ಯ ಮಟ್ಟದ 16ನೇ ಸಮ್ಮೇಳನಕ್ಕೆ ಗುರುವಾರ ಚಾಲನೆ ನೀಡಲಾಯಿತು.

ಪದ್ಮಶ್ರೀ ಪಿಂಡಿಪಾಪನಹಳ್ಳಿ ಮುನಿ ವೆಂಕಟಪ್ಪ ಮತ್ತು ಕರ್ನಾಟಕ ಜಾನಪದ ಅಕಾಡೆಮಿ ಅಧ್ಯಕ್ಷ ಗೊಲ್ಲಹಳ್ಳಿ ಶಿವಪ್ರಸಾದ್ ತಮಟೆ ಬಾರಿಸುವ ಮೂಲಕ ಸಮ್ಮೇಳನ ಉದ್ಘಾಟಿಸಿದರು. ಶನಿವಾರ (ಸೆ.28)ರವರೆಗೆ ಸಮ್ಮೇಳನ ನಡೆಯಲಿದೆ. ರಾಜ್ಯದ ವಿವಿಧ ಜಿಲ್ಲೆಗಳ 300ಕ್ಕೂ ಹೆಚ್ಚು ಪ್ರತಿನಿಧಿಗಳು ಸಮ್ಮೇಳನದಲ್ಲಿ ಭಾಗವಹಿಸಿದ್ದಾರೆ. ನಗರದ ಒಕ್ಕಲಿಗರ ಸಮುದಾಯ ಭವನದಿಂದ



ಉದಯವಾಹಿನಿ ಚಿತ್ರ

ಮೆರವಣಿಗೆ ಆರಂಭಿಸಿದ ಸಂಘಟನೆ ಸದಸ್ಯರು ಹಾಗೂ ವಿದ್ಯಾರ್ಥಿಗಳು ಕೆಇಬಿ ಸಮುದಾಯ ಭವನದ ಬಳಿ ಸಮಾವೇಶಗೊಂಡರು. ಗ.ನ. ಅಶ್ವತ್ಥ್ ಕ್ರಾಂತಿಗೀತೆಗಳನ್ನು ಹಾಡಿದರು.

ಎಸ್ ಎಫ್ ಐ ರಾಷ್ಟ್ರೀಯ ಅಧ್ಯಕ್ಷ ವಿ.ಪಿ. ಸಾನು, ಕಾರ್ಯದರ್ಶಿ ಆದರ್ಶ್, ಉಪಾಧ್ಯಕ್ಷ ನಿತೀಶ್ ನರೇನ್, ಸರ್ದಾರ್ ಚಾಂದ್ ಪಾಷ, ಡಾ.ಅನಿಲ್ ಕುಮಾರ್, ರಾಷ್ಟ್ರೀಯ ಮತ್ತು ರಾಜ್ಯ ಪದಾಧಿಕಾರಿಗಳು ಭಾಗಿಯಾಗಿದ್ದಾರೆ.

# ಭಾರತವನ್ನು ವಿಶ್ವಗುರುವಾಗಿಸುವ ಪಣತೊಟ್ಟಿರುವ ಪ್ರಧಾನಿ ಮೋದಿ

• **ಉದಯವಾಹಿನಿ, ಕೋಲಾರ**

ಭಾರತವನ್ನು ವಿಶ್ವಗುರುವಾಗಿಸುವ ಪಣವನ್ನು ಪ್ರಧಾನಿ ಮೋದಿ ಪಟ್ಟಿದ್ದಾರೆ ಎಂದು ರಾಜ್ಯ ಕಾರ್ಯಕಾರಿಣಿ ಸಮಿತಿ ಸದಸ್ಯ ಲಕ್ಷ್ಮಣಗೌಡ ತಿಳಿಸಿದರು,

ತಾಲ್ಲೂಕಿನ ಆರಾಭಿಕೊತ್ತನೂರು ಗ್ರಾಮದಲ್ಲಿ ಬಿಜೆಪಿಯ ವತಿಯಿಂದ ಪ್ರಧಾನಮಂತ್ರಿ ನರೇಂದ್ರ ಮೋದಿಯವರ 74 ನೇ ಜಯಂತಿ ಹಾಗೂ ಶ್ರೀ ಪಂಡಿತ್ ದೀನದಯಾಳ್ ಉಪಾಧ್ಯಾಯರ 108ನೇ ಜಯಂತಿಯನ್ನು ಗಿಡ ನೆಡುವುದರ ಮೂಲಕ ಕಾರ್ಯಕ್ರಮ ಕ್ಕೆ ಚಾಲನೆ ನೀಡಿದರು.

ನಂತರ ಸುದ್ದಿಗಾರರೊಂದಿಗೆ ಮಾತನಾಡಿ ಮೋದಿಯವರ ಮೂರನೇ ಅವಧಿಯು ಅವರ ಇಂದಿನ ಅಧಿಕಾರ ಅವಧಿಯಲ್ಲಿ ಹಾಕಿದ ಅಡಿಪಾಯದ ಮೇಲೆ



ಉದಯವಾಹಿನಿ ಚಿತ್ರ

ನಿರ್ಮಾಣ ಮಾಡುವ ನಿರೀಕ್ಷೆ ಇದೆ, ತಾಂತ್ರಿಕ ನಾವಿನ್ಯತೆ, ಮೂಲಸೌಕರ್ಯ ಅಭಿವೃದ್ಧಿ ಮತ್ತು ಅಂತರಾಷ್ಟ್ರೀಯ ರಾಜ ತಾಂತ್ರಿಕತೆಗೆ ನವೀಕೃತ ಒತ್ತು ನೀಡಿ, ಭಾರತವನ್ನು ಜಾಗತಿಕ ಶಕ್ತಿ ಕೇಂದ್ರವನ್ನಾಗಿ ಮತ್ತಷ್ಟು ಬೆಳೆಯುವಂತೆ ಮಾಡಿದೆ ಎಂದರು.

ಬಿಜೆಪಿಯ ತಾಲ್ಲೂಕು ಅಧ್ಯಕ್ಷ ಸಿ.ಡಿ ರಾಮಚಂದ್ರ ಮಾತನಾಡಿ ಸಬ್ ಕಾ ಸಾಥ್, ಸಬ್ ಕಾ ವಿಕಾಸ್, ಸಬ್ ಕಾ ವಿಶ್ವಾಸ್ ಎಂದರೆ ಎಲ್ಲರೊಂದಿಗೆ, ಎಲ್ಲರಿಗೂ ಅಭಿವೃದ್ಧಿ, ಎಲ್ಲರಿಗೂ ನಂಬಿಕೆ ಎಂಬ ಘೋಷಣೆಯೊಂದಿಗೆ ಸಮಗ್ರ ಅಭಿವೃದ್ಧಿ ಆಧಾರಿತ ಮತ್ತು ಭ್ರಷ್ಟಾಚಾರ ಮುಕ್ತ ವಿಧಾನದ ಮೂಲಕ ಆಡಳಿತದಲ್ಲಿ ಮೂಲಭೂತ ಬದಲಾವಣೆಯನ್ನು ತಂದರು ಎಂದರು. ಈ ಕಾರ್ಯಕ್ರಮವು ಕೋಲಾರ ಗ್ರಾಮಾಂತರ ಮಂಡಲ ಅಧ್ಯಕ್ಷ ಕೆಂದಟ್ಟಿ ಚಂದ್ರಶೇಖರ್ ನೇತೃತ್ವದಲ್ಲಿ ಹಮ್ಮಿಕೊಳ್ಳಲಾಗಿತ್ತು,

ಈ ಕಾರ್ಯಕ್ರಮದಲ್ಲಿ ಜಿಲ್ಲಾ ರೈತ ಮೋರ್ಚಾ ಪ್ರಧಾನ ಕಾರ್ಯದರ್ಶಿ ಇ. ಶಿವಣ್ಣ, ರಾಜ್ಯ ರೈತ ಮೋರ್ಚಾ ಸದಸ್ಯ ನಾರಾಯಣಶೆಟ್ಟಿ, ಜಿಲ್ಲಾ ಕಾರ್ಯದರ್ಶಿ ಓಹಿಲೇಶ್, ಕಾರ್ಯಕರ್ತರಾದ ಎನ್ ಚಂದ್ರಶೇಖರ್, ಶ್ರೀನಿವಾಸ ಆಚಾರಿ, ಮುರಳಿ, ಶ್ರೀನಿವಾಸಪ್ಪ ಹಾಗೂ ಗ್ರಾಮಸ್ಥರು ಹಾಜರಿದ್ದರು.

---

# ದಸರಾ ಸಿದ್ಧತೆ: ನಿಗದಿಯಾಗದ ಟೆಂಡರ್ ಪ್ರಕ್ರಿಯೆ

## • ಈಗಾಗಲೇ ಮೈದಾನವನ್ನು ಸ್ವಚ್ಛಗೊಳಿಸಲಾಗಿದೆ, ಆದರೆ ಸಭಾಂಗಣ ನಿರ್ಮಾಣ ಮಾಡುವವರು ಮಾತ್ರ ಇನ್ನೂ ನಿಗದಿಯಾಗಿಲ್ಲ

• **ಉದಯವಾಹಿನಿ, ಗೋಣಿಕೊಪ್ಪಲು**

ಇಲ್ಲಿನ ಕಾವೇರಿ ದಸರಾ ಸಮಿತಿಯ ದಸರಾ ಜನೋತ್ಸವ ಆರಂಭಕ್ಕೆ ಕೇವಲ 7 ದಿನಗಳು ಉಳಿದಿದ್ದರೂ ಸಭಾಂಗಣ ನಿರ್ಮಾಣಕ್ಕೆ ಇನ್ನೂ ಟೆಂಡರ್ ನಿಗದಿಯಾಗಿಲ್ಲ. ಜಿಲ್ಲಾಧಿಕಾರಿಗಳು ಈ ಸಂಬಂಧ ಟೆಂಡರ್ ಕರೆದಿದ್ದು, ದಸರಾ ಕಾವೇರಿ ದಸರಾ ಸಮಿತಿ ಅಧ್ಯಕ್ಷ ಕುಲ್ಲಚಂಡ ಪ್ರಮೋದ್ ಗಣಪತಿ ಬುಧವಾರ ಸಂಜೆ ಟೆಂಡರ್ ಸಭೆಯಲ್ಲಿ ಪಾಲ್ಗೊಂಡಿದ್ದರು.

ದಸರಾ ಜನೋತ್ಸವ ಸ್ಥಳೀಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮೈದಾನದಲ್ಲಿ 45 ವರ್ಷಗಳಿಂದಲೂ ನಡೆದುಕೊಂಡು ಬಂದಿದೆ. ಈ ಮೈದಾನದಲ್ಲಿ ಸಭಾಂಗಣ ನಿರ್ಮಿಸಿ 9 ದಿನಗಳ ಕಾಲ ಸಾಂಸ್ಕೃತಿಕ ಕಾರ್ಯಕ್ರಮ ನಡೆಸಲಾಗುತ್ತಿದೆ. ಈ ಬಾರಿಯೂ ಕೂಡ ಇದೇ ಮೈದಾನದಲ್ಲಿ ಸಭಾಂಗಣ ನಿರ್ಮಿಸಲು ಈಗಾಗಲೆ ಮೈದಾನವನ್ನು ಸ್ವಚ್ಛಗೊಳಿಸಲಾಗಿದೆ. ಆದರೆ, ಸಭಾಂಗಣ ನಿರ್ಮಾಣ ಮಾಡುವವರು ಮಾತ್ರ ಇನ್ನೂ ನಿಗದಿಯಾಗಿಲ್ಲ.

> ದಸರಾ ಮೈದಾನಕ್ಕೆ ತೆರಳುವ ರಸ್ತೆ ಹೊಂಡ ಬಿದ್ದಿರುವುದು ಸಭಾಂಗಣ ನಿರ್ಮಾಣಕ್ಕೆ ಸಾಕಾಗದ ಕಾಲಾವಧಿ ಮುಂಚಿತವಾಗಿಯೇ ಟೆಂಡರ್ ಕರೆಯಬೇಕಿತ್ತು ಎನ್ನುವ ನಾಗರಿಕರು ಕೊನೆಗಳಿಗೆಯಲ್ಲೇ ಕಸರತ್ತು ಏಕೆ ಎಂಬ ಪ್ರಶ್ನೆ, ದಸರಾ ಸಭಾಂಗಣ ನಿರ್ಮಾಣದ ಟೆಂಡರ್ ಪ್ರಕ್ರಿಯೆ ಇನ್ನೂ ಮುಗಿದಿಲ್ಲ. ಸಭಾಂಗಣ ನಿರ್ಮಾಣವಾದರೆ ಉಳಿದ ಎಲ್ಲಾ ಕೆಲಸ ಕಾರ್ಯಗಳನ್ನು ಮುಗಿಸಲಿದ್ದೇವೆ
> 
> -ಕುಲ್ಲಚಂಡ ಪ್ರಮೋದ್ ಗಣಪತಿ, ಕಾವೇರಿ ದಸರಾ ಸಮಿತಿ ಅಧ್ಯಕ್ಷ

ಹಿಂದಿನ ವರ್ಷಗಳಲ್ಲಿ ಮೂಡುಬಿದರೆಯ ಮೋಹನ್ ಆಳ್ವ, ಮೈಸೂರು, ಪುತ್ತೂರಿನವರೇ ಅಲ್ಲದೆ ಸ್ಥಳೀಯ ಗೋಣಿಕೊಪ್ಪಲಿನವರು ಸಭಾಂಗಣ ನಿರ್ಮಿಸಿದ್ದರು. 2 ಸಾವಿರ ಜನ ಕುಳಿತುಕೊಳ್ಳಲು



ಉದಯವಾಹಿನಿ ಚಿತ್ರ

ಆಸನ, ವಿದ್ಯುತ್, ಧ್ವನಿವರ್ಧಕ, ಎಲ್ಲವೂ ಸಭಾಂಗಣ ನಿರ್ಮಾಣ ಜವಾಬ್ದಾರಿ ಹೊತ್ತವರದೇ ಆಗುತ್ತಿತ್ತು. ಈ ಸಭಾಂಗಣದಲ್ಲಿ ರಾಜ್ಯ ಮತ್ತು ರಾಷ್ಟ್ರಮಟ್ಟದ ಕಲಾವಿದರು ಬಂದು ಸಾಂಸ್ಕೃತಿಕ ರಸದೌತಣ ನೀಡಿದ್ದಾರೆ. ಹೀಗಾಗಿ, ದಸರಾ ಉತ್ಸವ ಎಂದರೆ ಸಭಾಂಗಣದ ಸೌಂದರ್ಯ ಮತ್ತು ವ್ಯವಸ್ಥೆಯೂ ಬಹು ಮುಖ್ಯವಾಗಿದೆ.

ಸಭಾಂಗಣ ವ್ಯವಸ್ಥೆ ಆಯಿತೆಂದರೆ ಉಳಿದ ವ್ಯವಸ್ಥೆ ಆದಂತೆಯೇ. ಸಭಾಂಗಣ ನಿರ್ಮಾಣಕ್ಕೆ ಕನಿಷ್ಠವೆಂದರೂ 10 ದಿನಗಳು ಬೇಕಾಗುತ್ತದೆ.

### ಸಮಸ್ಯೆಗಳು ಕಾಡುವ ಆತಂಕ

ಈ ಬಗ್ಗೆ ಮಾತನಾಡಿದ ನಾಗರಿಕ ಹೋರಾಟ ಸಮಿತಿ ಮುಖಂಡ ನಾರಾಯಣಸ್ವಾಮಿ ನಾಯ್ಡು, 'ದಸರಾ ಉತ್ಸವದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ವೀಕ್ಷಿಸಲು ಸಾವಿರಾರು ಸಂಖ್ಯೆಯಲ್ಲಿ ಜನರು ಆಗಮಿಸುತ್ತಾರೆ. ಇಂಥ ಸಂದರ್ಭದಲ್ಲಿ ಸುವ್ಯವಸ್ಥಿತ ಬೀದಿ ಬದಿಯ ವಿದ್ಯುತ್ ದೀಪ, ಚರಂಡಿ ಮತ್ತು ರಸ್ತೆ ಸ್ವಚ್ಛತೆ ಇಲ್ಲದಿದ್ದರೆ ಅನೇಕ ಸಮಸ್ಯೆಗಳು ಕಾಡುವ ಆತಂಕವಿದೆ. ಇದಕ್ಕೆ ದಸರಾ ಸಮಿತಿ ಅವಕಾಶ ಮಾಡಿ ಕೊಡಬಾರದು' ಎಂದು ಹೇಳಿದರು.

ಆದರೆ, ಈ ಬಾರಿ ಇನ್ನೂ ಟೆಂಡರ್ ಪ್ರಕ್ರಿಯೆ ಮುಗಿಯದಿರುವುದರಿಂದ ದಸರಾ ಸಮಿತಿ ಆಯೋಜಕರಿಗೆ ತಲೆ ನೋವಾಗಿ ಪರಿಣಮಿಸಿದೆ.

**ಆಯೋಜಕರಿಗೆ ತಲೆ ನೋವು**

ಅಲ್ಲದೆ, ದಸರಾ ಸಭಾಂಗಣಕ್ಕೆ ತೆರಳುವ ರಸ್ತೆಗಳೂ ಹೊಂಡ ಬಿದ್ದು ಹಾಳಾಗಿವೆ. ಪಾಲಿಬೆಟ್ಟಕ್ಕೆ ತೆರಳುವ ರಸ್ತೆ, ಸರ್ಕಾರಿ ಆಸ್ಪತ್ರೆ ಹಿಂಭಾಗದ ರಸ್ತೆಯನ್ನು ವಿವಿಧ ಕಾರಣಗಳಿಂದ ಅಗೆದಿರುವುದರಿಂದ ರಸ್ತೆ ಹೊಂಡ ಹಾಗೆಯೇ ಉಳಿದಿದೆ. ಬೀದಿ ಬದಿಯ ವಿದ್ಯುತ್ ದೀಪಗಳು ದುರಸ್ತಿಯಾಗಬೇಕಿದೆ. ವಿಜಯದಶಮಿ ದಿನ ರಾತ್ರಿ ವೇಳೆ ಶೋಭಾಯಾತ್ರೆಯ ದಶಮಂಟಪಗಳು ತೆರಳುವ ಬೈಪಾಸ್ ರಸ್ತೆಯಲ್ಲಿನ ಹೊಂಡಗಳನ್ನು ಇನ್ನೂ ಮುಚ್ಚಿಲ್ಲ. ಇವುಗಳ ಜತೆಗೆ, ಪಟ್ಟಣದ ಮುಖ್ಯ ರಸ್ತೆ ಮತ್ತು ಬೈಪಾಸ್ ರಸ್ತೆಯ ಇಕ್ಕೆಲಗಳ ಚರಂಡಿಗಳು ದುರಸ್ತಿಯಾಗಿಲ್ಲ. ಇವುಗಳಲ್ಲಿ ಹೋಟೆಲ್, ಬೇಕರಿ ಮೊದಲಾದವುಗಳ ನೀರು ನಿಂತು ಕೆಲವು ಕಡೆ ದುರ್ವಾಸನೆ ಬೀರುತ್ತಿದೆ.

---


**ಉದಯವಾಹಿನಿ**

**ಪ್ರಾದೇಶಿಕ**

ಶುಕ್ರವಾರ 27 ಸೆಪ್ಟೆಂಬರ್ 2024




## ಮಿನಿ ನ್ಯೂಸ್

### ಪೊಲೀಸ್ ವಾಣಿಜ್ಯ ಮತ್ತು ಕಂಪ್ಯೂಟರ್ ತರಬೇತಿ ಶಾಲೆಗೆ ಶೇ. 100ರಷ್ಟು ಫಲಿತಾಂಶ

• **ಉದಯವಾಹಿನಿ ಕೋಲಾರ**

ಕಳೆದ ಜುಲೈ, 2024 ಮಾಹೆಯಲ್ಲಿ ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ಬೆಂಗಳೂರು ರವರು ನಡೆಸಿದಂತಹ ಕಂಪ್ಯೂಟರ್ ಪರೀಕ್ಷೆಯಲ್ಲಿ ಕೋಲಾರ ನಗರದ ಗಲ್‌ಪೇಟೆಯಲ್ಲಿರುವ ಪೊಲೀಸ್ ವಾಣಿಜ್ಯ ಮತ್ತು ಕಂಪ್ಯೂಟರ್ ತರಭೇತಿ ಶಾಲೆಯು ಕಂಪ್ಯೂಟರ್ ಪರೀಕ್ಷೆಯಲ್ಲಿ ಶೇ. 100 ರಷ್ಟು ಟೈಪಿಂಗ್ ಪರೀಕ್ಷೆಯಲ್ಲಿ ಶೇ. 90 ರಷ್ಟು ಫಲಿತಾಂಶ ಪಡೆದಿದ್ದು, ಎನ್.ಶ್ರೀನಿಧಿ, ಆರ್, ವಿನೋದ್, ಲಾವಣ್ಯ, ಕುಸುಮ, ವಿನೋದ್, ಹರ್ಷಿತ, ವಿಜೇಂದ್ರರಾವ್ ವಿದ್ಯಾರ್ಥಿಗಳು ಅತ್ಯುನ್ನತ ಶ್ರೇಣಿಯ ಫಲಿತಾಂಶ ಪಡೆದಿದ್ದಾರೆ.

ಶೇ.100ರಷ್ಟು ಫಲಿತಾಂಶಕ್ಕಾಗಿ ಶ್ರಮಿಸಿದ ಪ್ರಾಂಶುಪಾಲರಾದ ಡಿ.ಎಂ.ನಾಗರಾಜ ಹಾಗೂ ಪೊಲೀಸ್ ಅಧೀಕ್ಷಕರ ಆಪ್ತ ಸಹಾಯಕರು, ಎಹೆಚ್‌ಸಿ ಬೋಧಕರಾದ ಎನ್.ಮಂಜುನಾಥ ಮತ್ತು ವಿದ್ಯಾರ್ಥಿಗಳನ್ನು ಜಿಲ್ಲಾ ಪೊಲೀಸ್ ಅಧೀಕ್ಷಕರಾದ ಬಿ.ನಿಖಿಲ್, ಅಪರ ಪೊಲೀಸ್ ಅಧೀಕ್ಷಕರಾದ ಸಿ.ಆರ್.ರವಿಶಂಕರ್, ಹೆಚ್.ಸಿ ಜಗದೀಶ್, ಹಾಗೂ ಡಿ.ಎಆರ್ ಪ್ರಭಾರ ಡಿವೈಎಸ್‌ಪಿ ಮಹಾಲಿಂಗಪ್ಪ ಜುಮನಾಳ ರವರು ಅಭಿನಂದಿಸಿದ್ದಾರೆ.

### ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರಿಂದ ದಸರಾ ಕ್ರೀಡಾಕೂಟಕ್ಕೆ ಚಾಲನೆ

• **ಉದಯವಾಹಿನಿ ತುಮಕೂರು**

ಮನುಷ್ಯನು ಸದೃಢಗೊಂಡು ಆರೋಗ್ಯವಂತನಾಗಿ ಜೀವಿಸಲು ಕ್ರೀಡೆಗಳು ಸಹಕಾರಿಯಾಗಿದ್ದು, ಜಿಲ್ಲೆಯ ಯುವಕ/ಯುವತಿಯರಿಗೆ ಕ್ರೀಡೆಯಲ್ಲಿ ಭಾಗವಹಿಸಲು ಅವಕಾಶ ಮಾಡಿಕೊಟ್ಟು ಕ್ರೀಡಾ ಮನೋಭಾವವನ್ನು ಹೆಚ್ಚಿಸುವ ನಿಟ್ಟಿನಲ್ಲಿ ದಸರಾ ಕ್ರೀಡಾಕೂಟವನ್ನು ಆಯೋಜಿಸಲಾಗಿದೆ ಎಂದು ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಹೇಳಿದರು.

ದಸರಾ ಕ್ರೀಡಾಕೂಟದ ಅಂಗವಾಗಿ ಜಿಲ್ಲಾ ಮಟ್ಟದ ಬಾಲ್ ಬ್ಯಾಡ್ಮಿಂಟನ್ ಚಾಂಪಿಯನ್ ಶಿಪ್‌ಗೆ ನಗರದ ಸರ್ಕಾರಿ ಪದವಿಪೂರ್ವ ಕಾಲೇಜು ಮೈದಾನದಲ್ಲಿಂದು ಚಾಲನೆ ನೀಡಿ ಮಾತನಾಡಿದ ಅವರು, ಆರೋಗ್ಯವೇ ಭಾಗ್ಯ ಎಂಬುದು ಕನ್ನಡದ ಜನಪ್ರಿಯ ಗಾದೆಯಾಗಿದೆ. ಮನುಷ್ಯನ ದೇಹ ಮತ್ತು ಮನಸ್ಸುಗಳು ಆರೋಗ್ಯವಾಗಿರಲು ಕ್ರೀಡೆಗಳು ಪ್ರಯೋಜನಕಾರಿಯಾಗಿವೆ ಎಂದರು. ಬಾಲ್ ಬ್ಯಾಡ್ಮಿಂಟನ್ ಕ್ರೀಡೆಗೆ ಚಾಲನೆ ನೀಡಿದ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕೆ.ವಿ. ಅಶೋಕ್ ಅವರು ಸ್ವತಃ ಬಾಲ್ ಬ್ಯಾಡ್ಮಿಂಟನ್ ಕ್ರೀಡೆಯಲ್ಲಿ ಪಾಲ್ಗೊಂಡರು. ಯುವ ಜನ ಕ್ರೀಡಾ ಮತ್ತು ಸಬಲೀಕರಣ ಇಲಾಖೆ ಸಹಾಯಕ ನಿರ್ದೇಶಕ ರೋಹಿತ್ ಗಂಗಾಧರ್, ಜಿಲ್ಲಾ ಬ್ಯಾಡ್ಮಿಂಟನ್ ಕಾರ್ಯದರ್ಶಿ ಚಿದಾನಂದ್, ಟಿಡಿಬಿಬಿಎ ಕಾರ್ಯದರ್ಶಿ ದಿವಾಕರ್, ಖ್ಯಾತ ಕಬ್ಬಡಿ ಕೋಚ್ ಇಸ್ಮಾಯಿಲ್ ಮತ್ತಿತರರು ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

### ವೈಭವಯುತವಾಗಿ ತುಮಕೂರು ದಸರಾ ಆಚರಣೆ : ಜಿ.ಪ್ರಭು

• **ಉದಯವಾಹಿನಿ ತುಮಕೂರು**

ಜಿಲ್ಲಾಡಳಿತದ ವತಿಯಿಂದ ಮೊದಲ ಬಾರಿಗೆ ನಡೆಸಲಾಗುತ್ತಿರುವ ತುಮಕೂರು ದಸರಾ ಕಾರ್ಯಕ್ರಮವನ್ನು ವೈಭವಯುತವಾಗಿ ಆಚರಿಸಲು ಅಗತ್ಯ ರೂಪುರೇಷೆಗಳನ್ನು ತಯಾರಿಸಿಕೊಳ್ಳುವಂತೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಜಿ.ಪ್ರಭು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.



ಉದಯವಾಹಿನಿ ಚಿತ್ರ

ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ತುಮಕೂರು ದಸರಾ ಆಚರಣೆ ಪೂರ್ವ ಭಾವಿ ಸಭೆಯ ಅಧ್ಯಕ್ಷತೆವಹಿಸಿ ಮಾತನಾಡಿದ ಅವರು, ನಗರದ ಗುಬ್ಬಿ ವೀರಣ್ಣ ಕಲಾ ಕ್ಷೇತ್ರದಲ್ಲಿ ತುಮಕೂರು ದಸರಾ ಆಚರಣೆ ಅಂಗವಾಗಿ ವಿವಿಧ ಕಾಲೇಜು ವಿದ್ಯಾರ್ಥಿಗಳಿಂದ ಯುವ ದಸರಾ ಹಾಗೂ ಜಿಲ್ಲೆಯ ಸ್ಥಳೀಯ ಕಲಾವಿದರಿಂದ ಪ್ರತಿನಿತ್ಯ ಸಾಂಸ್ಕೃತಿಕ ಸಂಜೆ ಕಾರ್ಯಕ್ರಮಗಳನ್ನು ಆಯೋಜಿಸುವುದರ ಜೊತೆಗೆ ಜಿಲ್ಲೆಯ ಪ್ರಸಿದ್ಧ ಕಲಾವಿದರನ್ನು ಸನ್ಮಾನಿಸಲಾಗುತ್ತದೆ.

ನಗರದ ಟೌನ್ ಹಾಲ್ ಸರ್ಕಲ್‌ನಿಂದ ಶಿವಕುಮಾರ ಸ್ವಾಮೀಜಿ ಸರ್ಕಲ್‌ವರೆಗೆ ವಿದ್ಯುತ್ ದೀಪಗಳಿಂದ ವಿಶೇಷವಾಗಿ ಅಲಂಕರಿಸುವುದರ ಜೊತೆಗೆ ನಗರದ ಪ್ರಮುಖ ಬೀದಿ, ವೃತ್ತಗಳು ಮತ್ತು ನಗರದಲ್ಲಿ 100 ವರ್ಷ ಪೂರೈಸಿದ ಸರ್ಕಾರಿ ಕಟ್ಟಡಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಬೇಕು ಎಂದು ಸೂಚನೆ ನೀಡಿದರು. ಸಭೆಯಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಕೃಷ್ಣಪ್ಪ, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ಉಪನಿರ್ದೇಶಕ ಚೇತನ್ ಕುಮಾರ್ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಈಶ್ವರ್ ಕು ಮಿರ್ಜಿ ಸೇರಿದಂತೆ ಮತ್ತಿತರೆ ಅಧಿಕಾರಿಗಳು ಉಪಸ್ಥಿತರಿದ್ದರು.

### ಬೆಂ.ಉತ್ತರ ವಿವಿ ವಿರುದ್ಧ ಎಬಿವಿಪಿ ಪ್ರತಿಭಟನೆ

• **ಉದಯವಾಹಿನಿ ಕೋಲಾರ**

ಬೆಂಗಳೂರು ಉತ್ತರ ವಿಶ್ವವಿದ್ಯಾಲಯದಲ್ಲಿ ನಡೆದಿರುವ ಭ್ರಷ್ಟಾಚಾರ ಸಂಬಂಧ ತನಿಖೆ ನಡೆಸಿ, ಆಡಳಿತ ವಿಭಾಗದ ಅಧಿಕಾರಿಗಳನ್ನು ಬದಲಾವಣೆ ಮಾಡಬೇಕು' ಎಂದು ಒತ್ತಾಯಿಸಿ ಎಬಿವಿಪಿ ನೇತೃತ್ವದಲ್ಲಿ ನೂರಾರು ವಿದ್ಯಾರ್ಥಿಗಳು ವಿಶ್ವವಿದ್ಯಾಲಯ ಕಚೇರಿ ಎದುರು ಪ್ರತಿಭಟನೆ ನಡೆಸಿದರು. ಪ್ರಾಂತ ಕಾರ್ಯದರ್ಶಿ ಎಚ್.ಕೆ.ಪ್ರವೀಣ್ ಮಾತನಾಡಿ, 'ವಿದ್ಯಾರ್ಥಿಗಳಿಂದ ಹಣ ಪಡೆದು, ಅನುತ್ತೀರ್ಣರಾದವರನ್ನು ಉತ್ತೀರ್ಣ ಮಾಡಿರುವ ಪ್ರಕರಣವನ್ನು ತನಿಖೆ ನಡೆಸಿ, ತಪ್ಪಿತಸ್ಥರನ್ನು ಶಿಕ್ಷೆಗೆ ಒಳಪಡಿಸಬೇಕು' ಎಂದು ಒತ್ತಾಯಿಸಿದರು.

ರಾಜ್ಯದ ಸಾಂಪ್ರದಾಯಿಕ ವಿಶ್ವವಿದ್ಯಾಲಯಗಳ ನಿರ್ವಹಣೆಯಲ್ಲಿ ಸರ್ಕಾರ ಹಾಗೂ ಅಧಿಕಾರಿಗಳಲ್ಲಿ ಬದ್ಧತೆಯ ಕೊರತೆಯಿದೆ. ಇದರಿಂದಾಗಿ ಆಡಳಿತಾತ್ಮಕ ಗೊಂದಲಗಳಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಯು ಕುಂಠಿತಗೊಳ್ಳುತ್ತಿದೆ' ಎಂದು ಬೇಸರ ವ್ಯಕ್ತಪಡಿಸಿದರು.

ವಿಶ್ವವಿದ್ಯಾಲಯಗಳಿಂದ ವಿದ್ಯಾರ್ಥಿಗಳಿಗೆ ಉನ್ನತ ಮಟ್ಟದ ಶಿಕ್ಷಣ ನೀಡಬೇಕು, ವಿದ್ಯಾರ್ಥಿಗಳ ಭವಿಷ್ಯ ರೂಪಿಸಬೇಕು, ಗುಣಾತ್ಮಕ ಸಂಶೋಧನೆ ನಡೆಸಬೇಕು, ಆಮೂಲಕ ನಾಡಿನ ಏಳಿಗೆಗೆ ಕೊಡುಗೆ ನೀಡಬೇಕೆಂಬ ಕಿಂಚಿತ್ತು ಕಾಳಜಿಯೂ ಇಲ್ಲವಾಗಿದೆ' ಎಂದು ಆಕ್ರೋಶ ವ್ಯಕ್ತಪಡಿಸಿದರು. ಉತ್ತರ ವಿಶ್ವವಿದ್ಯಾಲಯವು ಉತ್ತರದಾಯಿತ್ವವಿಲ್ಲದ ಆಡಳಿತದ ಕಾರಣ ಹಾಗೂ ಕುಲಪತಿ, ಕುಲಸಚಿವರ ನಿರ್ಲಕ್ಷ್ಯದ ಪರಿಣಾಮ ವಿಶ್ವವಿದ್ಯಾಲಯದ ಶೈಕ್ಷಣಿಕ ಆಶಯಗಳಿಗೆ ಧಕ್ಕೆ ಉಂಟಾಗಿ ವಿದ್ಯಾರ್ಥಿಗಳ ಸ್ಥಿತಿ ಆತಂತ್ರವಾಗಿದೆ' ಎಂದು ಆರೋಪಿಸಿದರು.

ಅಂತರಾಳದಿಂದ..
EDITORIAL

# ನೀಲಿ ಚಿತ್ರಗಳ ಹಿಂದಿರುವ ಕಪ್ಪು ಮುಖಗಳು


ಮಕ್ಕಳ ಮೇಲೆ ನಡೆಯುತ್ತಿರುವ ಲೈಂಗಿಕ ದೌರ್ಜನ್ಯಗಳು ದೇಶಾದ್ಯಂತ ಸುದ್ದಿಯಾಗುತ್ತಿರುವ ಹೊತ್ತಿನಲ್ಲೇ ಮಕ್ಕಳ ಅಶ್ಲೀಲ ಚಿತ್ರಗಳ ವೀಕ್ಷಣೆಯ ಕುರಿತಂತೆ ಸು.ಕೋರ್ಟ್ ಮಹತ್ವದ ಆದೇಶವೊಂದನ್ನು ನೀಡಿದೆ. 'ಮಕ್ಕಳ ನೀಲಿ ಚಿತ್ರಗಳನ್ನು ನೋಡುವುದು ಮಾತ್ರವಲ್ಲ ಅವುಗಳನ್ನು ಸಂಗ್ರಹಿಸಿಟ್ಟುಕೊಳ್ಳುವುದು ಲೈಂಗಿಕ ಅಪರಾಧಗಳಿಂದ ಮಕ್ಕಳನ್ನು ರಕ್ಷಿಸುವ ಕಾಯ್ದೆ (ಪೋಕ್ಸೊ)ಯಡಿ ಅಪರಾಧವಾಗುತ್ತದೆ ಎಂದು ತೀರ್ಪಿನಲ್ಲಿ ತಿಳಿಸಿದೆ.

ಈ ಹಿಂದೆ ಮದ್ರಾಸ್ ಹೈಕೋರ್ಟ್ ನೀಡಿದ ತೀರ್ಪೊಂದರಲ್ಲಿ 'ಇಲೆಕ್ಟ್ರಾನಿಕ್ ಸಲಕರಣೆಯೊಂದರಲ್ಲಿ ಮಕ್ಕಳ ನೀಲಿ ಚಿತ್ರವನ್ನು ಕೇವಲ ಡೌನ್ಲೋಡ್ ಮಾಡುವುದು ಅಥವಾ ವೀಕ್ಷಿಸುವುದು ಪೋಕ್ಸೊ ಮತ್ತು ಐಟಿ ಕಾಯ್ದೆಗಳ ಅಡಿ ಅಪರಾಧವಾಗುವುದಿಲ್ಲ' ಎಂಬುದಾಗಿ ಹೇಳಿತ್ತು. ಮಕ್ಕಳ ಮೇಲೆ ಹೆಚ್ಚುತ್ತಿರುವ ಲೈಂಗಿಕ ದೌರ್ಜನ್ಯಗಳನ್ನು ತಡೆಯುವಲ್ಲಿ ಸುಪ್ರೀಂ ಕೋರ್ಟ್ ನೀಡಿರುವ ಈ ತೀರ್ಪು ಮುಂದಿನ ದಿನಗಳಲ್ಲಿ ಮಹತ್ವದ ಪಾತ್ರವನ್ನು ವಹಿಸಲಿದೆ ಎನ್ನುವುದರಲ್ಲಿ ಎರಡು ಮಾತಿಲ್ಲ.

**ಇದೀಗ ಆ ಪ್ರಕರಣವನ್ನು ವಿಚಾರಣೆ ನಡೆಸಿ ಮದ್ರಾಸ್ ಹೈಕೋರ್ಟ್‌ನ ತೀರ್ಪನ್ನು ತಳ್ಳಿ ಹಾಕಿರುವ ಸುಪ್ರೀಂಕೋರ್ಟ್ ಚೈಲ್ಡ್ ಪೋರ್ನೋಗ್ರಫಿ ಅಥವಾ ಮಕ್ಕಳ ನೀಲಿ ಚಿತ್ರ ಎಂಬ ಪದದ ಬದಲಿಗೆ ಚೈಲ್ಡ್ ಸೆಕ್ಷುವಲ್ ಎಕ್ಸ್‌ಪ್ಲಾಯ್ಟೇಟಿವ್ ಆ್ಯಂಡ್ ಅಬ್ಯೂಸ್ ಮಟೀರಿಯಲ್ ಎಂಬ ಪದಕ್ಕೆ ಆಧ್ಯಾದೇಶವೊಂದನ್ನು ತರುವಂತೆ ಸುಪ್ರೀಂಕೋರ್ಟ್ ತನ್ನ ಆದೇಶದಲ್ಲಿ ಸಂಸತ್ ಸಲಹೆ ನೀಡಿದೆ.**



ಮಕ್ಕಳ ಮೇಲೆ ನಡೆಯುವ ಲೈಂಗಿಕ ದೌರ್ಜನ್ಯಗಳನ್ನು ತಡೆಯಲು ಪೋಕ್ಸೊ ಕಾಯ್ದೆಯನ್ನು 2012ರಲ್ಲಿ ಜಾರಿಗೆ ತರಲಾಯಿತು. ಅಂತಹ ಪ್ರಕರಣಗಳನ್ನು ತ್ವರಿತವಾಗಿ ವಿಚಾರಣೆ ನಡೆಸಲು ವಿಶೇಷ ನ್ಯಾಯಾಲಯವನ್ನು ಸ್ಥಾಪಿಸುವುದನ್ನು ಕಾಯ್ದೆ ಕಡ್ಡಾಯಗೊಳಿಸಿದೆ. ಮಕ್ಕಳ ಮೇಲೆ ನಡೆಯುವ ಲೈಂಗಿಕ ದೌರ್ಜನ್ಯಗಳು ಅವರ ಬದುಕಿನ ಮೇಲೆ, ವ್ಯಕ್ತಿತ್ವದ ಮೇಲೆ, ಭವಿಷ್ಯದ ಮೇಲೆ ತೀವ್ರ ದುಷ್ಪರಿಣಾಮಗಳನ್ನು ಬೀರುತ್ತವೆ. ಇದ ಸಂದರ್ಭದಲ್ಲಿ ಇದರ ವಿಚಾರಣೆ ಮಕ್ಕಳ ಮೇಲಿನ ದೌರ್ಜನ್ಯಗಳ ಮುಂದುವರಿದ ಭಾಗವಾಗುವ ಸಾಧ್ಯತೆಗಳೂ ಇವೆ ಆರೋಪಿಗಳನ್ನು ರಕ್ಷಿಸುವ ಭಾಗವಾಗಿ ಆರೋಪಿ ಪರ ವಕೀಲ ವಿಚಾರಣೆಯ ನೆಪದಲ್ಲಿ ಮಕ್ಕಳನ್ನು ಮಾನಸಿಕವಾಗಿ ಹಿಂಸಿಸುವ ಸಾಧ್ಯತೆಗಳಿವೆ. ಆದುದರಿಂದಲೇ ಇದಕ್ಕಾಗಿ ವಿಶೇಷ ನ್ಯಾಯಾಲಯಗಳನ್ನು ಸ್ಥಾಪಿಸುವುದು ಅನಿವಾರ್ಯವಾಗಿದೆಯಾದರೂ ಈ ಬೇಡಿಕೆಯನ್ನು ಪೂರ್ಣ ಪ್ರಮಾಣದಲ್ಲಿ ಈಡೇರಿಸುವಲ್ಲಿ ಇನ್ನೂ ಯಶಸ್ವಿಯಾಗಿಲ್ಲ. ವಿಪರ್ಯಾಸವೆಂದರೆ, ಕಾನೂನು ಚಾಪೆಯಡಿ ತೂರಿದರೆ, ಆರೋಪಿಗಳು ರಂಗೋಲಿಯಡಿಯಲ್ಲಿ ತೂರುತ್ತಿದ್ದಾರೆ. ಮಕ್ಕಳ ಮೇಲೆ ನಡೆಯುವ ದೌರ್ಜನ್ಯಗಳಿಗೆ ವ್ಯವಸ್ಥೆಯೂ ಪರೋಕ್ಷವಾಗಿ ಸಹಕರಿಸುತ್ತಿದೆ. ಮಕ್ಕಳ ಮೇಲೆ ನಡೆಯುವ ಹಕ್ಕಿನ ಲೈಂಗಿಕ ದೌರ್ಜನ್ಯಗಳು ಕುಟುಂಬ ವಲಯದ ಒಳಗೆ ನಡೆಯುತ್ತವೆ. ಕುಟುಂಬದ ಪ್ರತಿಷ್ಠೆ ಸಂಬಂಧಗಳು ಸಮಾಜ ಇತ್ಯಾದಿಗಳಿಗೆ ಅಂಜಿ ಮಗುವಿನ ಬಾಯಿಯನ್ನು ಮುಚ್ಚಿಸಲಾಗುತ್ತದೆ. ಮಗು ದೂರನ್ನು ಹೇಳಿದರೂ ಅದನ್ನು ಹತ್ತವರು ಗಂಭೀರವಾಗಿ ತೆಗೆದುಕೊಳ್ಳದೆ ಮಗುವನ್ನೇ ಆರೋಪಿ ಸ್ಥಾನದಲ್ಲಿ ನಿಲ್ಲಿಸುವ ಪ್ರವೃತ್ತಿ ಹೆಚ್ಚಾಗುತ್ತಿವೆ. ಇದರ ಲಾಭವನ್ನು ಕುಟುಂಬದೊಳಗಿರುವ ದುಷ್ಕರ್ಮಿಗಳು ತಮ್ಮದಾಗಿಸುತ್ತಾರೆ. ಯಾವುದು ಕೆಟ್ಟ ಸ್ಪರ್ಶ ಯಾವುದು ಒಳ್ಳೆಯ ಸ್ಪರ್ಶ ಎನ್ನುವುದರ ಬಗ್ಗೆ ಮಕ್ಕಳಿಗೆ ಬಾಲ್ಯದಲ್ಲಿ ತಿಳಿಸಿಕೊಡುವ ಕೆಲಸವನ್ನೂ ಮಾಡುವುದಿಲ್ಲ, ಈ ಬಗ್ಗೆ ಹೇಳಿಕೊಡುವುದನ್ನೇ ಮುಜುಗರದಿಂದ ನೋಡುವ ಪಾಲಕರು ನಮ್ಮ ನಡುವೆ ಇನ್ನೂ ಇದ್ದಾರ ಶಾಲೆಗಳಲ್ಲಿ ಶಿಕ್ಷಕರು, ಸಿಬ್ಬಂದಿಯೂ ಮಕ್ಕಳ ಜೊತೆಗೆ ವರ್ತಿಸುವ ವರ್ತನೆಗಳಲ್ಲಿ ಅನೇಕ ಸಂದರ್ಭ ವಿಕೃತಗಳು ಕಂಡು ಬರುತ್ತವೆ. ಆದರೆ ಅಮಾಯಕ ಮಕ್ಕಳು ಅದನ್ನು ಗುರುತಿಸುವಲ್ಲಿ ವಿಫಲರಾಗುತ್ತಾರೆ. ಒಂದು ವೇಳೆ ಗುರುತಿಸಿದರೂ ಅದನ್ನು ಪೋಷಕರಲ್ಲಿ ಹಗೆ. ವಿವರಿಸಬೇಕು ಎನ್ನುವುದರಲ್ಲಿ ಸೋಲುತ್ತಾರೆ. ಆದುದರಿಂದ ಮಕ್ಕಳ ಮೇಲೆ ಹೆಚ್ಚುತ್ತಿರುವ ಲೈಂಗಿಕ ದೌರ್ಜನ್ಯಗಳನ್ನು ತಡೆಯಬೇಕಾದರೆ ಮೊತ್ತ ಮೊದಲು ಪೋಷಕರನ್ನು ಈ ಬಗ್ಗೆ, ಶಿಕ್ಷಿತರನ್ನಾಗಿ ಮಾಡಬೇಕಾಗಿದೆ. ಮಕ್ಕಳ ಮೇಲಿನ ಲೈಂಗಿಕ ದೌರ್ಜನ್ಯಗಳನ್ನು ನಡೆಸುವ ವಿಕೃತ ಮನಸ್ಸುಗಳನ್ನು ಸಿದ್ಧಗೊಳಿಸುವಲ್ಲಿ ನೀಲಿ ಚಿತ್ರಗಳ ಪಾತ್ರ ಬಹುದೊಡ್ಡದಿದೆ ಇಂಟರ್‌ನೆಟ್‌ಳು ಮಕ್ಕಳ ಅಶ್ಲೀಲ ಚಿತ್ರಗಳಿಗಾಗಿ ಕುಖ್ಯಾತವಾಗಿವೆ. ಇಂಟರ್‌ನೆಟ್‌ನಲ್ಲಿ ಮಕ್ಕಳ ಅಶ್ಲೀಲ ಚಿತ್ರಗಳನ್ನು ನೋಡುವವನು ಪರೋಕ್ಷವಾಗಿ ಆ ಅಪರಾಧದಲ್ಲಿ ಭಾಗಿಯಾಗಿರುತ್ತಾನೆ ಮಕ್ಕಳ ಮೇಲೆ ಲೈಂಗಿಕ ದೌರ್ಜನ್ಯಗಳನ್ನು ಎಸಗುವುದು ಅಪರಾಧವಾದರೆ, ಅವರನ್ನು ಅಶ್ಲೀಲ ದೃಶ್ಯಗಳಿಗೆ ಬಳಸಿಕೊಳ್ಳುವುದು ಅದಕ್ಕಿಂತಲೂ ದೊಡ್ಡ ಅಪರಾಧವಾಗಿದೆ ಇದರ ಹಿಂದೆ ಬೃಹತ್ ಕ್ರಿಮಿನಲ್‌ಗಳ ಜಾಲವೇ ಇದೆ ಇಂತಹ ದೃಶ್ಯಗಳನ್ನು ನೋಡುವವರಿದ್ದಾರೆ ಎನ್ನುವ ಕಾರಣಕ್ಕಾಗಿಯೇ ಕ್ರಿಮಿನಲ್‌ಗಳು ಮಕ್ಕಳನ್ನು ದುರುಪಯೋಗ ಪಡಿಸಿಕೊಳ್ಳುತ್ತಿದ್ದಾರೆ. ಇದೇ ಸಂದರ್ಭದಲ್ಲಿ ಮಕ್ಕಳ ಗಮನಕ್ಕೆ ಬಾರದಂತೆಯೂ ಅವರ ದೈಹಿಕ ಭಾಗಗಳನ್ನು ಚಿತ್ರೀಕರಿಸಿ ವೆಬ್‌ಸೈಟ್‌ಗಳಲ್ಲಿ ತುಂಬಿಸಲಾಗುತ್ತದೆ. ಕೆಲವೊಮ್ಮೆ ಕುಟುಂಬದ ವಲಯದೊಳಗಿರುವವರೇ ಮಕ್ಕಳ ಫೋಟೊಗಳನ್ನು ವೆಬ್‌ಸೈಟ್‌ಗಳಿಗೆ ಹಾಕಿ ಬಿಡುವುದು ಅಥವಾ ಫೋಟೊಗಳನ್ನು ಸಂಗ್ರಹಿಸಿಟ್ಟುಕೊಳ್ಳುವುದಿದೆ. ಇದು ಮಕ್ಕಳ ವ್ಯಕ್ತಿತ್ವದ ಮೇಲೆ ಅವರಿಗೆ ಅರಿವೇ ಇಲ್ಲದಂತೆ ನಡೆಸುವ ಭೀಕರ ದಾಳಿಯಾಗಿದೆ. ಇದರಲ್ಲಿ ನೇರವಾಗಿ ಮತ್ತು ಪರೋಕ್ಷವಾಗಿ ಭಾಗಿಯಾದವರೆಲ್ಲರೂ ಅಪರಾಧಿಗಳ ಆಗಿರುತ್ತಾರೆ. ಆದುದರಿಂದ ಮಕ್ಕಳ ದೇಹಭಾಗಗಳಿರುವ ಚಿತ್ರಗಳನ್ನು ಸಂಗ್ರಹಿಸಿಟ್ಟುಕೊಳ್ಳುವುದನ್ನೂ ಪೋಕ್ಸೊ ಕಾಯ್ದೆಯಡಿಗೆ ತರಬೇಕು ಎನ್ನುವ ಸುಪ್ರೀಂಕೋರ್ಟ್ ತೀರ್ಪನ್ನು ಅಭಿನಂದಿಸಬೇಕಾಗಿದೆ. ಇದೇ ಸಂದರ್ಭದಲ್ಲಿ ಮಕ್ಕಳ ಕೈಗೆ ಆಶೀಲ ನೀಲಿ ಚಿತ್ರಗಳು ಅತ್ಯಂತ ಸುಲಭವಾಗಿ ಸಿಗುತ್ತಿವೆ. ಸಣ್ಣ ಮಕ್ಕಳೂ ಮೊಬೈಲ್‌ಗಳನ್ನು ಇಂಟರ್‌ನೆಟ್‌ಗಳನ್ನು ಬಳಸುತ್ತಿದ್ದಾರೆ. ಪೋಷಕರು ಅದಷ್ಟೇ ನಿಯಂತ್ರಣಗಳನ್ನು ಹೇರಿದರೂ ಮಕ್ಕಳು ಆಶ್ಲೀಲ ವೆಬ್‌ಸೈಟ್‌ಗಳನ್ನು ನೋಡದಂತೆ ತಡೆಯುವುದು ಸಾಧ್ಯವಾಗುತ್ತಿಲ್ಲ ಲೈಂಗಿಕ ಚಟುವಟಿಕೆಗಳ ಬಗ್ಗೆ, ಸ್ಪಷ್ಟ ಕಲ್ಪನೆಯೇ ಇಲ್ಲದ ಮಕ್ಕಳು ಈ ನೀಲಿ ಚಿತ್ರಗಳ ಬಲೆಗೆ ಬಿದ್ದರೆ, ಅದು ಅವರ ಮುಗ್ಧತೆಯ ಮೇಲೆ ತೀವ್ರ ಘಾಸಿಯನ್ನುಂಟು ಮಾಡುತ್ತದೆ ಎಂದು ಮಾನಸಿಕ ತಜ್ಞರು ಹೇಳುತ್ತಾರೆ.



# ಕರ್ಮದ ಸಿದ್ಧಾಂತ ನಮಗೆ ನರಕದ ಅನುಭವ

ವಿಶ್ವಾಸ್.ಡಿ.ಗೌಡ
• ಉದಯವಾಹಿನಿ, ವಿಶೇಷ



ಉದಯವಾಹಿನಿ ಚಿತ್ರ

**ಯಾವ ಬೀಜ ಬಿತ್ತುವವೋ ಆಯಾ ಫಲ ಲಭ್ಯ**


ಬದುಕಲು ಸಾಧ್ಯವಾಗದ ಸ್ಥಿತಿಯನ್ನು ಹೇಳಲು ಬಳಕೆಯಾಗುವ ಶಬ್ದವೆಂದರೆ ನರಕ , ನರಕ ಅನುಭವಿಸಿಬಿಟ್ಟೆ , ಅದೊಂದು ಭಯಾನಕ ನರಕ ಹೀಗೆಲ್ಲ ದೈನಿಕದಲ್ಲೂ ಬರಹದಲ್ಲೂ ಹೇಳುವುದು ಸಾಮಾನ್ಯ. ನರಕ ಎಲ್ಲರಿಗೂ ಗೊತ್ತಿರುವುದೇ. ಅದು ಜೀವಿ ಸತ್ತ ಮೇಲೆ ಅನುಭವಿಸಬೇಕಾದದ್ದು. ಬದುಕಿದಾಗ ಮಾಡುವ ಕರ್ಮಗಳು ಸಾವಿನ ಅನಂತರ ಫಲಿಸುವಾಗ ಸ್ವರ್ಗ, ನರಕ , ಪುನರ್ಜನ್ಮ , ಪುನರ್ಜನ್ಮದಲ್ಲಿ ಏಳು ಬೀಳು ಇವೆಲ್ಲ ಉಂಟಾಗುವಂತಹದ್ದು ಇಂದೇನು ಮಾಡುತ್ತೇವೋ ಅದು ನಾಳೆ ಪರಿಣಾಮಕಾರಿಯಾಗುತ್ತದೆ . ಇಂದು ನೆಟ್ಟ ಗಿಡ ಮುಂದೆ ಫಲ ಕೊಡುತ್ತದೆ . ಯಾವ ಬೀಜ ಬಿತ್ತುವವೋ ಆಯಾ ಫಲ ಲಭ್ಯ , ಹಣ್ಣು ನೆಟ್ಟರೆ ಹಣ್ಣು , ಮುಳ್ಳು ನೆಟ್ಟರೆ ಮುಳ್ಳು ಈ ಕರ್ಮದ ಸಿದ್ಧಾಂತ ನಮಗೆ ನರಕದ ಅನುಭವವನ್ನು ಹೇಳುತ್ತದೆ .

ನರಕ ಶಬ್ದಕ್ಕೆ ಕ್ಲೇಶವನ್ನು ಉಂಟುಮಾಡುವುದು ಎಂದು ಅರ್ಥ . ತಪ್ಪು ಮಾಡಿ ಸತ್ತಾಗ ಆ ಲೋಕದಲ್ಲಿ ಜೀವಿ ಕಷ್ಟಪಡಬೇಕಾಗುವುದರಿಂದ ಅದು ನರಕ. ಪಾಪಿಗಳಿಗೆ ಶಿಕ್ಷೆ ಕೊಡುವ ಸ್ಥಳವೇ ನರಕ. ಇಂತಹ ಶಿಕ್ಷಾಸ್ಥಾನಗಳು ಕೋಟಿ ಕೋಟಿ ಇವೆಯಾದರೂ ನಲವತ್ತು ನರಕಗಳು ಪ್ರಮುಖ . ಅವೀಚಿ, ಕೃಮಿಭಕ್ಷ್ಯ , ವೈತರಣೀ, ಶಾಲ್ಮಲಿ, ರೌರವ, ಮಹಾರೌರವ, ಉಚ್ಛ್ವಾಸ , ಯುಗ್ಧಪರ್ವತ , ನಿರುಚ್ಛ್ವಾಸ ಪೂತಿಮಾಂಸ , ಕ್ರಕಚ್ಛೇದ , ಪೂತಿಪೂರ್ಣ ತಾಮಿಸ್ರ ಅಂಧತಾಮಿಸ್ರ ತಪತುಂಡ, ತೀಕ್ಷ್ಣಾಸಿ, ನಪುಂಸಕ, ಲೌಹತಪ್ತ , ಕುಂಭೀಪಾಕ ಕಾಲಸೂತ್ರ , ಪಂಕ, ಮಹಾ ಪಂಕ, ಸೂಚೀಮುಖ ಸೂಕರಮುಖ ಅಪತ್ರ , ಅಂಧಕೂಪ, ತಪ್ತಸೂರ್ಮಿ ವಜ್ರಕಂಟಕ, ಪೂಯೋದ ಪ್ರಾಣರೋಧ, ವಿಶಸನ , ಲಾಲಾಭಕ್ಷ , ಸಾರಮೇಯಾದನ ಅಯಃಪಾನ, ಕಾರಕರ್ದಮ , ಶೂಲಪೋತ, ದಂದಕ ತಪ್ತಲಾಕ್ಷಾಜಲ, ಮೇದಸ್ತಂಭ, ಶೀತೋಷ್ಣ ಇವು ಪ್ರಮುಖ ನರಕಗಳು. ಈ ಶಬ್ದಗಳೇ ಆ ನರಕ ಹೇಗಿದೆ ಎನ್ನುವುದನ್ನು ಹೇಳುತ್ತವೆ. ನಮ್ಮ ಪುರಾಣ ಮತ್ತು ಇತಿಹಾಸಗಳು ಯಾವ ತಪ್ಪಿಗೆ ಯಾವ ನರಕ ಎಂದು ವಿಸ್ತಾರವಾಗಿ ವಿವರಿಸುತ್ತವೆ . ಈ ಪಟ್ಟಿಯಲ್ಲಿ ಜೀವಿ ಮಾಡಬಹುದಾದ ಎಲ್ಲಾ ತಪ್ಪುಗಳೂ ಇವೆ . ಜೊತೆಗೆ ಏನ ಮಾಡಿದರೆ ಈ ನರಕಗಳಿಂದ ತಪ್ಪಿಸಿಕೊಳ್ಳಬಹುದು ಎನ್ನುವುದನ್ನೂ ಇವು ತಿಳಿಸುತ್ತವೆ . ಹಾಗೆಯೇ ತಪ್ಪು ಮಾಡಿ ನರಕಕ್ಕೆ ಹೋದವರ ಕಥೆಗಳನ್ನೂ , ಒಳಿತು ಮಾಡಿ ಸ್ವರ್ಗ ಪಡೆದವರ ಚರಿತೆಯನ್ನೂ , ಮಾಡಿದ ತಪ್ಪನ್ನು ಸರಿಪಡಿಸಿಕೊಂಡು ನರಕ ತಪ್ಪಿಸಿಕೊಂಡವರ ಪರಿಶುದ್ಧಿಯ ಘಟನೆಗಳನ್ನೂ ಪುರಾಣೇತಿಹಾಸಗಳು ತಿಳಿಸುತ್ತವೆ .

ಜೀವಿ ಒಳಿತು ಮಾಡುತ್ತಾ ಬದುಕಬೇಕು ಎನ್ನುವುದು ಆಶಯ . ಒಳಿತೆಂದರೆ ಸಹಜೀವಿಗಳ ಹಿತ , ಸಮಷ್ಟಿ ಸೃಷ್ಟಿಯ ಹಿತ . ಇದರಲ್ಲಿ ತನ್ನ ಹಿತವಿದೆ ಎನ್ನುವುದು ಸನಾತನ ವಿಶ್ವಾಸ , ನಿನಗೆ ಹಿತ ಬೇಕೆಂದರೆ , ನಿನ್ನ ಬದುಕು ಆನಂದಮಯವಾಗಬೇಕು ಎಂದರೆ ಜೀವಹಿತದ ಕಾರ್ಯ ಮಾಡು ಎನ್ನುವುದು ನಮ್ಮ ಪೂರ್ವಜರ ಸೂಚನೆ , ಹಾಗೆ ಮಾಡದೆ , ಕ್ಷಣಿಕವಾದ ಮಿಷಿಗಾಗಿ ತಪ್ಪು ಮಾಡಿದರೆ ಅದು ಒಂದು ದೋಷವಾಗಿ ಜೀವಕ್ಕೆ ಅಂಟಿಕೊಳ್ಳುತ್ತದೆ .

ಅದನ್ನು ಕಳೆದುಕೊಳ್ಳಬೇಕೆಂದರೆ ಅದರ ಫಲವನ್ನು ಅನುಭವಿಸಬೇಕು . ಅಥವಾ ನರಕದ ಶಿಕ್ಷೆಗೆ ಒಳಗಾಗಬೇಕು . ಇಲ್ಲಿ ಇರುವುದು ಅಪರಾಧಿಗೆ ಶಿಕ್ಷೆಯ ಭಯ ಹುಟ್ಟಿಸುವುದಲ್ಲ . ಬದಲಿಗೆ ಅವನನ್ನು ಶುದ್ಧಗೊಳಿಸುವುದು . ಹಾಗಾಗಿ ನರಕ ಭಯಂಕರವಾದರೂ ಅದರ ಉದ್ದೇಶದಲ್ಲಿ ಇರುವುದು ಜೀವಹಿತವೇ .

ಭಗವದ್ಗೀತೆ/ಗರುಡ ಪುರಾಣ..




# ಕೇಂದ್ರ ಸರ್ಕಾರದ ಆಹಾರ ಭದ್ರತಾ ಯೋಜನೆ ಆದೇಶದಂತೆ 10 ಕೆಜಿ ಅಕ್ಕಿ ವಿತರ

• ಉದಯವಾಹಿನಿ ಬೆಂಗಳೂರು

ಭಾರತ ಸರ್ಕಾರದ ಮಹತ್ವಕಾಂಕ್ಷಿ ಯೋಜನೆ ಆಹಾರ ಭದ್ರತಾ ಕಾಯ್ದೆ ಅಡಿಯಲ್ಲಿ ಪ್ರತಿಯೊಬ್ಬ ಬಿಪಿಎಲ್ ಹಾಡುಗಾರರ ಕುಟುಂಬದ ವ್ಯಕ್ತಿಗೆ ತಲಾ 10 ಕೆಜಿಯಂತೆ ಅಕ್ಕಿ ವಿತರಿಸಬೇಕಿದೆ ಈ ಹಿಂದೆ ಕರ್ನಾಟಕ ರಾಜ್ಯ ಸರ್ಕಾರ ಕೇಂದ್ರ ಸರ್ಕಾರ ನೀಡುತ್ತಿರುವ ಐದು ಕೆಜಿ ಅಕ್ಕಿಯನ್ನು ಹೊರತು ಪಡಿಸಿ ರಾಜ್ಯದ 5 ಕೆಜಿ ಅಕ್ಕಿಯ ಬದಲು ಡಿಬಿಟಿ ಮುಖಾಂತರ ಹಣ ವರ್ಗಾವಣೆಯಾಗುತ್ತಿದ್ದು ಈ ವ್ಯವಸ್ಥೆ ಸರಿ ಇಲ್ಲ ಹೀಗಾಗಿ ರಾಜ್ಯ ಸರ್ಕಾರ ಅಕ್ಕಿಯನ್ನೇ ವಿತರಿಸಬೇಕೆಂದು ಕರ್ನಾಟಕ ರಾಜ್ಯ ಸರ್ಕಾರವೇ ರಾಜ್ಯಾದ್ಯಂತ ನಡೆಸಿದ ಬಿಪಿಎಲ್ ಕಾರ್ಡುದಾರರ ಸಮೀಕ್ಷೆಯಲ್ಲಿ ಶೇಕಡ 95ರಷ್ಟು ಜನ ತಮ್ಮ ಅಭಿಪ್ರಾಯವನ್ನು ವ್ಯಕ್ತಪಡಿಸಿದ್ದರು

ಆದರೆ ಕರ್ನಾಟಕ ರಾಜ್ಯ ಸರ್ಕಾರ ಇದನ್ನು ಪರಿಗಣಿಸದೆ ಡಿಪಿಟಿ ಮುಖಾಂತರ ಹಣವನ್ನು ವರ್ಗಾಯಿಸಲಾಗುತ್ತಿದೆ ಈ ಹಣ ವರ್ಗಾವಣೆಯಲ್ಲಿ ಸಾಕಷ್ಟು ದುರುಪಯೋಗ ಕಂಡು ಬಂದಿದ್ದು ಪಡಿತರ ವಸ್ತುಗಳ ಬಳಕೆಗೆ ಉಪಯೋಗವಾಗದೆ ದುರುಪಯೋಗವೇ ಸಾಕಷ್ಟು ಆಗಿದೆ ಆದ್ದರಿಂದ ರಾಜ್ಯದ ಎಲ್ಲಾ ತಾಲ್ಲೂಕುಗಳ ಶಾಸಕರುಗಳು ಜಿಲ್ಲಾ ಉಸ್ತುವಾರಿ ಸಚಿವರು ಜಿಲ್ಲಾಧಿಕಾರಿಗಳ ಮುಖಾಂತರ ಪಡಿತರ ಕಾಡುದಾರರು ಸರ್ಕಾರಕ್ಕೆ ಒತ್ತಡ ಹೇರಬೇಕಿದೆ ಪಡಿತರ ಕಾರ್ಡದಾರರು ನ್ಯಾಯಬೆಲೆ ಅಂಗಡಿ ಮಾಲೀಕರ ಬಳಿಬಂದು ನಮಗೆ ಹಣ ಬೇಡ ಹತ್ತು ಕೆಜಿ ಅಕ್ಕಿಯನ್ನೇ ಕೊಡಿ ಎಂದು ಗಲಾಟೆ ಮಾಡಿದರೆ ಯಾವುದೇ ಪ್ರಯೋಜನವಿರುವುದಿಲ್ಲ ಆಯಾ ಕ್ಷೇತ್ರದ ಜನಪ್ರತಿನಿಧಿಗಳು ಮುಖಾಂತರ ಸರ್ಕಾರಕ್ಕೆ ಒತ್ತಡ ಹೇರಬೇಕಿದೆ ಕರ್ನಾಟಕ ರಾಜ್ಯಪಡಿತರವಿತರಕರ ಸಂಘದ ರಾಜ್ಯಾಧ್ಯಕ್ಷ, ರಾಷ್ಟ್ರೀಯ ಕಾರ್ಯಧ್ಯಕ್ಷ ಕೃಷ್ಣಪ್ಪ ತಮ್ಮ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ



ಉದಯವಾಹಿನಿ ಚಿತ್ರ

**ಕೃಷ್ಣಪ್ಪ ಪ್ರತಿಕ್ರಿಯೆ**

**ಆಹಾರ ಮತ್ತು ನಾಗರಿಕ ಸರಬರಾಜು ಸಚಿವರಾದ ಕೆಎಚ್ ಮುನಿಯಪ್ಪ ಮತ್ತು ಮುಖ್ಯಮಂತ್ರಿ ಸಿದ್ದರಾಮಯ್ಯನವರನ್ನು ಸಹ ಭೇಟಿ ಮಾಡಿ ನ್ಯಾಯಬೆಲೆ ಅಂಗಡಿ ಮಾಲಿಕರಿಗೆ ಬಾಕಿ ಇರುವ ಈಕೆ ವೈಸಿ ಹಣ ಸಕಾಲದಲ್ಲಿ ಕಮಿಷನ್ ಬಿಡುಗಡೆ ಕ್ರಮ ಕೈಗೊಳ್ಳಬೇಕು ಮತ್ತು ರಾಜ್ಯ ಸರ್ಕಾರ 5 ಕೆ.ಜಿ ಅಕ್ಕಿ ಹಣವನ್ನು ಡಿಬಿ ಟಿ ಮುಖಾಂತರ ನೀಡುತ್ತಿದ್ದು ಇದರ ಬದಲು ದಿನಬಳಕೆ ಪದಾರ್ಥಗಳನ್ನು ನೀಡಲು ಕ್ರಮ ಕೈಗೊಳ್ಳಬೇಕೆಂದು ಕೃಷ್ಣಪ್ಪ ಒತ್ತಾಯಿಸಿದ್ದಾರೆ**

# 4000 ಮೆಗಾವ್ಯಾಟ್ ಪಂಪ್ಡ್ ಸ್ಟೋರೇಜ್ ಜಲವಿದ್ಯುತ್ ಯೋಜನೆಗಳ ಅಭಿವೃದ್ಧಿಗಾಗಿ ಎಂಇಐಎಲ್‌ಯೊಂದಿಗೆ ಒಡಂಬಡಿಕೆ

• ಉದಯವಾಹಿನಿ ಬೆಂಗಳೂರು

ಮುಂಬೈ, ಸೆಪ್ಟೆಂಬರ್, 26-2024: ದೇಶದ ಪ್ರಮುಖ ಮೂಲಭೂತ ಸೌಕರ್ಯ ಸಂಸ್ಥೆಯಾಗಿರುವ ಮೇಘಾ ಎಂಜಿನಿ ಯರಿಂಗ್, ಇನ್ಫ್ರಾಸ್ಟ್ರಕ್ಚರ್ಸ್ ಲಿಮಿಟೆಡ್ (ಎಂಇಐಎಲ್) ಮಹಾರಾಷ್ಟ್ರ ಸರ್ಕಾರದ ಜಲ ಸಂಪನ್ಮೂಲ ಇಲಾಖೆಯೊಂದಿಗೆ ಒಟ್ಟು 4000 ಮೆಗಾವ್ಯಾಟ್ ಸಾಮರ್ಥ್ಯದ ಎರಡು ಪ್ರಮುಖ ಪಂಪ್ಡ್ ಸ್ಟೋರೇಜ್ ವಿದ್ಯುತ್ ಉತ್ಪಾದನಾ ಯೋಜನೆಗಳ ಜಾರಿಗೆ ಸಂಬಂಧಿಸಿದಂತೆ ಒಡಂಬಡಿಕೆ ಮಾಡಿಕೊಂಡಿವೆ.

ಮಹಾರಾಷ್ಟ್ರದ ನಂದುರ್ಬಾರ್ ಜಿಲ್ಲೆಯ ಕಮೂಡ್ ಪಂಪ್ಡ್ ಶೇಖರಣಾ ವಿದ್ಯುತ್ ಯೋಜನೆ ಮತ್ತು ಮಹಾರಾಷ್ಟ್ರ ರಾಜ್ಯದ ಛತ್ರಪತಿ ಸಂಭಾಜಿನಗರ ಜಿಲ್ಲೆಯ ಘೋಸ್ಲಾ ಪಂಪ್ಡ್ ಮಾಡಲಾದ ಶೇಖರಣಾ ಯೋಜನೆಯನ್ನು ಅಭಿವೃದ್ಧಿಪಡಿಸಲು ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿವೆ.

ಎಂಇಐಎಲ್ ತನ್ನ ಮೊದಲ ಪಂಪ್ ಮಾಡಲಾದ ಶೇಖರಣಾ ಜಲವಿದ್ಯುತ್ ಯೋಜನೆಗಳನ್ನು ನಿರ್ಮಾಣ- ನಿರ್ವಹಣೆ ವಿಧಾನದ ಅಡಿಯಲ್ಲಿ ಕಾರ್ಯಗತಗೊಳಿಸುತ್ತಿದೆ ಎಂಬುದು ಇಲ್ಲಿ ಗಮನಾರ್ಹವಾಗಿದೆ.

ಈ ಎರಡು ಯೋಜನೆಗಳು ಅಂದಾಜು ರೂ. 21,100 ಕೋಟಿ ವೆಚ್ಚವಾಗಲಿದ್ದು, ಸುಮಾರು 2,500 ಜನರಿಗೆ ಉದ್ಯೋಗ ಸೃಷ್ಟಿಸುವ ನಿರೀಕ್ಷೆಯಿದೆ. ಘೋಸ್ಲಾ ಪಂಪ್ಡ್ ಶೇಖರಣಾ ವಿದ್ಯುತ್ ಯೋಜನೆಯನ್ನು ಮೂರೂವರೆ ವರ್ಷಗಳಲ್ಲಿ ಪೂರ್ಣಗೊಳಿಸಲು ಎಂಇಐಎಲ್ ಯೋಜಿಸಿದೆ, ಆದರೆ ಕಮೂಡ್ ಪಂಪ್ಡ್ ಶೇಖರಣಾ ವಿದ್ಯುತ್ ಯೋಜನೆಯು ಐದು ವರ್ಷಗಳಲ್ಲಿ ಪೂರ್ಣಗೊಳ್ಳುವ ನಿರೀಕ್ಷೆಯಿದೆ. ಎರಡು ಪಂಪ್ಡ್ ಮಾಡಲಾದ ಶೇಖರಣಾ ಯೋಜನೆಗಳು ಆಫ್-ಸ್ಟ್ರೀಮ್ ಸ್ವರೂಪದಲ್ಲಿವೆ ಮತ್ತು ಯೋಜನೆಗಳು ಪ್ರತಿದಿನ ಕನಿಷ್ಠ 6 ಗಂಟೆಗಳ ಇಂಧನ ಸಂಗ್ರಹಣೆಯನ್ನು ಒದಗಿಸಲು ಯೋಜಿಸಲಾಗಿದೆ. ಪಂಪ್ಡ್ ಸ್ಟೋರೇಜ್ ಹೈಡ್ರೋ ವಿದ್ಯುತ್ ಯೋಜನೆಗಳು ಹೊಸದಾಗಿ ನಿರ್ಮಿಸಲಾದ ಜಲಾಶಯಗಳಲ್ಲಿ ನೀರನ್ನು ಮರು ಎತ್ತುವಳಿ ಮಾಡುವ ಮೂಲಕ ವಿದ್ಯುತ್ ಉತ್ಪಾದನೆ ಮಾಡಲಾಗುತ್ತದೆ. ರಿವರ್ಸಿಬಲ್ ಪಂಪ್ ಟರ್ಬೈನ್‌ಗಳು, ಜನರೇಟರ್‌ಗಳು ಮತ್ತು ಇತರ ಪೂರಕ ವ್ಯವಸ್ಥೆಗಳನ್ನು ಹೊಂದಿರುವ ಪವರ್ ಹೌಸ್ ಅನ್ನು ಎರಡು ಜಲಾಶಯಗಳ ನಡುವೆ ಸ್ಥಾಪಿಸಲಾಗುವುದು, ನೀರಿನ ವಾಹಕ ವ್ಯವಸ್ಥೆಯ ಮೂಲಕ ಪರಸ್ಪರ ಸಂಪರ್ಕ ಕಲ್ಪಿಸಲಾಗುತ್ತದೆ.

ರಿವರ್ಸಿಬಲ್ ಟರ್ಬೈನ್‌ಗಳು ಗರಿಷ್ಠವಲ್ಲದ ಸಮಯದಲ್ಲಿ ನೀರನ್ನು ಪಂಪ್ ಮಾಡುತ್ತವೆ ಮತ್ತು ಗರಿಷ್ಠ ಬೇಡಿಕೆಯ ಸಮಯದಲ್ಲಿ ವಿದ್ಯುತ್ ಉತ್ಪಾದಿಸುತ್ತವೆ. ಯೋಜನೆಗಳಿಗೆ ನೀರನ್ನು ಅಸ್ತಿತ್ವದಲ್ಲಿರುವ ಜಲಾಶಯಗಳು ಅಥವಾ ಅಣೆಕಟ್ಟುಗಳಿಂದ ಆರಂಭಿಕ ಭರ್ತಿಗಾಗಿ ತೆಗೆದುಕೊಳ್ಳಲಾಗುತ್ತದೆ ಮತ್ತು ಆವಿಯಾಗುವಿಕೆ ಮತ್ತು ಸೋರಿಕೆಯಿಂದ ಉಂಟಾಗುವ ನಷ್ಟವನ್ನು ಸರಿದೂಗಿಸಲು ವಾರ್ಷಿಕವಾಗಿ ಮರುಪೂರಣ ಮಾಡಲಾಗುತ್ತದೆ. ಮಹಾರಾಷ್ಟ್ರದ ಉಪ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ಮತ್ತು ಮಹಾರಾಷ್ಟ್ರ ರಾಜ್ಯ ಸರ್ಕಾರವನ್ನು ಪ್ರತಿನಿಧಿಸುವ ಜಲ ಸಂಪನ್ಮೂಲ ಇಲಾಖೆಯ ಹೆಚ್ಚುವರಿ ಮುಖ್ಯ ಕಾರ್ಯದರ್ಶಿ ದೀಪಕ್ ಕಪೂರ್ ಈ ತಿಳಿವಳಿಕೆ ಒಪ್ಪಂದಕ್ಕೆ ಸಹಿ ಹಾಕಿದರು. ಮೇಘಾ ಎಂಜಿನಿಯರಿಂಗ್ ಇನ್ಫ್ರಾಸ್ಟ್ರಕ್ಚರ್ಸ್ ಲಿಮಿಟೆಡ್ ಅನ್ನು ಕಂಪನಿಯ ಅಧ್ಯಕ್ಷ ಆರ್.ವಿ.ಆರ್. ಕಿಶೋರ್ ಪ್ರತಿನಿಧಿಸಿದರು. ಗಿರೀಶ್, ರವಿ ಕಿರಣ್, ಸಮೀರ್ ಝಾ ಉಪಸ್ಥಿತರಿದ್ದರು.



ಉದಯವಾಹಿನಿ ಚಿತ್ರ

**ಎಂಇಐಎಲ್ ಮತ್ತು ಸರ್ಕಾರದ ನಡುವಿನ ಈ ತಿಳಿವಳಿಕೆ ಒಪ್ಪಂದ ಸಮಾರಂಭದ ಕುರಿತು. ಮಹಾರಾಷ್ಟ್ರದ ಎಂಇಐಎಲ್ ಅಧ್ಯಕ್ಷರಾದ ಆರ್.ವಿ.ಆರ್. ಕಿಶೋರ್. ಈ ಯೋಜನೆಗಳು ಮಹಾರಾಷ್ಟ್ರದ ಇಂಧನ ಅಗತ್ಯಗಳನ್ನು ಪೂರೈಸುವುದಲ್ಲದೆ, ರಾಜ್ಯದ ಅಭಿವೃದ್ಧಿಯನ್ನೂ ಉತ್ತೇಜಿಸುತ್ತವೆ ಎಂದು ಹೇಳಿದರು. ಭಾರತದಾದ್ಯಂತ ಗ್ರಿಡ್ ಮೂಲಕ ವಿದ್ಯುತ್ ಪೂರೈಸುವ ಮೂಲಕ ರಾಷ್ಟ್ರೀಯ ಪ್ರಗತಿಗೆ ಕೊಡುಗೆ ನೀಡಲು ನಾವು ಹೆಮ್ಮೆಪಡುತ್ತೇವೆಎಂದು ಹರ್ಷ ವ್ಯಕ್ತಪಡಿಸಿದರು.**

# ಶಾಲಾ ಮಕ್ಕಳಲ್ಲಿ ಸ್ವಚ್ಛತೆ ಜಾಗೃತಿ ಮೂಡಿಸಿ

• ಉದಯವಾಹಿನಿ ಬೆಂಗಳೂರು

ನಗರದಲ್ಲಿ ಸೌಂದರ್ಯೀಕರಣ ಹೆಚ್ಚಿಸಬೇಕಾದರೆ ರಸ್ತೆ ಬದಿ ಕಸ ಬಿಸಾಡುವುದನ್ನು ನಿಲ್ಲಿಸುವುದರ ಜೊತೆಗೆ ನಾಗರೀಕರಲ್ಲಿ ಈ ಬಗ್ಗೆ ಜಾಗೃತಿ ಮೂಡಿಸಬೇಕೆಂದು ಪೂರ್ವ ವಲಯ ಆಯುಕ್ತೆಯಾದ ಶ್ರೀಮತಿ ಸ್ನೇಹಲ್ ರವರು ವಿದ್ಯಾರ್ಥಿಗಳಿಗೆ ತಿಳುವಳಿಕೆ ನೀಡಿರು. ಪೂರ್ವ ವಲಯ ಡಾಲರ್ಸ್ ಕಾಲೋನಿ ವ್ಯಾಪ್ತಿಯಲ್ಲಿ ಬರುವ ಗೋಪಾಲ್ ರಾಮನಾರಾಯಣ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ಸ್ವಚ್ಛತಾಹಿ ಸೇವಾ 2024 ಅಭಿಯಾನದ ಅಂಗವಾಗಿ ಕಪ್ಪು ಚುಕ್ಕೆಗಳ (ಕಸ ಸುರಿಯುವ ಸ್ಥಳ-ಬ್ಲಾಕ್ ಸ್ಪಾಟ್) ಸೌಂದರ್ಯೀಕರಣ ಹಾಗೂ ಸ್ವಚ್ಛತೆಯ ಕುರಿತು ಶಾಲಾ ಮಕ್ಕಳಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಬಳಿಕ ಅವರು ಮಾತನಾಡಿದರು

ನಗರದಲ್ಲಿ ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ನಾಗರೀಕರಲ್ಲಿ ಹೆಚ್ಚು ಅರಿವು ಮೂಡಿಸಬೇಕಿದೆ. ಸಾಕಷ್ಟು ಮಂದಿ ಮನೆಗೆ ಬರುವ ಆಟೋ ಟಿಪ್ಪರ್ ಗಳಿಗೆ ಕಸ ನೀಡದೆ ರಸ್ತೆ ಬದಿ ಕಸ ಬಿಸಾಡುತ್ತಿದ್ದಾರೆ. ಅದರಿಂದ ನಗರದ ಸೌಂದರ್ಯಕ್ಕೆ ಧಕ್ಕೆ ಉಂಟಾಗಲಿದೆ. ಆದ್ದರಿಂದ ಯಾರೂ ರಸ್ತೆ ಬದಿ ಕಸ ಬಿಸಾಡದಂತೆ ಜಾಗೃತಿ ಮೂಡಿಸುವ ಕೆಲಸ ಮಾಡಬೇಕೆಂದು ಮನವಿ ಮಾಡಿದರು.

ಡಾಲರ್ಸ್ ಕಾಲೋನಿ 4, 5 ಮತ್ತು 3ನೇ ಅಡ್ಡ ರಸ್ತೆಯಲ್ಲಿ ಮನೆಮನೆಯ ಕಸ ಸಂಗ್ರಹಣೆ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಹಾಗೂ ಹಸಿಕಸ ಮತ್ತು ಒಣಕಸ ಬೇರ್ಪಡಿಸುವಿಕೆ ಬಗ್ಗೆ ಅರಿವು ಮೂಡಿಸಲಾಯಿತು.



ಉದಯವಾಹಿನಿ ಚಿತ್ರ

**ಸ್ವಚ್ಛತೆ ಕಾಪಾಡುವ ನಿಟ್ಟಿನಲ್ಲಿ ನಾಗರೀಕರಲ್ಲಿ ಹೆಚ್ಚು ಅರಿವು**

**ಚಿತ್ರಕಲಾ ಸ್ಪರ್ಧೆ ಆಯೋಜನೆ**

**ಶಾಲಾ ಮಕ್ಕಳಿಗೆ ಘನತ್ಯಾಜ್ಯ ನಿರ್ವಹಣೆ ಕುರಿತು ಜಾಗೃತಿ ಮೂಡಿಸುವ ಸಲುವಾಗಿ ಚಿತ್ರಕಲಾ ಸ್ಪರ್ಧೆ ಏರ್ಪಡಿಸಲಾಯಿತು. ಸ್ಪರ್ಧೆಯಲ್ಲಿ ಸುಮಾರು 30-40 ಮಕ್ಕಳು ಭಾಗವಹಿಸಿದ್ದು, ಗೆದ್ದಿರುವ 15 ಮಕ್ಕಳಿಗೆ ಬಹುಮಾನ ವಿತರಿಸಲಾಯಿತು. ಈ ವೇಳೆ ವಲಯ ಜಂಟಿ ಆಯುಕ್ತರಾದ ಸರೋಜಾ, ದೆಹಲಿಯ MOHUA ತಂಡ, ಪಾಲಿಕೆ ಸಿಬ್ಬಂದಿಗಳು, ಮಾರ್ಷಲ್‌ಗಳು, ವಿದ್ಯಾರ್ಥಿಗಳು ಸ್ವಯಂಸೇವಕರು ಮತ್ತು ಸಂಘದ ಸದಸ್ಯರು ಕಾರ್ಯಕ್ರಮದಲ್ಲಿ ಹಾಜರಿದ್ದರು.**

ಅಲ್ಲದೆ ಗೋಡೆಗಳಿಗೆ ಸತ್ಃ ಬಣ್ಣ ಬಳಿದು ಸ್ವಚ್ಛತೆ ಕಾಪಾಡುವಲ್ಲಿ ತಿಳುವಳಿಕೆ ಮೂಡಿಸುವ ಕೆಲಸ ಮಾಡಿದರು.



# ರಾಮಾಯಣ

## ಋಷ್ಯ ಶೃಂಗ ಮುನಿಯ ವೃತ್ತಾಂತ

• ಹಿಂದಿನ ಸಂಚಿಕೆಯಿಂದ **5ನೆಯ ಅಧ್ಯಾಯ**

ಆಗ ರೋಮಪಾದರಾಯನು ಗಣಿಕಾಸ್ತ್ರೀಯರನ್ನು ಕರೆಯಿಸಿ ಋಷ್ಯಶೃಂಗಮುನೀಶ್ವರನನ್ನು ಉಪಾಯದಿಂದ ಕರೆತರಬೇಕೆಂದು ಹೇಳಿದನು; ಅವರು 'ಎಲೈ ರಾಯನೆ, ನಾವು ಋಷ್ಯಶೃಂಗ ಮುನೀಶ್ವರನನ್ನು ಕರೆದುಕೊಂಡು ಬರುವೆವು ; ಅದರಿಂದ ದೋಷವಿಲ್ಲ' ಎಂದು ಹೇಳಿ ರಾಯನಿಂದ ಬೀಳ್ಕೊಂಡು ಋಷ್ಯಶೃಂಗಮುನೀಂದ್ರನ ಆಶ್ರಮಕ್ಕೆ ಹೋದರು. ಈ ಪ್ರಕಾರದಲ್ಲಿ ರೋಮಪಾದರಾಯನು ಗಣಿಕಾಸ್ತ್ರೀಯರಿಂದ ಋಷ್ಯಶೃಂಗಮುನೀಶ್ವರನನ್ನು ಕರೆತರಿಸಲು ದೇವೇಂದ್ರನು ಮಳೆಯನ್ನು ಸುರಿಸಿದನು; ಅನಾವೃಷ್ಟಿದೋಷವು ಶಾಂತವಾಯಿತು. ಆಮೇಲೆ ರೋಮಪಾದರಾಯನು ತನ್ನ ಮಗಳಾದ ಶಾಂತಾದೇವಿಯನ್ನು ಆತನಿಗೆ ವಿವಾಹ ಮಾಡಿದನು : ಈ ಋಷ್ಯಶೃಂಗಮುನೀಶ್ವರನು ದಶರಥರಾಯನ ಸಮೀಪಕ್ಕೆ ಬಂದು ಮಕ್ಕಳನ್ನು ಅನುಗ್ರಹಿಸಿ ಸಂತೋಷಪಡಿಸುವನು' ಎಂದು ಸನತ್ಕುಮಾರನು ಹೇಳಿದ ವೃತ್ತಾಂತವನ್ನು ನಾನು ನಿನಗೆ ಹೇಳಿದೆನು ಎಂದು ನುಡಿದನು. ದಶರಥರಾಯನು ಅದನ್ನು ಕೇಳಿ ಸಂತೋಷಪಟ್ಟು ಸುಮಂತ್ರನನ್ನು ಕುರಿತು ರೋಮಪಾದ ರಾಯನು ಯಾವ ಉಪಾಯದಿಂದ ಋಷ್ಯಶೃಂಗನನ್ನು ಕರೆಯಿಸಿದನು ಎಂದು ಕೇಳಿದನು.

### ಋಷ್ಯ ಶೃಂಗ ಮುನಿಯು ಅಂಗದೇಶಕ್ಕೆ ಬಂದದ್ದು

ಸುಮಂತ್ರನು ದಶರಥರಾಯನನ್ನು ನೋಡಿ ಎಲ್ ರಾಯನೆ, ರೋಮಪಾದರಾಯನು ತಪಸ್ಸಿನಿಂದಲೂ ಔದಾರ್ಯದಿಂದಲೂ ಕೂಡಿ ಚಂದನಪುಷ್ಪವನಿತಾದಿಗಳನ್ನರಿಯದಿದ್ದಂಥ ಋಷ್ಯಶೃಂಗಮುನೀಶ್ವರನ ಆಶ್ರಮಕ್ಕೆ ಗಣಿಕಾಸ್ತ್ರೀಯರನ್ನು ಕಳುಹಿಸಬೇಕೆಂದು ಹೇಳಿದ ಮಂತ್ರಿ ಪುರೋಹಿತರ ಮಾತನ್ನು ಅಂಗೀಕರಿಸಲು, ಅವರು ಆ ದೇಶ್ಯಾಸ್ತ್ರೀಯರನ್ನು ಕಳುಹಿಸಿದರು ; ಆ ಸ್ತ್ರೀಯರು ಆತನ ಚಿತ್ರಕ್ಕೆ ವಿಕಾರವನ್ನು ಹುಟ್ಟಿಸುವ ಹಾಗೆ ಸಮಸ್ತ ರೂಪಲಾವಣ್ಯಾತಿಶಯದಿಂದಲೂ ಸಕಲಾಲಂಕಾರಗಳಿಂದಲೂ ಕೂಡಿ ಋಷ್ಯಶೃಂಗನ ಆಶ್ರಮದ ಸಮೀಪಕ್ಕೆ ಹೋಗಿ ಆತನ ದರ್ಶನಕ್ಕೆ ಸಮಯವನ್ನು ಕಾದುಕೊಂಡಿದ್ದರು, ಆ ಮುನೀಶ್ವರನು ತನ್ನ ತಂದೆಯಾದ ವಿಭಾಂಡಕ ಮುನಿಯ ಸೇವೆಯನ್ನು ಮಾಡಿಕೊಂಡಿದ್ದನಲ್ಲದೆ ಆಶ್ರಮದಿಂದ ಹೊರಕ್ಕೆ ಹೋಗಿರಲಿಲ್ಲ; ಹುಟ್ಟಿದ್ದು ಮೊದಲುಗೊಂಡು ಸ್ತ್ರೀರೂಪವನ್ನು ಕಂಡಿರಲಿಲ್ಲ : ತನ್ನ ಆಶ್ರಮದ ಹೊರಗೆ ಇದ್ದ ವಸ್ತುಗಳನ್ನಾದರೂ ಕಂಡಿರಲಿಲ್ಲ: ಒಂದು ಸಮಯದಲ್ಲಿ ಆ ವೇಶ್ಯಾಸ್ತ್ರೀಯರು ಆ ಮುನೀಶ್ವರನನ್ನು ಕಂಡು ಸರ್ವಾಲಂಕಾರಭೂಷಿತೆಯರಾಗಿ ಆತನ ಸಮೀಪಕ್ಕೆ ಹೋಗಿ ಅತಿ ಮನೋಹರವಾದ ವೀಣಾಗಾನವನ್ನು ಮಾಡಿ ಆತನನ್ನು 'ಎಲೈ ಮುನೀಶ್ವರನೆ, ನೀನಾರು ? ಈ ವನದಲ್ಲಿ ನೀನು ಏನುಮಾಡಿಕೊಂಡಿದ್ದೀಯೆ? ಮನುಷ್ಯ ಸಂಚಾರವಿಲ್ಲದ ಭಯಂಕರವಾದ ವನದಲ್ಲಿ ನೀನೊಬ್ಬನೇ ಏನು ಕಾರಣ ಸಂಚರಿಸುತ್ತಿದ್ದೀಯೆ? ಇವೆಲ್ಲವನ್ನೂ ನಮಗೆ ತಿಳಿಯಹೇಳು' ಎಂದು ಕೇಳಿದರು.

ಮುಂದುವರಿಯುವುದು...

# ಸಮಾಜ ಸುಧಾರಕ ರಾಜಾರಾಮ್ ಮೋಹನ್ ರಾಯ್ ಅವರ 191ನೇ ವರ್ಷದ ಪುಣ್ಯಸ್ಮರಣೆ



ಕಲಾ ಸಾಹಿತ್ಯ
ಕೃಷ್ಣಪ್ಪ
ಲೇಖಕರು
ಪ್ರಗತಿ ಪರ ಚಿಂತಕ ಹಾಗೂ ವಿಮರ್ಶಕರು

• ಉದಯವಾಹಿನಿ, ವಿಶೇಷ

ರಾಜಾರಾಮ್ ಮೋಹನ್ ರಾಯ್ ರವರು ಪಶ್ಚಿಮ ಬಂಗಾಳದ ಒಂದು ಸಣ್ಣ ಹಳ್ಳಿಯಲ್ಲಿ 1772 ಮೇ 22 ರಂದು ಜನಿಸಿದರು. ಬಾಲ್ಯದಲ್ಲಿ ತಂದೆ ತಾಯಿಗಳಿಂದ ಉತ್ತಮ ವಿದ್ಯಾಭ್ಯಾಸ ದೊರೆಯಿತು.ಜೊತೆಗೆ ಸುಸಂಸ್ಕೃತ ಕುಟುಂಬದ ವಾತಾವರಣದಲ್ಲಿ ಬೆಳೆದು ಸಂಸ್ಕೃತ, ಪರ್ಷಿಯನ್, ಹಿಬ್ರೋ,ಗ್ರೀಕ್, ಇಂಗ್ಲಿಷ್ ಭಾಷೆಗಳಲ್ಲಿ ಅಗಾಧ ಪಾಂಡಿತ್ಯವನ್ನು ಗಳಿಸಿದರು.


1803 ರಲ್ಲಿ ಈಸ್ಟ್ ಇಂಡಿಯಾ ಕಂಪನಿಯಲ್ಲಿ ಉದ್ಯೋಗಿಯಾಗಿ ಸೇರಿ ವಿವಿಧ ಕೆಲಸಗಳಲ್ಲಿ ಕರ್ತವ್ಯ ನಿಷ್ಠೆಯಿಂದ ನಿರ್ವಹಿಸಿದರು.

**ರಾಜಾರಾಮ್ ಮೋಹನ್ ರಾಯ್ ರವರ ಸಾಧನೆಗಳು:** ಬಹುಭಾಷಾ ಪಂಡಿತರಾಗಿದ್ದು ಹಲವಾರು ಧರ್ಮಗಳ ತತ್ವಗಳನ್ನು ಅಭ್ಯಾಸ ಮಾಡಿದ್ದರು. ರಾಜಾರಾಮ್ ಮೋಹನ್ ರಾಯ್ ಅವರು ಬ್ರಹ್ಮ ಸಮಾಜ ವನ್ನು ಸ್ಥಾಪಿಸಿದರು. ಅದು ಎಲ್ಲಾ ಸಾಮಾಜಿಕ,ಧಾರ್ಮಿಕ ಕಟ್ಟುನಿಟ್ಟುಗಳಿಂದ ಮುಕ್ತಗೊಂಡಿತ್ತು.ವೇದ ಉಪನಿಷತ್ತುಗಳಲ್ಲಿದ್ದ ನಿಜವಾದ ಸಾರವನ್ನು ಜನತೆ ಗ್ರಹಿಸುವಂತೆ ಮಾಡಿದರು.

ಇವರು ಒಬ್ಬ ಬುದ್ಧಿಜೀವಿ ಹಾಗೂ ದೂರದೃಷ್ಟಿ ಉಳ್ಳವರಾಗಿದ್ದು,ಇಂಗ್ಲಿಷ್ ಭಾಷೆ ದೇಶದ ಪ್ರಗತಿಗೆ ಅಗತ್ಯವೆಂದು ತಿಳಿದಿದ್ದರು. ಹಾಗೆಯೇ ವಿಜ್ಞಾನ ಮತ್ತು ತಂತ್ರಜ್ಞಾನಗಳು ನಾಡಿನ ಯುವಕರ ಜ್ಞಾನ ಕ್ಷಿತಿಜವನ್ನು ವಿಸ್ತರಿಸುವು ದಲ್ಲದೆ ಜೀವನದ ಸ್ಥಿತಿಯನ್ನು ಉತ್ತಮಗೊಳಿಸುವ ಸಾಧನವೆಂದು ಭಾವಿಸಿದ್ದರು.ಆಧುನಿಕ ಚಿಂತನೆಗಳನ್ನು ನಮ್ಮಜನರು ಗ್ರಹಿಸುವಂ ತಾಗಬೇಕೆಂಬುದು ಅವರ ಮೂಲ ಉದ್ದೇಶವಾಗಿತ್ತು.

ಸಮಾಚಾರ ದರ್ಪಣ ಎಂಬ ವಾರಪತ್ರಿಕೆಯನ್ನು ಆರಂಭಿಸಿ ಆ ಮೂಲಕ ಪಾಶ್ಚಾತ್ಯ ಸಾಹಿತ್ಯ, ಸಂಸ್ಕೃತಿ ಹಾಗೂ ಮುಖ್ಯವಾಗಿ ಅವರ ವೈಜ್ಞಾನಿಕ ಪ್ರಗತಿ, ವೈಚಾರಿಕ ದೃಷ್ಟಿ ಇವುಗಳನ್ನು ಭಾರತೀಯರ ಗಮನಕ್ಕೆ ತಂದರು.ಇವರ ವಿಚಾರಪೂರಿತ ಬರಹಗಳಿಂದ ಓದುಗರು ಆಧುನಿಕ ವಿಚಾರಗಳ ಪ್ರಭಾವಕ್ಕೆ ಒಳಗಾದರು.

ಭಾರತದಲ್ಲಿ ರೂಢಿಯಲ್ಲಿದ್ದ ಕ್ರೂರ ಸತಿ-ಸಹಗಮನ ಪದ್ಧತಿ ಯನ್ನು ನಿರ್ಮೂಲನೆ ಮಾಡಲು ಶ್ರಮಿಸಿದರು. ಹೀಗೆ ಇನ್ನೂ ಅನೇಕ ಜನಪರವಾದ ಲೋಕಕಲ್ಯಾಣ, ಲೋಕಹಿತಕೋಸ್ಕರ ಇವರು ರಾಷ್ಟ್ರದಲ್ಲಿ ಬ್ರಿಟೀಷ್ ಆಳ್ವಿಕೆ ಕಾಲದಲ್ಲಿ ಗಟ್ಟಿಯಾಗಿ ಸಮಾಜದಲ್ಲಿ ನಿಂತು ಸಮಾಜ ಸುಧಾರಕರಾಗಿ ಅನೇಕ ಸುಧಾರಣೆಗಳನ್ನು ಜಾರಿಗೆ ತರುವಲ್ಲಿ ಯಶಸ್ವಿಯಾದರು. ರಾಜಾರಾಮ್ ಮೋಹನ್ ರಾಯ್ ಅವರಿಗೆ ಇಂಗ್ಲೆಂಡ್ ನಲ್ಲಿ ಅಪಾರವಾದ ಮಿತ್ರವರ್ಗ ಇದ್ದಿತು. ಒಮ್ಮೆ ಇಂಗ್ಲೆಂಡಿಗೆ ಹೋಗಿದ್ದಾಗ ಬ್ರಿಸ್ಟಲ್ ನಲ್ಲಿ 1833 ಸೆಪ್ಟೆಂಬರ್ 27 ರಂದು ತಮ್ಮ 61ನೇ ವಯಸ್ಸಿನಲ್ಲಿ ಹಠಾತ್ ನಿಧನರಾದರು.



ಉದಯವಾಹಿನಿ ಚಿತ್ರ

**ಇಂಗ್ಲಿಷ್ ಭಾಷೆ ದೇಶದ ಪ್ರಗತಿಗೆ ಅಗತ್ಯ**

- **ಭಾರತೀಯ ಸ್ತ್ರೀಯರ ವಿದ್ಯಾಭ್ಯಾಸಕ್ಕೆ ಪ್ರೋತ್ಸಾಹಿಸಿದರು.**
- **ವಿಧವಾ ವಿವಾಹವನ್ನು ಪ್ರೋತ್ಸಾಹಿಸಿದರು.**
- **ಬಾಲ್ಯ ವಿವಾಹ ಪದ್ಧತಿಯನ್ನು ಖಂಡಿಸಿ ಅದರ ವಿರುದ್ಧ ಚಳುವಳಿ ನಡೆಸಿದರು.**
- **ಪತ್ರಿಕಾ ಸ್ವತಂತ್ರಕ್ಕಾಗಿ ಹೋರಾಟ ನಡೆಸಿದರು. ಶಾಸನಬದ್ಧ ಆಡಳಿತದ ಬಗ್ಗೆ ಅವರು ವ್ಯಕ್ತಪಡಿಸಿದ ವಿಚಾರಗಳು ಹೊಸ ರಾಜಕೀಯ ವಿಚಾರಗಳಿಗೆ ದಾರಿ ಮಾಡಿಕೊಟ್ಟವು. ಪರಿಣಾಮವಾಗಿ 1885 ರಲ್ಲಿ ಇಂಡಿಯನ್ ನ್ಯಾಷನಲ್ ಕಾಂಗ್ರೆಸ್ ಸ್ಥಾಪನೆಯಾಯಿತು.**
- **ಬಂಗಾಳಿ ಗದ್ಯ ಸಾಹಿತ್ಯಕ್ಕೆ ಹೊಸ ಚೈತನ್ಯವನ್ನು ತುಂಬಿದ ಇವರು ಸಾಹಿತ್ಯ ಹೆಚ್ಚು ಆಲೋಚನಾಪರ ಹಾಗೂ ವೈಚಾರಿಕವಾಗುವಂತೆ ಶ್ರಮಿಸಿದರು.**

ಇಂದು ಅವರ 191 ನೇ ವರ್ಷದ ಪುಣ್ಯ ಸ್ಮರಣೆ ದಿನ. ಇಂತಹ ಮಹಾನ್ ಚೇತನ ಹಾಗೂ ಸಮ-ಸಮಾಜ ಸುಧಾರಕರ ಶ್ರೇಷ್ಠರಲ್ಲಿ ಒಬ್ಬರಾದ ರಾಜಾರಾಮ್ ಮೋಹನ್ ರಾಯ್ ರವರನ್ನು ಸ್ಮರಿಸಿ ನೆನೆಯುತ್ತಾ ಅವರ ಆತ್ಮಕ್ಕೆ ಶಾಂತಿ ಮತ್ತು ಸದ್ಗತಿ ದೊರಕಲಿ ಎಂದು ಆ ಭಗವಂತನಲ್ಲಿ ಪ್ರಾರ್ಥಿಸೋಣ.

# ದೇಶಕ್ಕಾಗಿ ತನ್ನ ಮಕ್ಕಳನ್ನು ಒತ್ತೆಇಟ್ಟು ದೇಶದ ಪ್ರಜೆಗಳನ್ನು ರಕ್ಷಿಸಿದ ವೀರ

## ಅವಹೇಳನಕಾರಿ ಹೇಳಿಕೆ ನೀಡಿದ ಬಸನಗೌಡ ಪಾಟೀಲ್ ಯತ್ನಾಳರನ್ನು ಶಾಸಕ ಸ್ಥಾನದಿಂದ ವಜಾಗೊಳಿಸಿ

• ಉದಯವಾಹಿನಿ, ಸಿಂಧನೂರು

ದೇಶಕ್ಕಾಗಿ ತನ್ನ ಮಕ್ಕಳನ್ನು ಒತ್ತೆಇಟ್ಟು ದೇಶದ ಪ್ರಜೆಗಳನ್ನು ರಕ್ಷಿಸಿದ ವೀರ ಶೂರ ಮಹಾನ್ ವ್ಯಕ್ತಿ ಟಿಪ್ಪು ಸುಲ್ತಾನ್ ಅವರು ಬಗ್ಗೆ ಬಸನಗೌಡ ಪಾಟೀಲ್ ಯತ್ನಾಳ್ ಕಾರ್ಯಕ್ರಮದಲ್ಲಿ ಅವಹೇಳನ ಕಾರಿಯಾಗಿ ಮಾತನಾಡಿದ್ದನ್ನು ಖಂಡಿಸಿ ಹಿಂದೂ.ದಲಿತ ಪರ ಸಂಘಟನೆ. ಮುಸ್ಲಿಂ ಸಮುದಾಯದ ವತಿಯಿಂದ ತಾಲ್ಲೂಕು ತಹಶೀಲ್ದಾರ್ ಮೂಲಕ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಿ. ಪ್ರತಿಭಟನೆನಡೆಸಿದರು

ನಗರದ ಪ್ರವಾಸಿ ಮಂದಿರದಿಂದ ಬಸನಗೌಡ ಪಾಟೀಲ್ ಯತ್ನಾಳ್ ವಿರುದ್ಧ ಘೋಷಣೆ ಕೂಗುತ್ತ ಗಾಂಧಿ ಸರ್ಕಲ್‌ನಲ್ಲಿ ಸುತ್ತ ಸರಪಳಿ ಹಾಕಿ ಪ್ರತಿಭಟನೆ ನಡೆಸಿದರು. ಈ.ಸಂ ಡಿ.ಎಚ ಕಂಬಳಿ ಅವರು ಪ್ರತಿಭಟನೆ ಕುರಿತು ಮಾತನಾಡಿದ ಅವರು ಈ ದೇಶದ ಬೈಬಲ್, ಕುರಾನ್, ಮಹಾಭಾರತ, ಭಾಗವತ ರಾ ಮಾಯಣ ಸೇರಿದಂತೆ ಇವುಗಳೆಲ್ಲವೂ ಕ್ಕಿಂತ ಶ್ರೇಷ್ಠವಾದ ಗ್ರಂಥ ಸಂವಿಧಾನ.ಡಾ ಬಾಬಾಸಾಹೇಬ ಅಂಬೇಡ್ಕರ್ ಅವರು ಈ ದೇಶಕ್ಕೆ ಕೊಟ್ಟಿರುವ ಸಂವಿಧಾನದ ಅಡಿಯಲ್ಲಿ ಇವತ್ತು ನಾವು ಕೆಲಸ ಮಾಡುತ್ತಿದ್ದೇವೆ. ಅಂತಹಾ ಸಂವಿಧಾನವನ್ನು ಬಿಜೆಪಿ ಪಕ್ಷದ ಮುಖಂಡರು ಸುಡುತ್ತಿದ್ದಾರೆಂದರೆ ಇವರನ್ನುಈ ದೇಶದ ದ್ರೋಹಿಗಳು ಎಂದು ಕರೆಯಬೇಕೆಂದು ಆಗ್ರಹಿಸಿದರು. ಇತ್ತೀಚೆಗೆ ದಿನಮಾನಗಳಲ್ಲಿ ನಮ್ಮಲ್ಲಿ ದೇಶದ ದ್ರೋಹಿಗಳು ಹುಟ್ಟಿಕೊಳ್ಳುತ್ತಿದ್ದಾರೆ ಎಂತಹ ದುರಂತ ದೇಶಕ್ಕಾಗಿ ಹೋರಾಟ ಮಾಡುವಂತಹ ನಮ್ಮಂತವರನ್ನು ದೇಶ ದ್ರೋಹಿಗಳ ಎಂದು ಕರೆಯುತ್ತಾರೆ ಎಂತಹಾ ವಿಪರ್ಯಾಸ. ಅದಕ್ಕೆ ಮುಂದಿನ ದಿನಗಳಲ್ಲಿ ತಕ್ಕ ಪಾಠ ಕಲಿಸುವ ಅಂತಹ ನಿಟ್ಟಿನಲ್ಲಿ ನೀವು ತಯಾ ರಾಗಬೇಕೆಂದು ಹೇಳಿದರು. ದೇಶದ ಪ್ರೇಮಿಗಳು ಯಾರುಂದರೆ ಈ ದೇಶಕ್ಕೆ ಅನ್ನ ನೀಡುವ ರೈತರು, ಕಾರ್ಮಿಕರ ದೇಶಕ್ಕೆ ಹಗಲು ರಾತ್ರಿ ಎನ್ನದೆ ದುಡಿಯುವ ಸೈನಿಕರು. ದೇಶದ ಘ ನತೆ ಕಾಪಾಡುವಂತ ದೇಶದ ಪ್ರೇಮಿಗಳು ವರಿತು ತಮ್ಮ ವೋಟ್ ಬ್ಯಾಂಕ್ ಗೋಸ್ಕರ ರಾಜಕಾರಣ ಮಾಡುವ ವ್ಯಕ್ತಿ ಬಸನಗೌಡ ಪಾಟೀಲ್ ಯತ್ನಾಳ್ ದೇಶ ಪ್ರೇಮಿ ಆಗುವುದಕ್ಕೆ ಸಾಧ್ಯವಿಲ್ಲ ಎಂದು ಕಿಡಿಕಾರಿದರು.



ಉದಯವಾಹಿನಿ ಚಿತ್ರ

**ಶ್ರೇಷ್ಠವಾದ ಗ್ರಂಥ ಸಂವಿಧಾನ**

> ಈಗಾಗಲೇ ದೇಶದ ಸಂಪತ್ತನ್ನು ಲೂಟಿ ಮಾಡುತ್ತಿದ್ದಾರೆ. ಅದಕ್ಕೆ ಕೇಂದ್ರದ ಪ್ರಧಾನಿ ಒಂದು ದೇಶ ಒಂದು ಚುನಾವಣೆ ನಡೆಸುವುದಕ್ಕೆ ಹೊರಟ್ಟಿದ್ದಾರೆ. ಇದು ಅತ್ಯಂತ ಅಪಾಯಕಾರಿ. ಇವತ್ತು ಅಂಬಾನಿ ಅಂದಾನಿ ಅವರು ಆಸ್ತಿ ಹತ್ತುಪಟ್ಟು ಹೆಚ್ಚಾಗಿರವುದಕ್ಕೆ ಕಾರಣ ದೇಶದ ಪ್ರಧಾನಿ ಎಂದರೆ ತಪ್ಪಾಗಲಾರದು. ಅದಕ್ಕೆ ನಾವೆಲ್ಲರೂ ಎಚ್ಚರವಾಗಿರಿ ದಿನಗಳಾಗಿವೆ ಮಹಾತ್ಮರ ಬಗ್ಗೆ ಅವಹೇಳನಕಾರಿ ಮಾತನಾಡಿ ದೇಶದಲ್ಲಿ ಸಂಘರ್ಷ ಉಂಟು ಮಾಡುವುದಕ್ಕೆ ಹೊರಟದ್ದಾರೆ. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಇಲ್ಲಸಲ್ಲದ ಆರೋಪಗಳನ್ನು ಮಾಡಿ ಮುಖ್ಯಮಂತ್ರಿಯಿಂದ ಕೆಳಗೆ ಇಳಿಸಬೇಕೆಂದು ಪಣತೊಟ್ಟಿರುವ ಜೆಡಿಎಸ್. ಬಿಜೆಪಿ ಪಕ್ಷದ ಮುಖಂಡರುಗಳಿಗೆ ಹಿಂದುಳಿದ ವರ್ಗದ ಮುಖ್ಯಮಂತ್ರಿ ಆಗಿರುವ ಸಿದ್ದರಾಮಯ್ಯನವರನ್ನು ಸಹಿಸಿಕೊಳ್ಳಲಾಗುತ್ತಿಲ್ಲ
>
> -ಡಿ.ಎಚ್. ಪೂಜಾರಿ, ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯಾಧ್ಯಕ್ಷ

---

# ಕೃಷಿ ಪತ್ತಿನ ಬ್ಯಾಂಕುಗಳು ರೈತರ ಹಿತ ಕಾಯುತ್ತಿವೆ

• ಉದಯವಾಹಿನಿ, ಅರಸೀಕೆರೆ

ರೈತರ ಹಿತ ಕಾಪಾಡುವ ಮೂಲ ಉದ್ದೇಶದೊಂದಿಗೆ ಕೃಷಿ ಪತ್ತಿನ ಸಹಕಾರ ಸಂಘವು ಕಾರ್ಯನಿರ್ವಹಿಸುತ್ತಿದ್ದು ಈ ಕಾರ್ಯಕ್ಕೆ ಸಂಘದ ನಿರ್ದೇಶಕರುಗಳು ಹಾಗೂ ಎಲ್ಲಾ ಸೇರುದಾರರ ಸಹಕಾರ ಅತ್ಯಗತ್ಯ ಎಂದು ಮಾಡಳು ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಂ.ಸಿ. ನಟ ರಾಜ್ ಬುಧವಾರ ತಿಳಿಸಿದರು. ತಾಲ್ಲೂಕಿನ ಕ ಣಕಟ್ಟೆ ಹೋಬಳಿ ಮಾಡಾಳು ಗ್ರಾಮದ ಕೃಷಿ ಪತ್ತಿನ ಸಹಕಾರ ಸಂಘದ ಸಂಘದ ಆವರಣದಲ್ಲಿ ಆಯೋಜಿಸಿದ್ದ 23,24ನೇ ಸಾಲಿನ ಸರ್ವ ಸದಸ್ಯರ ವಾರ್ಷಿಕ ಮಹಾಸಭಾ ಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಹಕಾರ ಸಂಘಗಳು ರೈತರ ಸಹಕಾರದ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿದೆ ಸಂಘದ ಸದಸ್ಯರು ಸಹ ಸಹಕಾರ ತತ್ವಕ್ಕೆ ಬದ್ಧರಾಗಿ ಕಾ ರ್ಯನಿರ್ವಹಿಸುವ ಮೂಲಕ ಸಹಕಾರ ಸಂಘವನ್ನು ಉನ್ನತಿಯತ್ತ ಕೊಂಡು ಹೋದಾಗ ಮಾತ್ರ ಎಲ್ಲರ ರೈತರ ಅಭಿವೃದ್ಧಿಯಾಗುತ್ತದೆ ಎಂದು ಅವರು ಹೇಳಿದರು.

ಸಭೆಯಲ್ಲಿ ನಿರ್ದೇಶಕರುಗಳಾದ ಎಂ ಎಸ್ ವಿ ಸ್ವಾಮಿ ಎಮ್ ಶಿವದೇವ್ ಎಸ್.ಎಮ್. ಓಂಕಾರ್ ಮೂರ್ತಿ ಡಿ. ಆರ್. ಚೌಡಯ್ಯ ಎಸ್ ಎಸ್ ಬಸವರಾಜ್ ರಂಗನಾಥ್ ಮಾಡಾಳು ಗ್ರಾಮ ಪಂಚಾಯತಿ ಅಧ್ಯಕ್ಷ ಎಂ.ಜಿ. ಯೋಗೀಶ್ ದಲಿತ ಮುಖಂಡರಾದ ಚಂದ್ರಪ್ಪ ಕಟ್ಲಿ ತಿಮ್ಮಯ್ಯ ವಿಜಯಕುಮಾರ್ ರಂಗನಾಥ್ ಪಾಲ್ಗೊಂಡಿದ್ದರು


ಉದಯವಾಹಿನಿ ಚಿತ್ರ



> ಸಂಘದಿಂದ ಸಾಲ ಪಡೆದವರು ಸಾಲ ದುರ್ಬಳಕೆ ಮಾಡಿಕೊಳ್ಳದೆ ಸದ್ಬಳಕೆ ಮಾಡಿಕೊಂಡು ಸಕಾಲದಲ್ಲಿ ಮರುಪಾವತಿ ಮಾಡಿದರೆ ಸಂಘವು ಮತ್ತೊಬ್ಬರಿಗೆ ಸಾಲ ನೀಡ ಲು ಸಹಾಯವಾಗುತ್ತದೆ ಆದ್ದರಿಂದ ಈ ಬಗ್ಗೆ ಗಮನಹರಿಸಿರುವುದು ಒಳ್ಳೆಯದು
>
> -ಸೋಮೇಶ್, ಡಿಸಿಸಿ ಬ್ಯಾಂಕ್ ಮೇಲ್ವಿಚಾರಕ

# ಬಿತ್ತನೆ ಬೀಜ: ಆಸಕ್ತಿಯಿಂದ ಮಾಹಿತಿ ಪಡೆದ ರೈತರು

• ಉದಯವಾಹಿನಿ, ರಾಯಚೂರು

ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯ, ಆಖಿಲ ಭಾ ರತ ಸಂಯೋಜಿತ ಸಂಶೋಧನಾ ಯೋಜನೆ ಹಾಗೂ ಬೀಜ ಘಟಕದ ಆಶ್ರಯದಲ್ಲಿ ವಿಶ್ವವಿದ್ಯಾ ಲ ಯದ ಬೀಜ ಘಟಕದ ಆವರಣದ ಆಯೋಜಿಸಿದ್ದ ಹಿಂಗಾರು ಬೀಜ ದಿನೋತ್ಸವದಲ್ಲಿ ಜಿಲ್ಲೆಯ ವಿವಿಧೆಡೆಯಿಂದ ಆಗಮಿಸಿದ್ದ ರೈತರು ಅಗತ್ಯ ಮಾಹಿತಿ ಪಡೆದರು. ಪ್ರದರ್ಶನ ಮಳಿಗೆಗಳಲ್ಲಿ ವಿವಿಧ ಬೆಳೆಗಳ ಬೀಜ ಹಾಗೂ ಇತರೆ ಸುಧಾರಿತ ಕ್ರಮಗಳು, ಜೈವಿಕ ಪೀಡೆ ನಾಶಕಗಳ ಕುರಿತು ತಜ್ಞರಿಂದ ರೈತರು ಮಾಹಿತಿ ಪಡೆದುಕೊಂಡರು. **ರೋಗಗಳು ಮತ್ತು ಕೀಟಗಳನ್ನು ತಡೆಯಲು ರಾಸಾಯನಿಕಗಳ ಬಳಕೆ ದುಬಾರಿ ಅಷ್ಟೇ ಅಲ್ಲ;** ಅಪಾಯಕಾರಿಯೂ ಹೌದು. ಜೈವಿಕವಾಗಿಯೇ ಅವುಗಳನ್ನು ಹೇಗೆ ನಿಯಂತ್ರಿಸಬೇಕು ಎನ್ನುವ ಕುರಿತು ವಿಶ್ವವಿದ್ಯಾಲಯದ ಅಧಿಕಾರಿಗಳು ಪ್ರಾತ್ಯಕ್ಷಿಕೆ ಮೂಲಕ ರೈತರಿಗೆ ತಿಳಿವಳಿಕೆ ನೀಡಿದರು. ಮಾತ್ರೆ ಮಾದರಿಯ ವಸ್ತು ಹಾಗೂ ಹಾಗೂ ಟೂತ್‌ಪೇಸ್ಟ್ ನಂತಹ ದ್ರವ್ಯ ಬಳಿಸಿ ಕೀಟಗಳನ್ನು ನಿಯಂತ್ರಿಸುವ ಬಗೆ ಕುರಿತು ಕೃಷಿ ವಿಶ್ವವಿದ್ಯಾಲಯದ ಅಧಿಕಾರಿಗಳಿಂದ ರೈತರಿಂದ ಆಸಕ್ತಿಯಿಂದ ಮಾಹಿತಿ ಪಡೆದರು. ಕೆಲವರು ಸ್ಥಳದಲ್ಲೇ ಮೋಹಕ ಬಲೆಗಳ ಖರೀದಿ ಮಾಡಿದರು. ಹಿಂಗಾರು ಬೀಜ ದಿನೋತ್ಸವದಲ್ಲಿ ಸ್ನಾತಕೋತ್ತರ ವಿಭಾಗದ ವಿದ್ಯಾರ್ಥಿನಿಯರು ಜೈವಿಕ ಕೀಟ ನಿಯಂತ್ರಣ ಕುರಿತು ಮಾಹಿತಿ ಒದಗಿಸಿದರು ಹಿಂಗಾರು ಬೀಜ ದಿನೋತ್ಸವದಲ್ಲಿ ವ್ಯಾಕ್ಯೂಮ್ ಪ್ಯಾಕಿಂಗ್ ಪರಿಶೀಲಿಸಿದ ರೈತರು ಡ್ರೋನ್‌ನಿಂದ ರಾಸಾಯನಿಕ ಸಿಂಪರಣೆ ಕುರಿ ತು ತಂತ್ರಜ್ಞರಿಂದ ಆಸಕ್ತಿಯಿಂದ ಮಾಹಿತಿ ಆಲಿಸಿದ ಯುವ ರೈತರುಜಿಲ್ಲೆಯ ರೈತರಿಗೆ ಊಟದ ವ್ಯವಸ್ಥೆ ಬಣ್ಣದ ಧ್ವಜ ನೆಟ್ಟು ರೈತರಿಗೆ ಸ್ವಾಗತ ರೈತರಿಗೆ ಮಾಹಿತಿ ಪುಸ್ತಿಕೆ ಪೂರೈಕೆ.

ಜೋಳದ ಬಿಸ್ಕತ್ತು ಜೋಳ ಆಧಾರಿತ ಬಿಸ್ಕತ್ತು ಬೆಳ್ಳುಳ್ಳಿ ಪೌಷ್ಟೀಕರಿಸಿದ ಸಿರಿಧಾನ್ಯ ಆಧಾರಿತ ಬ್ರೆಡ್ ಕುರಿತು ಸಹ ರೈತರಿಗೆ ಮಾಹಿತಿ ಒದಗಿಸಲಾಯಿತು. ಹಿಂಗಾರು ಕಡಲೆ ತಳಿಗಳು ಸಿರಿಧಾನ್ಯ ಬೆಳೆಗಳಲ್ಲಿ ಸುಧಾರಿತ ಬೇಸಾಯ ಕ್ರಮಗಳು ಶಾಲಾ ಪೂರ್ವ ಮಕ್ಕಳಿಗೆ ಆರೋಗ್ಯ ವರ್ಧನೆಗೆ ಆಹಾರದ ಅವಶ್ಯಕತೆ, ದಿನಚರಿ ಮಾಹಿತಿ ಹಂಚಿಕೊಳ್ಳಲಾಯಿತು.


ಉದಯವಾಹಿನಿ ಚಿತ್ರ

**ಫೆರೋಮೋನ್ ಬಲೆಗಳು**

**ವಿರುದ್ಧ ಲಿಂಗದ ಕೀಟಗಳಿಂದ ಹೊರಹೊಮ್ಮುವ ಪರಿಮಳದಂತಹ ವಸ್ತುವನ್ನು ಬಳಸಿಕೊಂಡು ಗಂಡು ಪತಂಗಗಳನ್ನು ಆಕರ್ಷಿಸಿ ಕೊಲ್ಲುತ್ತವೆ. ಹೆಣ್ಣು ಕೀಟವೆಂದು ಭಾವಿಸುವ ಗಂಡು ಕೀಟಗಳು ವಾಸನೆಗೆ ಆಕರ್ಷಿತವಾಗಿ ಅಲ್ಲಿರುವ ಸಾವಯವ ಕೀಟನಾಶಕ ಅಥವಾ ಮೇಣದಂತಹ ವಸ್ತುವಿಗೆ ಸಿಲುಕಿ ಸಾಯುತ್ತವೆ. ಫೆರೋಮೋನ್ ಬಲೆ ಉಪಯೋಗಿಸಿ ಹಾರುವ ಹುಳುಗಳನ್ನು ನಿಯಂತ್ರಿಸಬಹುದು ಎಂದು ರೈತರಿಗೆ ಮನವರಿಕೆ ಮಾಡಿದರು.**

---

# ಗ್ರಾಮ ಆಡಳಿತ ಅಧಿಕಾರಿಗಳಿಗೆ ಮೂಲಸೌಕರ್ಯಗಳು ಒದಗಿಸಿ

• ಉದಯವಾಹಿನಿ, ಜೇವರ್ಗಿ

ತಾಲ್ಲೂಕಿನ ಮಿನಿ ವಿಧಾನಸೌಧದ ಎದುರುಗಡೆ ಗ್ರಾಮ ಆಡಳಿತ ಅಧಿಕಾರಿಗಳ ಕೇಂದ್ರ, ಸಂಘ ಜೇವರ್ಗಿ ಘಟಕದ ವತಿಯಿಂದ ಅನಿರ್ದಿಷ್ಟ ಅವಧಿ ಮುಷ್ಕರ ನಡೆಸಿದರು. ಗೌಡಪ್ಪ ಗೌಡ ಮಾಗಣಗೇರಾ ಮಾತನಾಡಿ ಗ್ರಾಮ ಆಡಳಿತ ಅಧಿಕಾರಿಗಳ ಹೋರಾಟ ಗುರುವಾರ ರಾಜ್ಯದ್ಯಂತ ಅನಿರ್ದಿಷ್ಟ ಅವಧಿ ಮುಷ್ಕರವನ್ನು ಹಮ್ಮಿಕೊಳ್ಳಲಾಗಿದೆ.

ಇದರ ಮೂಲ ಉದ್ದೇಶ ನೌಕರರಿಗೆ ಇರಬೇಕಾದ ಮೂಲಭೂತ ಸೌ ಕರ್ಯಗಳು, ಇರಿ ಅಧಿಕಾರಿಗಳಿಂದ ತೊಂದರೆ ತಪ್ಪಿಸಲುವಾಗಿ ಈ ಒಂದು ಮುಷ್ಕರ ಹಮ್ಮಿ ಕೊಳ್ಳಲಾಗಿದೆ ಎಂ ದು ಹೇಳಿದರು. ಗ್ರಾಮ ಆಡಳಿತ ಅಧಿಕಾ ರಿ ಗಳಿಗೆ ತಾಂತ್ರಿಕ ಹುದ್ದೆಗೆ ನೀಡುವ ವೇತನ ಶ್ರೇಣಿ ನಿಗದಿಪಡಿಸಬೇಕು. ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು.

ಪ್ರಯಾಣ ಬತ್ತಿದರವನ್ನು 500 ರೂಪಾಯಿಗಳಿಂದ 3000 ಗಳಿಗೆ ಹೆಚ್ಚುವರಿ ಮಾಡಬೇಕು. ಮನಿ ಆನೆ ಪ್ರಕರಣ ಜವಾಬ್ದಾರಿಯಿಂದ ಗ್ರಾಮ ಆಡಳಿತ ಅಧಿಕಾರಿಗಳನ್ನು ಕೈಬಿಡಬೇಕು. ಎಂದು ಗ್ರಾಮ ಆಡಳಿತ ಅಧಿಕಾರಿಗಳ ಸಂಘ ಸರಕಾರಕ್ಕೆ ಮನವಿ ಮಾಡಿಕೊಳ್ಳುತ್ತದೆ ಎಂದರು.

ಈ ಎಲ್ಲಾ ಬೇಡಿಕೆಗಳನ್ನು ಈಡೇರಿಸಿ ಉತ್ತಮ ಗುಣಮಟ್ಟದ ರೀತಿಯಲ್ಲಿ ಸಾರ್ವಜನಿಕ, ಸರ್ಕಾರಿ ಕೆಲಸಗಳನ್ನು ನಿರ್ವಹಿಸಲು ಅನುವು ಮಾಡಿಕೊಡಬೇಕೆಂದು ಸಂಘ ಗ್ರಹಿಸುತ್ತದೆ ಎಂದರು. ಈ ಸಂದರ್ಭದಲ್ಲಿ ಅಂಬರೀಶ್, ಅಂಬಿಕಾ, ಮಂಜುಳ, ಮಕ್ಬುಲ್ ಪಟೇಲ್, ಕುಶಾಲ್, ರಮೇಶ್ ಪವರ್, ರೇಣುಕಾ ಬಾಯಿ, ಶರಣಬಸಪ್ಪ ನಾಟಿಕರ್, ಶಿವಾನಂದ್, ಶ್ರೀದೇವಿ, ಗಂಗಾಧರ್, ದೀಪ, ಗ್ರಾಮ ಆಡಳಿತ ಅಧಿಕಾರಿಗಳ ನೌಕರ ಸಂಘದ ಪದಾಧಿಕಾರಿಗಳು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

> ಆಹರ ಇಲಾಖೆಯ ಸಿರಸ್ತುದಾರರ ಹುದ್ದೆಗೆ ಬರ್ತೀ ನೀಡಬೇಕು. ಕೆಲಸದ ಅವಧಿ ಮುಗಿದ ಬಳಿಕ ಯಾವುದೇ ಸಭೆಗಳು ಕರೆಯಬಾರದು. ಮೂರು ವರ್ಷಗಳ ಸೇವೆಯನ್ನು ಪರಿಗಣಿಸಿ ಅಂತರ್ಜಿಲ್ಲಾ ವರ್ಗಾವಣೆಗಾಗಿ ಕಂದಾಯ ಇಲಾಖೆ ಹೊಸ ಮಾರ್ಗಸೂಚನೆ ರಚಿಸಬೇಕು
>
> - ಗೌಡಪ್ಪ ಗೌ ಡ ಮಾಗಣಗೇರಾ

# ಮಾವನ ಮೇಲೆ ಸಿಟ್ಟು: 106 ಅಡಿಕೆ ಗಿಡ ಕಡಿದು ಹಾಕಿದ ಅಳಿಯ

• ಉದಯವಾಹಿನಿ, ಹಾವೇರಿ

ತನ್ನ ಪತ್ನಿಯನ್ನು ಮನೆಗೆ ಕಳುಹಿಸಲಿಲ್ಲವೆಂಬ ಕಾರಣಕ್ಕೆ ಮಾವನ ಮೇಲೆ ಸಿಟ್ಟಾದ ಅಳಿಯನೊಬ್ಬ, ಮಾವನ ಜಮೀನಿನಲ್ಲಿ ಬೆಳೆದಿದ್ದ 106 ಅಡಿಕೆ ಗಿಡಗಳನ್ನು ಕಡಿದು ಹಾಕಿ ನಾಶಪಡಿಸಿರುವ ಬಗ್ಗೆ ಆಡೂರು ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಹಾನಗಲ್ ತಾಲ್ಲೂಕಿನ ಬಸಾಪುರ ಗ್ರಾಮದ ದೇವೇಂದ್ರಪ್ಪ ಫಕ್ಕೀರಪ್ಪ ಗಾಣಿಗೇರ (55) ಅವರು ದೂರು ನೀಡಿದ್ದಾರೆ.

ಅವರ ಅಳಿಯನಾದ ಬಸವರಾಜ ವಿರುದ್ಧ ಪ್ರಕರಣ ದಾಖಲಿಸಿಕೊಂಡು, ತನಿಖೆ ಮುಂದುವರಿಸಲಾಗಿದೆ' ಎಂದು ಪೊಲೀಸರು ಹೇಳಿದರು. ದೂರುದಾರ ದೇವೇಂದ್ರಪ್ಪ, ತಮ್ಮ ಮಗಳನ್ನು ಶಿವಮೊಗ್ಗ ಜಿಲ್ಲೆಯ ಸೊರಬ ತಾಲ್ಲೂಕಿನ ಬಸವರಾಜನಿಗೆ 10 ವರ್ಷಗಳ ಹಿಂದೆ ಮದುವೆ ಮಾಡಿ ಕೊಟ್ಟಿದ್ದರು. ಮದ್ಯ ವ್ಯಸನಿಯಾಗಿದ್ದ ಆರೋಪಿ ಬಸವರಾಜ, ಪತ್ನಿ ಜೊತೆ ನಿತ್ಯವೂ ಜಗಳ ಮಾಡಲಾರಂಭಿಸಿದ್ದ. ತವರು ಮನೆಯವರು ಎಷ್ಟೇ ಎಚ್ಚರಿಕೆ ನೀಡಿದರೂ ಬಸವರಾಜ ಸುಧಾರಿಸಿರಲಿಲ್ಲ. ಇದರಿಂದ ಬೇಸತ್ತ ದೇವೇಂದ್ರಪ್ಪ ಅವರ ಮಗಳು, ಗಂಡನ ಮನೆ ಬಿಟ್ಟು ಬಂದು ತವರು ಮನೆಯಲ್ಲಿ ಉಳಿದುಕೊಂಡಿದ್ದರು' ಎಂದರು.

ದೇವೇಂದ್ರಪ್ಪ ಅವರ ಮಗಳು ಮೂರು ತಿಂಗಳಿನಿಂದ ಗಂಡನ ಮನೆಗೆ ಹೋಗಿರಲಿಲ್ಲ. ಪತ್ನಿಯನ್ನು ಮನೆಗೆ ಕಳುಹಿಸುವಂತೆ ಬಸವರಾಜ ಹಲವು ಬಾರಿ ಒತ್ತಾಯಿಸಿದ್ದ. ಆದರೆ, ಮದ್ಯ ಕುಡಿಯುವುದನ್ನು ಬಿಡುವಂತೆ ತವರು ಮನೆಯವರು ಹೇಳಿದ್ದರು. ಆದರೆ, ಬಸವರಾಜ ಮದ್ಯ ಬಿಟ್ಟಿರಲಿಲ್ಲ. ಹೀಗಾಗಿ, ಮಗಳನ್ನು ಕಳುಹಿಸುವುದಿಲ್ಲವೆಂದು ದೇವೇಂದ್ರಪ್ಪ ಅವರು ಹೇಳಿದ್ದರು' ಎಂದು ಪೊಲೀಸರು ಮಾಹಿತಿ ನೀಡಿದರು.


ಉದಯವಾಹಿನಿ ಚಿತ್ರ

---

# ಮೇಲ್ಸೇತುವೆ ಕಾಮಗಾರಿ ವಿಳಂಬ: ಜನರ ಪರದಾಟ

• ಉದಯವಾಹಿನಿ, ಶಿಗ್ಗಾವಿ

ತಾಲ್ಲೂಕಿನ ಖುರ್ಸಾಪುರ ಕ್ರಾಸ್ ಹತ್ತಿರದ ರಾಷ್ಟ್ರೀಯ ಹೆದ್ದಾರಿಯಲ್ಲಿ ನಿರ್ಮಾಣವಾಗುತ್ತಿರುವ ಮೇಲ್ಸೇತುವೆ ಕಾಮಗಾರಿ ಆಮೆಗತಿಯಲ್ಲಿ ಸಾಗಿದ್ದು, ನಿತ್ಯ ವಾಹನ ಚಾಲಕರು, ಪಾದಚಾರಿಗಳು ಸಂಚರಿಸಲು ಪರದಾಡುವಂತಾಗಿದೆ. ಎರಡು ವರ್ಷಗಳಿಂದ ನಡೆಯುತ್ತಿರುವ ಮೇಲ್ಸೇತುವೆ ಕಾಮಗಾರಿ ಕುಂಟುತ್ತ ಸಾಗಿದೆ.

ಅದರಿಂದಾಗಿ ವಾಹನ ಚಾಲಕರು ಸಂಚಾರಕ್ಕೆ ಹರಸಾಹಸ ಪಡುತ್ತಿದ್ದಾರೆ. ಹುಬ್ಬಳ್ಳಿಯಿಂದ ಬೆಂಗಳೂರು, ದಾವಣಗೆರೆ, ಹಾವೇರಿ ಕಡೆ ಹೋಗು ವ ಮತ್ತು ಬರುವ ವಾಹನಗಳಿಗೆ ಇಕ್ಕಟಾದ ರಸ್ತೆ ಮಾರ್ಗ ತೋರಿಸಲಾಗಿದೆ. ಆದರೆ ಅದರಲ್ಲಿ ದಾಟಿ ಹೋಗಬೇಕೆಂದರೆ ಕನಿಷ್ಠ ಒಂದು ಗಂಟೆ ಕಾಲ ಬೇಕಾಗುತ್ತಿದೆ. ಹೀಗಾಗಿ ಬೆಂಗಳೂರು, ಮೈಸೂರಿಗೆ ಹೋಗುವ ಬರುವ ವಾಹನಗಳಿಗೆ ತೊಂದರೆ ಆಗುತ್ತಿದೆ. ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳು ಮೇಲ್ಸೇತುವೆ ಕಾಮಗಾರಿ ಆರಂಭದ ಮುನ್ನ ರಸ್ತೆಯ ಎರಡೂ ಬದಿ ಸರ್ವಿಸ್ ರಸ್ತೆ ಕಾಮಗಾರಿ ಮುಗಿಸಿ ಈ ರಸ್ತೆಯಲ್ಲಿ ಸುಗಮವಾಗಿ ವಾಹನಗಳು ಸಂಚರಿಸುವಂತೆ ಮಾಡಬೇಕಿತ್ತು. ಆದರೆ ಈ ರಸ್ತೆಗಳು ಈವರೆಗೂ ಪೂರ್ಣಗೊಂಡಿಲ್ಲ. ಇನ್ನೂ ಕೆಲವು ರಸ್ತೆಗಳಲ್ಲಿ ಗುಂಡಿಗಳು ಉಂಟಾಗಿದ್ದು, ವಾಹನಗಳು ಸಂಚರಿಸದಂತಾಗಿದೆ. ಸರ್ವಿಸ್ ರಸ್ತೆಯಲ್ಲಿ ದ್ವಿಚಕ್ರ ವಾಹನ ಸವಾರರು ಬಿದ್ದು, ತೀವ್ರವಾಗಿ ಗಾಯಗೊಂಡಿದ್ದಾರೆ.

ಕೆಲವರು ಇನ್ನೂ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಇದಕ್ಕೆಲ್ಲ ಹೊಣೆಗಾರರು ಯಾರು ಎಂಬುವುದು ಸಾರ್ವಜನಿಕರ ಪ್ರಶ್ನೆಯಾಗಿದೆ. ಆದರೆ ಅಧಿಕಾರಿಗಳು ಮಾತ್ರ ಇದನ್ನು ನೋಡಿಯೂ ನೋಡದಂತೆ ತಮ್ಮ ಪಾಡಿಗೆ ತಾವು ಇದ್ದಾರೆ.


ಉದಯವಾಹಿನಿ ಚಿತ್ರ

# ಗಿಡಮರಗಳು ಉಳಿದರೆ ಜನಜೀವನ ಉಳಿಯಲು ಸಾಧ್ಯ: ಅಧ್ಯಕ್ಷ

• ಉದಯವಾಹಿನಿ,ಚಿಂಚೋಳಿ

ಪ್ರತಿಯೊಬ್ಬರು ಮನೆಯ ಸುತ್ತಮುತ್ತಲಿನ ಪ್ರದೇಶ ಹೊಲಗದ್ದೆಗಳಲ್ಲಿ ಮರಗಿಡಗಳು ಬೆಳೆಸಬೇಕು ಮರಗಿಡಗಳು ಬೆಳೆಸಿದರೆ ಜನಜೀವನ ಉಳಿಯಲು ಸಾಧ್ಯ ಎಂದು ಪುರಸಭೆ ಅಧ್ಯಕ್ಷ ಆನಂದ ಟೈಗರ್ ಹೇಳಿದರು.

ಪಟ್ಟಣದ ಚಂದಾಪುರದ ರಾಮ ಮಂದಿರದಲ್ಲಿ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ಹಾಗೂ ಜನಜಾಗೃತಿ ವೇದಿಕೆ ವತಿಯಿಂದ ಹಮ್ಮಿಕೊಂಡ ಅರಣ್ಯಕರಣ ಕಾರ್ಯಕ್ರಮದಡಿ ಸಸಿ ನೆಟ್ಟು, ಸಸಿ ವಿತ ರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸಸಿನೆಟ್ಟು ಮರವಾಗಿ ಹೆಮ್ಮಾರವಾಗಿ ಬೆಳೆದರೆ ಪ್ರತಿಯೊಬ್ಬರಿಗೂ ಶುದ್ಧ ಗಾಳಿ,ನೆರಳು,ಆಮ್ಲಜನಕ ನೀಡುತ್ತದೆ ಇದರಿಂದ ಸಾರ್ವಜನಿಕರ ನೆಮ್ಮದಿಯ ಬ ದುಕು ನಡೆಸಬಹುದು.

ಈ ಸಂದರ್ಭದಲ್ಲಿ ಧರ್ಮಸ್ಥಳ ಸಂಸ್ಥೆಯ ಯೋಜನಾಧಿಕಾರಿ ಜಿ.ಗೋಪಾಲ, ಜಿಲ್ಲಾ ಜನ ಜಾಗೃತಿ ವೇದಿಕೆ ಉಪಾಧ್ಯಕ್ಷ ನರಸಮ್ಮಾ ಲಕ್ಷ್ಮಣ ಆ ವುಂಟಿ, ಸರ್ಕಾರಿ ಸಾರ್ವಜನಿಕ ಆಸ್ಪತ್ರೆ ಎಂಓ ಡಾ. ಸಂತೋಷ ಪಾಟೀಲ, ಒಕ್ಕೂಟದ ಅಧ್ಯಕ್ಷ ನರ್ಮದಾ, ಪುರಸಭೆ ಸದಸ್ಯ ರಾಧಾಭಾಯಿ ಓಲಗೇರಿ, ಸುರೇಶ ದೇಶಪಾಂಡೆ, ಕೃಷಿ ಮೇಲ್ವಿಚಾರಕ ಕೆ.ಎಚ್.ಸತೀಶ, ವಲಯ ಮೇಲ್ವಿಚಾರಕ ವೀರೇಂದ್ರ ಅಗ್ಗಿಮಠ, ಸಂತೋಷ ಕೊಂಡಾ,ಮಂಜುನಾಥ ಸುನಗಾಮಠ, ರಾಘವೇಂದ್ರ ಅನೇಕರಿದರು.


ಉದಯವಾಹಿನಿ ಚಿತ್ರ

**ಹೊಲ, ಗದ್ದೆಗಳಲ್ಲಿ ಮರಗಿಡಗಳು ಬೆಳೆಸಿ**

> ಸಸಿಗಳಿಂದ ಮರಗಳು ಬೆಳೆಸಿ ನಾಡು ಉಳಿಸಿ ಒಂದು ಮರ ಕಡಿದರೆ ಎರಡು ಸಸಿಗಳು ನೆಡಬೇಕು ಕರೋನಾ ಸಂದರ್ಭದಲ್ಲಿ ಅನೇಕರು ಆಮ್ಲಜನಕದ ಕೊರತೆಯಿಂದ ಬಹಳಷ್ಟು ಜನರು ನಮ್ಮನ್ನು ಆಗಲಿ ಹೋಗಿದ್ದಾರೆ ಅದಕ್ಕೆ ಮರಗಳು ಕೊರತೆ ಶುದ್ಧವಾದ ಗಾಳಿ ಆಮ್ಲಜನಕ ಕೊರತೆ ಕಾರಣವಾಗಿದೆ,ಒಬ್ಬ ರೈತ ದೇಶ ನಡೆಸಬಹುದು ದೇಶದಲ್ಲಿ ಶೇಕಡಾ 60ರಷ್ಟು ಜನರು ಕೃಷಿ ಮೇಲೆ ಅವಲಂಬಿತರಾಗಿದ್ದು ಭಾರತ ದೇಶದ ಕೃಷಿ ಆಹಾರ ಧಾನ್ಯಗಳನ್ನು ವಿದೇಶದಲ್ಲಿ ಸಹ ಮಾರಾಟವಾಗುತ್ತದೆ ಆದರೂ ಸಹ ರೈತರ ಆದಾಯ ದ್ವಿಗುಣವಾಗದೆ ರೈತರು ಬಹಳಷ್ಟು ಸಂಕಷ್ಟದ ಲ್ಲಿದ್ದಾರೆ ಸರ್ಕಾರಗಳು ರೈತರ ನೆರವಿಗೆ ಧಾವಿಸಬೇಕು
>
> -ಆನಂದ ಟೈಗರ್, ಅಧ್ಯಕ್ಷ

---

# ಮಕ್ಕಳಿಗೆ ಊಟ ಕೊಟ್ಟರೆ ದೇವರಿಗೆ ನೈವೇದ್ಯ ಇಟ್ಟಂತೆ: ಮಧು ಬಂಗಾರಪ್ಪ

## ಯಾದಗಿರಿ ಜಿಲ್ಲೆಯಲ್ಲಿ ಕಾರ್ಯಕ್ರಮಕ್ಕೂ ಮುಂಚೆ ಮಕ್ಕಳೊಂದಿಗೆ ಮಧ್ಯಾಹ್ನದ ಊಟಸವಿದ ಸಚಿವರು, ಶಾಸಕರು


• ಉದಯವಾಹಿನಿ, ಯಾದಗಿರಿ

ಇಡೀ ರಾಜ್ಯದಲ್ಲಿ ಯಾದಗಿರಿ ಜಿಲ್ಲೆ ಶಿಕ್ಷಣದಲ್ಲಿ ಮೊದಲ ಸ್ಥಾನ ಬರುತ್ತದೆ ಎಂದು ನಾನು ಭರವಸೆಯ ಗ್ಯಾರಂಟಿ ಕೊಡ್ತೇನೆ ಹಾಗೂ ಮಕ್ಕಳಿಗೆ ಊಟ ಕೊಟ್ಟರೆ ದೇವರಿಗೆ ನೈವೇದ್ಯ ಇಟ್ಟಂತೆ ಎಂದು ಪ್ರಾಥ ಮಿಕ, ಪ್ರೌಢಶಾಲಾ ಶಿಕ್ಷಣ ಸಚಿವರಾದ ಶ್ರೀ ಮಧು ಬಂಗಾರಪ್ಪ ಅವರು ನುಡಿದರು.

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಅಕ್ಷರ ದಾಸೋಹ- ಮಧ್ಯಾಹ್ನ ಉಪಹಾರ ಯೋಜನೆಯಡಿ ಅಜೀಂ ಪ್ರೇಮ್ ಜೀ ಫೌಂಡೇಷನ್ ಇವರ ಸಹಭಾಗಿತ್ವದಲ್ಲಿ ಶಾಲಾ ಮಕ್ಕಳ ಪೌಷ್ಟಿಕತೆ ವೃದ್ಧಿಸಲು ಯಾದಗಿರಿ ತಾ ಲ್ಲೂಕಿನ ಅರಿಕೇರಾಕೆ ಸರಕಾರಿ ಪ್ರೌಢಶಾಲೆಯಲ್ಲಿ ನಡೆದ 2024- 25 ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಪೂರ್ವ ಪ್ರಾಥಮಿಕ, ಪ್ರೌಢಶಾಲಾ ವಿದ್ಯಾರ್ಥಿಗಳಿಗೆ ವಾರದಲ್ಲಿ 6 ದಿನಗಳು ಪೂರಕ ಪೌಷ್ಟಿಕ ಆಹಾರವನ್ನು ವಿತರಿಸು ವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಸರ್ಕಾರದಿಂದ ಸಾಕಷ್ಟು ಕಾರ್ಯಕ್ರಮಗಳನ್ನು ಕೊಡ್ತಾ ಬಂದಿದ್ದೇವೆ. ನಮ್ಮ ಇಲಾಖೆ ವ್ಯಾಪ್ತಿಯಲ್ಲಿ ಒಟ್ಟು 76 ಸಾವಿರ ಶಾಲೆಗಳು ಬರುತ್ತವೆ. ಒಟ್ಟು 60 ಲಕ್ಷ ಮಕ್ಕಳು ವಿದ್ಯಾಭ್ಯಾಸ ಮಾಡ್ತಾ ಇದ್ದಾರೆ. ವಾರದಲ್ಲಿ 6 ದಿನ ಮೊಟ್ಟೆ ವಿತರಿಸಲು ಚಾಲನೆ ನೀಡಲಾಗಿದ್ದು, ರಾಜ್ಯದ 57 ಲಕ್ಷ ವಿದ್ಯಾರ್ಥಿಗಳು ಈ ಸೌಲಭ್ಯ ಪಡೆಯುತ್ತಿದ್ದಾರೆ.

ಇದಕ್ಕೆ ಅಜೀಂ ಪ್ರೇಮ್‌ಜಿ ಫೌಂಡೇಶನ್ ರವರು ಕೈ ಜೋಡಿಸಿದ್ದಾರೆ ಅವರಿಗೆ ಸರ್ಕಾರದ ಪರವಾಗಿ ಧನ್ಯವಾದಗಳು ತಿಳಿಸುತ್ತೇವೆ ಎಂದರು. ಸರ್ಕಾರದ ಬಂದಾಗ ವಾರಕ್ಕೆ ಒಂದು ಬಾರಿ ಮೊಟ್ಟೆ ಕೊಡುತ್ತಿತ್ತು, ಆನಂ ತರ ಎರಡು ಬಾರಿ ಕೊಟ್ಟು ಇಂದು ವಾರಕ್ಕೆ ಆರು ದಿನ ಮೊಟ್ಟೆ ಕೊಡುತ್ತದೆ ಎಂದರು. ವಾರದಲ್ಲಿ ಅಜೀಂ ಫ್ರೇಮ್ ಜೀ ಫೌಂಡೇಶನ್ ವತಿಯಿಂದ 2, ಸರ್ಕಾರದ ವತಿಯಿಂದ 4 ಮೊಟ್ಟೆ ಸೇರಿದಂತೆ ಒಟ್ಟು 6 ಮೊಟ್ಟೆ ವಿತರಿಸುತ್ತದೆ ಎಂದರು. ಸರಕಾರವು ಬಡವರ ಪರವಾಗಿ ಕಾರ್ಯಕ್ರಮಗಳನ್ನು ಕೊಡ್ತಾ ಇದೆ. ಸರ್ಕಾರ ಬಂದಮೇಲೆ ಗ್ಯಾರಂಟಿ ಕೊಡುತ್ತಿರುವುದು ನಮ್ಮ ಹೆಮ್ಮೆ ಎಂದರು. ಬಡವರ ಹೊಟ್ಟೆ ತುಂಬಿಸುವ ಕಾರ್ಯ ಅನ್ನಭಾಗ್ಯ ಯೋಜನೆಯಾಗಿದೆ ಎಂದರು. ಮಕ್ಕಳ ಪೌಷ್ಠಿಕತೆಗೆ ಹೆಚ್ಚು ಒತ್ತು ಕೊಡುತ್ತಿದ್ದು, ಈ ಯೋಜನೆಗೆ ಸರ್ಕಾರವು ಮೂರು ವರ್ಷಕ್ಕೆ 1591 ಕೋಟಿ ರೂಗಳನ್ನು ಖರ್ಚು ಮಾಡುತ್ತಿದ್ದು ಇತಿಹಾಸವಾಗಿದೆ ಎಂದರು. 5 ಸಾವಿರ ಶಿಕ್ಷಕರ ನೇಮಕವನ್ನು ವಿಶೇಷವಾಗಿ ಕಲ್ಯಾಣ ಕರ್ನಾಟಕ ಭಾಗಕ್ಕೆ ಕೊಡಲು ಪ್ರಯತ್ನಿಸಲಾಗುತ್ತಿದೆ ಎಂದು ಸಚಿವರು ನುಡಿದರು. ಇವತ್ತು ಸರ್ಕಾರ ಶಿಕ್ಷಣಕ್ಕೆ ಹೆಚ್ಚು ಒತ್ತು ಕೊಡುತ್ತಿದೆ.ದೇಶದ ಭವಿಷ್ಯದ ಮಕ್ಕಳ ಕೈಯಲ್ಲಿದೆ. ಎಲ್ಲಾ ಮಕ್ಕಳನ್ನು ಶಾಲೆಗೆ ಬರುವಂತೆ ಮಕ್ಕಳಿಗೂ, ಪೋಷಕರಿಗೆ ಮನವೊಲಿಸಬೇಕು ಎಂದರು. ಶಿಕ್ಷಣಕ್ಕೆ ಸರ್ಕಾರ ಎಲ್ಲಾ ರೀತಿಯ ಸೌಲಭ್ಯ ಕೊಡ್ತಿದೆ. ವಿಶೇಷವಾಗಿ ನಮ್ಮ ಭಾಗಕ್ಕೆ 371 ಜೆ ಬಂದ ಮೇಲೆ ಹೆಚ್ಚು ಅನುದಾನ ಕೊಡುತ್ತಿದೆ ಎಂದರು. ವಿದ್ಯಾರ್ಥಿಗಳು ಕೂಡ ವಿದ್ಯಾಭ್ಯಾಸಕ್ಕೆ ಹೆಚ್ಚಿನ ಒತ್ತು ಕೊಡಬೇಕು ಜೀವನದಲ್ಲಿ ಮೇಲೆ ಬರಲು ಪಣ ತೊಡಬೇಕು ಎಂದರು.

ಗುರುಮಿಠಕಲ್ ಶಾಸಕ ಶರಣಗೌಡ ಕಂದಕೂರ, ಶಾಸಕ ಶಶೀಲ್ ಜಿ ನಮೋಶಿ, ಅಜೀಂ ಪ್ರೇಮ್ ಜಿ ಫೌಂಡೇಶನ್ ಮುಖ್ಯಸ್ಥ ರುದ್ರೇಶ ಎಸ್, ಶಾಲಾ ಶಿಕ್ಷಣ ಮತ್ತು ಸಾಕ್ಷರತ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ ರಿತೇಶ ಕುಮಾರ ಸಿಂಗ್, ಶಿಕ್ಷಣ ಇಲಾಖೆ ಆಯುಕ್ತೆ ಬಿ.ಬಿ ಕಾವೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಹಾಗೂ ಪಿಎಂ ಪೋಷಣ್ ನಿರ್ದೇಶಕ ಸಿಂಧು ಬಿ ರೂಪೇಶ್, ಶಾಲಾ ಶಿಕ್ಷಣ ಇಲಾಖೆಯ ಅಪರ ಆ ಯುಕ್ತ ಡಾ.ಆಕಾಶ ಎಸ್, ಜಿಲ್ಲಾ ಪಂಚಾಯತ ಸಿಇಓ ಲವೀಶ್ ಒರಡಿಯಾ, ಡಿಡಿಪಿಐ ಮಂಜುನಾಥ, ಅಕ್ಷರ ದಾಸೋಹ ಯೋಜನೆಯ ಶಿಕ್ಷಣಾಧಿಕಾರಿ ಕನಕಪ್ಪ, ಗ್ರಾಮ ಪಂಚಾಯತಿ ಅಧ್ಯಕ್ಷೆ ಶಾರದಮ್ಮ, ಪ್ರೌಢ ಶಾಲೆಯ ಎಸ್‌ಡಿಎಂ ಸಿ ಅಧ್ಯಕ್ಷ ಸಿದ್ದಲಿಂಗಯ್ಯ ಸ್ವಾಮಿ, ಪ್ರಾಥಮಿಕ ಶಾಲೆಯ ಅಧ್ಯಕ್ಷ ಸಿದ್ರಾಮ್ ಬೀರೆ ಇನ್ನಿತರರು ಉಪಸ್ಥಿತರಿದ್ದರು.


ಉದಯವಾಹಿನಿ ಚಿತ್ರ

**ವಾರದಲ್ಲಿ ಆರು ದಿನ ಮೊಟ್ಟೆ ವಿತರಣೆ**


ಉದಯವಾಹಿನಿ ಚಿತ್ರ

> ಶಾಲಾ ಮಕ್ಕಳ ಪೌಷ್ಟಿಕತೆ ಹೆಚ್ಚಿಸುವ ನಿಟ್ಟಿನಲ್ಲಿ ವಾರದಲ್ಲಿ 6 ದಿನ ಪೂರಕ ಪೌಷ್ಟಿಕ ಆಹಾರವನ್ನು ಒದಗಿಸುವಕಾರ್ಯಕ್ರಮಕ್ಕೆ ಚಾಲನೆ ನೀಡಿದೆ, ಸರ್ಕಾರ ಮಾಡುತ್ತಿರುವುದು ಮಕ್ಕಳ ಸಲುವಾಗಿಯೇ ತಂದೆ ತಾಯಿ ಮಾಡದ ಕೆಲಸ ಸರ್ಕಾರ ಮಾಡುತ್ತಿದೆ. ಅಜಿಮ್ ಪ್ರೇಮ್ ಜಿ ಫೌಂಡೇಶನ್ ಸಂಸ್ಥೆಯವರು ಶೇಕಡಾ 80 ರಷ್ಟು ಅವರ ಅನುದಾನವನ್ನು ಸಮಾಜ ಸೇವೆಗೆ ಖರ್ಚು ಮಾಡುತ್ತಿದೆ ಇವರ ಕಾರ್ಯ ಶ್ಲಾಘನೀಯ
>
> - ಚೆನ್ನಾರೆಡ್ಡಿ ಪಾಟೀಲ ತುನ್ನೂರ ಯಾದಗಿರಿ ಶಾಸಕ

> ನಾವೆಲ್ಲರೂ ಸೇರಿ ಸಚಿವರಿಗೆ ಧನ್ಯವಾದ ಹೇಳಬೇಕು. ಇವರ ಸತತ ಪ್ರಯತ್ನದ ಫಲವಾಗಿ ಹೆಚ್ಚುವರಿಯಾಗಿ 2 ದಿನದ ಬದಲಾಗಿ 6 ದಿನ ನೀಡಲು ಚಾಲನೆ ನೀಡಲು ನಮ್ಮ ಜಿಲ್ಲೆಗೆ ಬಂದು ಉದ್ಘಾಟನೆ ಮಾಡಿದ್ದು ಸಂತೋಷ ತಂದ ಸಂಗತಿಯಾಗಿದೆ
>
> - ಶರಣಬಸಪ್ಪ ದರ್ಶನಾಪುರ ಜಿಲ್ಲಾ ಉಸ್ತುವಾರಿ ಸಚಿವ

---

# ಮಿನಿ ನ್ಯೂಸ್

## ಭೀಕರ ಅಪಘಾತಕ್ಕೆ ನಾಲ್ವರು ಬಲಿ

• ಉದಯವಾಹಿನಿ, ಮುದ್ದೇಬಿಹಾಳ

ತಾಳಿಕೋಟೆ ಹುನಗುಂದ ರಾಜ್ಯ ಹೆದ್ದಾರಿ ಧನ್ನೂರ ಟೋಲ್ ಹತ್ತಿರ ಸೆ 26 ಗುರುವಾರ ಬೆಳಗಿನ ಜಾವ ನಡೆದ ಕಾರು ಮತ್ತು ಕ್ಯಾಂಟರ್ ನಡುವೆ ನಡೆದ ಭೀಕರ ಅಪಘಾತದಲ್ಲಿ ಮುದ್ದೇಬಿಹಾಳ ತಾಲ್ಲೂಕಿನ ನಾಲ್ವರು ಸ್ಥಳದಲ್ಲಿ ಅಸುನೀಗಿದ್ದಾರೆ.

ಮೃತರು ಬಿದರಕುಂದಿ ಗ್ರಾಮದ ಗುತ್ತಿಗೆದಾರ ಲಕ್ಷ್ಮಣ ವಡ್ಡರ, ಭೈಲಪ್ಪ ಬಿರಾದಾರ, ಮುದ್ದೇಬಿಹಾಳ ಪಟ್ಟಣದ ರಾಮಣ್ಣ ನಾಯಕಮಕ್ಕಳ ಹಾಗೂ ಕಾರ್ ಚಾಲಕ ಗುಡ್ನಾಳದ ಮಹ್ಮದ ರಫೀಕ ಎಂದು ಗುರುತಿಸಲಾಗಿದೆ. ಮೃತರೆಲ್ಲರು ಹೋಸಪೇಟೆ ಹುಲಿಗೆಮ್ಮ ದೇವಿ ದೇವಾಲಯ ಹೋಗಿ ಬರುವ ವೇಳೆ ದುರಂತ ಸಂಭವಿಸಿದೆ ಈ ಕುರಿತು ಹುನಗುಂದ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಕಾನೂನು ಬಾಹಿರ ಖಾಸಗಿ ಶಾಲೆಗಳ ಮೇಲೆ ಸೂಕ್ತ ಕ್ರಮಕ್ಕೆ ಮನವಿ

• ಉದಯವಾಹಿನಿ, ಯಾದಗಿರಿ


ಉದಯವಾಹಿನಿ ಚಿತ್ರ

ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಜಿಲ್ಲಾ ಸಮಿತಿಯಿಂದ ಯಾದಗಿರಿ ಜಿ ಲ್ಲೆಯ ಸುರಪುರ, ಹುಣಸಗಿ ತಾಲ್ಲೂಕಿನ ವ್ಯಾಪ್ತಿಯ ಬರುವ ಸಾಯಿ ವಿಜ್ಞಾನ ಆಂಗ್ಲ ಮಾಧ್ಯಮ ಶಾಲೆ ಹುಣಸಗಿ ಮತ್ತು ಹೊಲಿಪೇಠ್ ಆಂಗ್ಲ ಮಾಧ್ಯಮ ಶಾಲೆ ಕೆಂಭಾವಿ ಈ ಖಾಸಗಿ ಶಾಲೆಯವರು ಅನ ಧಿಕೃತ ವಸತಿ ನಿಲಯ ನಡೆಸುತ್ತಿದ್ದು ಇದು ಕಾನೂನು ಬಾಹಿರ್ ಖಾಸಗಿ ಶಾಲೆಗಳ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸುವಂತೆ. ಮಾನ್ಯ ಶಿಕ್ಷಣ ಸಚಿವರಾದ ಶ್ರೀ ಮಧು ಬಂಗಾರಪ್ಪ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂಧರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಕಾಶಿನಾಥ್ ನಾಟೇಕಾರ್

ಜಿಲ್ಲಾ ಕಾರ್ಯಧ್ಯಕ್ಷರಾದ ಜುಮ್ಮಣ್ಣ ಗುಡಿಮನಿ, ಜಿಲ್ಲಾ ಕಾರ್ಯದರ್ಶಿ ದೊಡ್ಡ ಸಾಬಣ್ಣ ಕೆ ಶಹಪುರ್, ವಡಗೇರ ತಾಲ್ಲೂಕು ಅಧ್ಯಕ್ಷರಾದ ಮಲ್ಲಿಕಾರ್ಜುನ ಕುಮನೂರ, ವಡಗೇರ ತಾಲ್ಲೂಕು ಗೌರವ ಅಧ್ಯಕ್ಷರಾದ ಭೀಮಣ್ಣ ಕ್ಯಾತನಾಳ, ಅಂಬೇಡ್ಕರ್ ಸ್ವಾಭಿಮಾನಿ ಸೇನೆ ಯುವ ಮುಖಂಡರಾದ ಸೋಮು ಹಳ್ಳೂರ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

## ಇ.ವಿ. ಖರೀದಿಗೆ ಜನರ ಆಸಕ್ತಿ

• ಉದಯವಾಹಿನಿ, ಉಡುಪಿ

ಪೆಟ್ರೋಲ್ ಮತ್ತು ಡೀಸೆಲ್ ದುಬಾರಿಯಾಗಿರುವ ಈ ಸಂದರ್ಭದಲ್ಲಿ ಜಿಲ್ಲೆಯಲ್ಲೂ ಎಲೆಕ್ಟಿಕ್ ವಾಹನಗಳನ್ನು (ಇ.ವಿ) ಖರೀದಿಸುವವರ ಸಂಖ್ಯೆ ಹೆಚ್ಚುತ್ತಿದೆ. ಶಬ್ದ ಮಾಲಿನ್ಯ ಉಂಟುಮಾಡದ, ಹೊಗೆಯುಗುಳದ ಪರಿಸರ ಸ್ನೇಹಿ ವಾಹನಗಳನ್ನು ಕೊಂಡುಕೊಳ್ಳಲು ಗ್ರಾಹಕರು ಹೆಚ್ಚಿನ ಆಸಕ್ತಿ ತೋರಿಸುತ್ತಿದ್ದಾರೆ. ಈಗ ನಗರ ಪ್ರದೇಶದಲ್ಲಿ ವಾಹನಗಳ ಸಾಲು ಗಮನಿಸಿದರೆ, ಇ.ವಿ.ಗಳು ಕಣ್ಣಿಗೆ ಬಿದ್ದೇ ಬೀಳುತ್ತವೆ. ಅಷ್ಟರಮಟ್ಟಿಗೆ ಅವುಗಳು ಜನಪ್ರಿಯವಾಗುತ್ತಿವೆ. ಪ್ರಸಿದ್ಧ ಕಂಪನಿಗಳು ಕೂಡ ಈಚೆಗೆ ಇ.ವಿ.ಗಳ ನಿರ್ಮಾಣಕ್ಕೆ ಹೆಚ್ಚಿನ ಒತ್ತು ನೀಡುತ್ತಿವೆ.

ಜಿಲ್ಲೆಯ ಗ್ರಾಮೀಣ ಪ್ರದೇಶಗಳಲ್ಲೂ ಎಲೆಕ್ಟ್ರಿಕ್ ದ್ವಿಚಕ್ರ ವಾಹನ ಮತ್ತು ಕಾರುಗಳು ಬಳಕೆಯಾಗುತ್ತಿರುವುದನ್ನು ಕಾಣಬಹುದಾಗಿದೆ. ಉಡುಪಿ ನಗರ ಮತ್ತು ಮಣಿಪಾಲದಲ್ಲಿ ಇ.ವಿ.ಗಳ ಬಳಕೆದಾರರ ಸಂಖ್ಯೆ ಹೆಚ್ಚಿದೆ. ನಗರ ಪ್ರದೇಶಗಳಲ್ಲಿ ಎಲೆಕ್ಟ್ರಿಕ್ ದ್ವಿಚಕ್ರ ವಾಹನ, ಕಾರು ಮತ್ತು ರಿಕ್ಷಾಗಳ ಸಂಖ್ಯೆ ಹೆಚ್ಚಾಗುತ್ತಿದ್ದರೂ ಚಾರ್ಜಿಂಗ್ ಪಾಯಿಂಟ್‌ಗಳು ಸಮರ್ಪಕವಾಗಿಲ್ಲದಿರುವುದು ಇಂತಹ ವಾಹನ ಮಾಲೀಕರನ್ನು ಕಾಡುವ ದೊಡ್ಡ ಸಮಸ್ಯೆಯಾಗಿದೆ. ಜಿಲ್ಲೆಯಲ್ಲಿರುವ ಒಟ್ಟು ಎಲೆಕ್ಟ್ರಿಕ್ ವಾಹನಗಳಲ್ಲಿ ದ್ವಿಚಕ್ರ ವಾಹನಗಳ ಸಂಖ್ಯೆ ಅಧಿಕವಿದೆ.

ನಗರದೊಳಗಡೆ ಕಚೇರಿ ಮೊದಲಾದ ಕೆಲಸಕ್ಕೆ ತೆರಳುವವರು ಹೆಚ್ಚಾಗಿ ಇಂತಹ ವಾಹನಗಳನ್ನು ಖರೀದಿಸುತ್ತಿದ್ದಾರೆ. ಓಲಾ, ಏಥರ್, ಟಿವಿಎಸ್, ಎಂ.ಜಿ., ಟಾಟಾದಂತಹ ಎಲೆಕ್ಟ್ರಿಕ್ ವಾಹನಗಳನ್ನು ತಯಾರಿಸುವ ಪ್ರಮುಖ ಕಂಪನಿಗಳ ಶೋರೂಂಗಳು ಈಗ ನಗರದಲ್ಲಿವೆ.

## ಅಧ್ವಾನ ಸ್ಥಿತಿಯಲ್ಲಿ ಬೆಂಗಳೂರು ಮಂಗಳೂರು ರಾಷ್ಟ್ರೀಯ ಹೆದ್ದಾರಿ

• ಉದಯವಾಹಿನಿ, ಸಕಲೇಶಪುರ

ಕಾಂಕ್ರೀಟ್ ರಸ್ತೆ ನಿರ್ಮಾಣಕ್ಕೆಂದು, ಮಳೆಯಲ್ಲೇ ಡಾಂಬರ್ ರಸ್ತೆ ಅಗೆದ ಪರಿಣಾಮ, ಬೆಂಗಳೂರು-ಮಂಗಳೂರು ರಾಷ್ಟ್ರೀಯ ಹೆದ್ದಾರಿ ಕೆಸರುಮಯವಾಗಿದ್ದು, ಮಂಗಳವಾರ ರಾತ್ರಿಯಿಂದಲೇ ಸಾವಿರಾರು ವಾಹನಗಳ ಸಂಚಾರಕ್ಕೆ ಅಡಚಣೆ ಉಂಟಾಗಿದೆ. ಆನೇಮಹಲ್‌ನಿಂದ ಸಕಲೇಶಪುರ ಕಡೆ ಹಾಗೂ ಆನೇಮಹಲ್‌ನಿಂದ ದೋಣಿಗಾಲ್ ಕಡೆಗೆ 5-6 ಕಿ.ಮೀ.ಉದ್ದಕ್ಕೆ ಸಾವಿರಾರು ವಾಹನಗಳು ಗಂಟೆಗಟ್ಟಲೆ ನಿಂತಿದ್ದವು. ಹಾಸನದಿಂದ ಮಂಗಳೂರಿಗೆ ಹೋಗುತ್ತಿದ್ದ ಆಂಬುಲೆನ್ಸ್ ಕೂಡ ಮಾರ್ಗದ ಮಧ್ಯದಲ್ಲಿಯೇ ನಿಲ್ಲಬೇಕಾಯಿತು.

ಬೆಳಿಗ್ಗೆ 9.30ಕ್ಕೆ ವಿದ್ಯಾರ್ಥಿಗಳು ಮಧ್ಯ ವಾರ್ಷಿಕ ಪರೀಕ್ಷೆಗೆ ಹಾಜರಾಗಬೇಕಾಗಿತ್ತು. ಆನೇಮಹಲ್‌ನಲ್ಲಿ ರಸ್ತೆ ಅವ್ಯವಸ್ಥೆಯಿಂದಾಗಿ ವಾಹನಗಳು ಮಾರ್ಗದ ಮಧ್ಯದಲ್ಲಿ ಸಾಲುಗಟ್ಟಿ ನಿಂತಿದ್ದರಿಂದ ವಿದ್ಯಾರ್ಥಿಗಳಲ್ಲಿ ಆತಂಕ ಹೆಚ್ಚಿತ್ತು. 9.30ಕ್ಕೆ ಶಾಲೆಗೆ ಹೋಗಬೇಕಾದ ಮಕ್ಕಳು, ಮಧ್ಯಾಹ್ನ 12 ಗಂಟೆಗೆ ತಲುಪಿದರು. ಅವ್ಯವಸ್ಥೆಯ ಬಗ್ಗೆ ಗೊತ್ತಿದ್ದರಿಂದ ತಡವಾಗಿ ಬಂ ದ ಮಕ್ಕಳನ್ನು ಪ್ರತ್ಯೇಕವಾಗಿ ಕೂರಿಸಿ, ಪರೀಕ್ಷೆ ಬರೆಸಿದ್ದಾಗಿ ತಿಳಿದು ಬಂ ದಿದೆ. ಹಾಸನ-ಮಾರನಹಳ್ಳಿ ನಡುವೆ ಚತುಷ್ಪಥ ರಸ್ತೆ ಕಾಮಗಾರಿ ಪ್ರಗತಿ ಯಲ್ಲಿದ್ದು, ಆನೇಮಹಲ್ ಗ್ರಾಮದ ಬಳಿ ಮಂಗಳವಾರ ಮಧ್ಯಾಹ್ನ ದಿಂದ ಹೆದ್ದಾರಿಯನ್ನು ದೊಡ್ಡ ಯಂತ್ರಗಳಿಂದ ಬಗೆಯಲಾಗಿತ್ತು. ಒಂದು ಬದಿಯಲ್ಲಿ ರಸ್ತೆ ನಿರ್ಮಿಸಿ, ಮತ್ತೊಂದು ಬದಿಯಲ್ಲಿ ಸಂಚಾರಕ್ಕೆ ವ್ಯವಸ್ಥೆ ಮಾಡದೆ, ಇಡೀ ರಸ್ತೆಯನ್ನೇ ಅಗೆದಿರುವುದರಿಂದ ಮಳೆ ನೀರು ಸೇರಿ ಸಮಸ್ಯೆ ಉಂಟಾಗಿದೆ.

## ಇದ್ದೂ ಇಲ್ಲದಂತಾದ ಸಾರ್ವಜನಿಕ ಶೌಚಾಲಯ

• ಉದಯವಾಹಿನಿ, ಸಾಸ್ವೆಹಳ್ಳಿ

ಇಲ್ಲಿನ ಅಂಬೇಡ್ಕರ್ ವೃತ್ತದಲ್ಲಿ ಜನವರಿಯಲ್ಲಿ ನಿರ್ಮಿಸಿರುವ ಸಾರ್ವಜನಿಕ ಶೌಚಾಲಯ ಸಾರ್ವಜನಿಕರ ಉಪಯೋಗಕ್ಕೆ ಬಳಕೆಯಾಗುತ್ತಿಲ್ಲ. ಇದರಿಂದ ಶೌಚಾಲಯ ಇದ್ದೂ ಇಲ್ಲದಂತಾಗಿದೆ.

2021- 22ನೇ ಸಾಲಿನ 15ನೇ ಹಣಕಾಸು ಯೋಜನೆ ಅಡಿ ಮತ್ತು ಶಾಸಕರ ಸ್ಥಳೀಯ ಪ್ರದೇಶ ಅಭಿವೃದ್ಧಿ ಯೋಜನೆ ಅಡಿ ಸಾರ್ವಜನಿಕ ಶೌಚಾಲಯ ಮತ್ತು ಬಸ್ ಶೆಲ್ಟರ್ ಅನ್ನು ಅಂದಾಜು 30 ಲಕ್ಷ ವೆಚ್ಚದಲ್ಲಿ ನಿರ್ಮಾಣ ಮಾಡಲಾಗಿದೆ. ದೊಡ್ಡ ಹೋಬಳಿ ಕೇಂದ್ರದಲ್ಲಿ ಸಾರ್ವಜನಿಕ ಶೌಚಾಲಯ ಇಲ್ಲ ಎಂಬ ಕೊರಗು ಇತ್ತು. ಈಗ ಶೌಚಾಲಯ ಇದ್ದೂ ಬಳಕೆಯಾಗದಿರುವುದು ಬೇಸರ ತಂದಿದೆ.

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 10:30 ರಿಂದ 12:00 |
| ಗುಳಿಕ ಕಾಲ | ಬೆಳಿಗ್ಗೆ | 07:30 ರಿಂದ 09:00 |
| ಯಮಗಂಡ ಕಾಲ | ಮಧ್ಯಾಹ್ನ | 03:00 ರಿಂದ 04:30 |

**ಮೇಷ** ನೀವು ವಿರಾಮದ ಸಂತೋಷವನ್ನು ಅನುಭವಿಸಲಿದ್ದೀರಿ. ಪೂರ್ತಿ ದಿನ ನೀವು ಹಣದ ಬಗ್ಗೆ ಹೋರಾಟ ಮಾಡುತ್ತಿದ್ದೀರಿ, ಆದರೆ ಸಂಜೆಯ ಸಮಯದಲ್ಲಿ ನೀವು ಹಣದ ಲಾಭವನ್ನು ಪಡೆಯಬಹುದು.

**ವೃಷಭ** ನಿಮ್ಮ ಮನಸ್ಸು ಇತ್ತೀಚಿನ ಘಟನೆಗಳಿಂದ ತೊಂದರೆಗೊಳಗಾಗುತ್ತದೆ. ಧ್ಯಾನ ಮತ್ತು ಯೋಗ ಆಧ್ಯಾತ್ಮಿಕ ಹಾಗೂ ಭೌತಿಕ ಲಾಭಗಳಿಗೆ ಪ್ರಯೋಜನಕಾರಿ ಎಂದು ಸಾಬೀತಾಗುತ್ತದೆ.

**ಮಿಥುನ** ನಿಮ್ಮ ನಾಲಗೆ ನಿಮ್ಮ ಅಜ್ಜ ಅಜ್ಜಿಯಂದಿರ ಭಾವನೆಗಳಿಗೆ ಘಾಸಿ ಮಾಡುವುದರಿಂದ ನಿಮ್ಮ ಭಾಷೆಯನ್ನು ನಿಯಂತ್ರಿಸಿ. ಹರಟೆ ನಿಮ್ಮ ಸಮಯ ವ್ಯರ್ಥ ಮಾಡುವುದಕ್ಕಿಂತ ಸುಮ್ಮನಿರುವುದು ಉತ್ತಮ.

**ಕರ್ಕಾಟಕ** ನಿಮ್ಮ ಶಕ್ತಿ ಮತ್ತು ಉತ್ಸಾಹವನ್ನು ಮರಳಿ ತರುವ ಒಂದು ಆನಂದಮಯ ಪ್ರವಾಸಕ್ಕೆ ಹೋಗುವ ಸಾಧ್ಯತೆಯಿದೆ. ಇಂದು ನಿಮ್ಮ ಕೆಲಸದಲ್ಲಿ ನಿಮ್ಮ ಉತ್ತಮ ಕಾರ್ಯಗಳಿಗಾಗಿ ನಿಮ್ಮನ್ನು ಸನ್ಮಾನಿಸಲಾಗುವುದು.

**ಸಿಂಹ** ತುಂಬಾ ಪ್ರಯಾಣ ನಿಮಗೆ ದಣಿವಾಗಿಸುತ್ತದೆ ದುಂದುಗಾರಿಕೆ ಮತ್ತು ಸಂಶಯಾಸ್ಪದವಾದ ಹಣಕಾಸು ಯೋಜನೆಗಳನ್ನು ತಪ್ಪಿಸಿ. ಕೌಟುಂಬಿಕ ಅಗತ್ಯಗಳಿಗೆ ತಕ್ಷಣದ ಗಮನ ನೀಡಬೇಕು.

**ಕನ್ಯಾ** ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ಇಂದು ನೀವು ಹಣಕ್ಕೆ ಸಂಬಂಧಿಸಿದ ಸಮಸ್ಯೆಯನ್ನು ಹೊಂದಿರಬಹುದು.

**ತುಲಾ** ಸಮಸ್ಯೆಗಳಿಗೆ ಬಲುಬೇಗನೆ ಪರಿಹಾರ ಕಂಡುಹಿಡಿಯುವ ನಿಮ್ಮ ಸಾಮರ್ಥ್ಯ ನಿಮಗೆ ಗುರುತಿಸುವಿಕೆ ತರುತ್ತದೆ. ನಿಮ್ಮ ಸಂಗಾತಿ ನಿಮ್ಮ ಹೃದಯವನ್ನು ಆಲಿಸಲು ನಿಮಗೆ ಸಮಯ ಸಾಕಷ್ಟು ನೀಡುತ್ತಾರೆ.

**ವೃಶ್ಚಿಕ** ಆರೋಗ್ಯದ ಆರೈಕೆ ಮಾಡಿಕೊಳ್ಳಬೇಕು. ಇಂದು ಹಣಕಾಸಿನ ಭಾಗವು ಉತ್ತಮವಾಗಿರುತ್ತದೆ ಆದರೆ ಇದರೊಂದಿಗೆ ನೀವು ನಿಮ್ಮ ಹಣವನ್ನು ವ್ಯರ್ಥವಾಗಿ ಖರ್ಚು ಮಾಡದಂತೆ ನೋಡಿಕೊಳ್ಳಬೇಕು.

**ಧನಸ್ಸು** ವಿಧಿಯನ್ನು ಆಧರಿಸದಿರಿ ಮತ್ತು ನಿಮ್ಮ ಆರೋಗ್ಯ ಸುಧಾರಿಸಲು ಪ್ರಯತ್ನಿಸಿ ಏಕೆಂದರೆ ಅದೃಷ್ಟವು ಒಂದು ಸೋಮಾರಿ ದೇವತೆಯಾಗಿದ್ದು ಇದು ಎಂದಿಗೂ ತಾನಾಗಿಯೇ ನಿಮ್ಮ ಬಳಿ ಬರುವುದಿಲ್ಲ.

**ಮಕರ** ನಿಮ್ಮ ಹೆಂಡತಿಯ ಜೊತೆ ಕುಟುಂಬದ ಸಮಸ್ಯೆಗಳನ್ನು ಹಂಚಿಕೊಳ್ಳಿ. ನಮ್ಮನ್ನು ನೀವೇ ಒಂದು ಪ್ರೀತಿಯ ಪೋಷಿಸುವ ಜೋಡಿಯೆನ್ನುವುದನ್ನು ಪುನಃ ಕಂಡುಹಿಡಿಯಲು ಸ್ವಲ್ಪ ಸಮಯ ಖರ್ಚು ಮಾಡಿ.

**ಕುಂಭ** ಇಂದು ನೀವು ಚೈತನ್ಯಯುಕ್ತವಾಗಿರುತ್ತೀರಿ. ನೀವೇನೇ ಮಾಡಿದರೂ ಸಾಮಾನ್ಯವಾಗಿ ನೀವು ತೆಗೆದುಕೊಳ್ಳುವ ಅರ್ಧ ಸಮಯದಲ್ಲಿ ಅದನ್ನು ಮಾಡಲು ನಿಮಗೆ ಸಾಧ್ಯವಾಗುತ್ತದೆ.

**ಮೀನ** ನಿಮ್ಮ ಹಾಸ್ಯಪ್ರಜ್ಞೆ ಇನ್ನೊಬ್ಬರಿಗೆ ಸಂತೋಷ ವಸ್ತುಗಳನ್ನು ಹೊಂದುವುದರಲ್ಲದೇ ನಮ್ಮೊಳಗೇ ಇದೆಯೆಂದು ಅರ್ಥ ಮಾಡಿಸುವುದರಿಂದ ಅವರು ಸ್ವತಃ ಈ ಕೌಶಲ್ಯವನ್ನು ಹೊಂದಲು ಪ್ರೋತ್ಸಾಹಿಸಿದಂತಾಗುತ್ತದೆ.

## ಅಹಿಂದ ಸಂಘಟನೆಯಿಂದ ಶಿಕಾರಿಪುರ ಬಂದ್

• ಉದಯವಾಹಿನಿ, ಶಿಕಾರಿಪುರ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಅಧಿಕಾರದಿಂದ ಕೆಳಗಿಳಿಸಲು ಬಿಜೆಪಿ ಹಾಗೂ ಜೆಡಿಎಸ್ ನಾಯಕರು ಕುತಂತ್ರ ನಡೆಸುತ್ತಿದ್ದಾರೆ ಎಂದು ಆರೋಪಿಸಿ ಗುರುವಾರ ತಾಲ್ಲೂಕು ಅಹಿಂದ ಸಂಘಟನೆ ಕರೆ ನೀಡಿದ್ದ ಬಂದ್‌ಗೆ ಉತ್ತಮ ಪ್ರತಿಕ್ರಿಯೆ ದೊರೆತಿದೆ. ಪಟ್ಟಣದಲ್ಲಿ, ಅಂಗಡಿ ಮುಂಗಟ್ಟು ಬಂದ್ ಆಗಿವೆ.ಅಹಿಂದ ಸಂಘಟನೆಯ ಕರೆಗೆ ಸಾರ್ವಜನಿಕರು ಸ್ವಯಂ ಪ್ರೇರಿತವಾಗಿ ಸ್ಪಂದಿಸಿದ್ದಾರೆ.

## ಕಲಬುರಗಿಯಲ್ಲಿ ಗುಂಡಿನ ಸದ್ದು : ಎಣ್ಣೆ ಪಾರ್ಟಿ ಮಾಡುತ್ತಿದ್ದ ವೇಳೆ ಯುವಕನ ಮೇಲೆ ಫೈರಿಂಗ್

• ಉದಯವಾಹಿನಿ, ಕಲಬುರಗಿ

ಕಲಬುರಗಿಯಲ್ಲಿ ಗುಂಡಿನ ಸದ್ದು ಕೇಳಿಬಂದಿದ್ದು, ಗೆಳೆಯರ ಜೊತೆಗೆ ಎಣ್ಣೆ ಪಾರ್ಟಿ ಮಾಡಿಕೊಂಡು ಕುಳಿತಿದ್ದ ಯುವಕನ ಮೇಲೆ ಗುಂಡಿನ ದಾಳಿ ನಡೆದಿರುವ ಘಟನೆ ನಡೆದಿದೆ. ಕಲಬುರಗಿ ಜಿಲ್ಲೆ ಆಳಂದ ತಾಲ್ಲೂಕಿನ ಕಡಗಂಚಿನಲ್ಲಿ ಯುವಕನ ಮೇಲೆ ಗುಂಡಿನ ದಾಳಿ ನಡೆಸಲಾಗಿದ್ದು, ಯುವಕನನ್ನು ಶ್ರೀಕಾಂತ್ ಪೂಜಾರಿ ಎಂದು ಗುರುತಿಸಲಾಗಿದ್ದು, ಶ್ರೀಕಾಂತ್ ಮೇಲೆ ಫೈರಿಂಗ್ ಪರಿಣಾಮ ಎಡಕೈಗೆ ಗಂಭೀರ ಗಾಯಗಳಾಗಿದೆ. ಯುವಕನ ಮೇಲಿನ ಗುಂಡಿನ ದಾಳಿ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಕಾಂತಪ್ಪ, ಮಾಳಪ್ಪ ಎಂಬುವವರನ್ನು ಬಂಧಿಸಿದ್ದಾರೆ.. ನರೋಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ಮತ್ತೆ ಕುಸಿದ ಮಳಖೇಡ ಕೋಟೆಯ ಗೋಡೆ

• ಉದಯವಾಹಿನಿ, ಸೇಡಂ

ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ತಾಲ್ಲೂಕಿನ ಮಳಖೇಡ ಕೋಟೆಯ ಗೋಡೆ ಮತ್ತೆ ಗುರುವಾರ ಉರುಳಿ ಬಿದ್ದಿದೆ. ಸೇಡಂ ಪಟ್ಟಣ ಸೇರಿದಂತೆ ತಾಲ್ಲೂಕಿನ ವಿವಿಧೆಡೆ ಜೋರು ಮಳೆಯಾಗಿದೆ. ಸತತ ಮಳೆಗೆ ಐತಿಹಾಸಿಕ ಮಳಖೇಡ ಕೋಟೆಯ ಗೋಡೆ ತೇವಗೊಂಡಿದೆ.

ಗುರುವಾರ ಬೆಳಿಗ್ಗೆ ಇದ್ದಕ್ಕಿದ್ದಂತೆ ದಿಢೀರ್ ಕೋಟೆಯ ಗೋಡೆ ನೆಲಕ್ಕುರಳಿದೆ. ಸುತ್ತಲಿದ್ದ ಸ್ಥಳೀಯ ನಿವಾಸಿಗಳು ಆತಂಕಗೊಂಡಿದ್ದಾರೆ. ಕಳೆದ ತಿಂಗಳ ಆಗಸ್ಟ್ 31ರಂದು ಸಹ ಸತತ ಮಳೆಗೆ ಕೋಟೆಯ ಗೋಡೆ ಉರುಳಿ ಬಿದ್ದಿತ್ತು. ಆಗ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ ಪಾಟೀಲ, ಜಿಲ್ಲಾಧಿಕಾರಿ ಫೌಜಿಯಾ ತರನ್ನುಮ್, ಉಪವಿಭಾಗ ಅಧಿಕಾರಿ ಪ್ರಭುರೆಡ್ಡಿ, ತಹಶೀಲ್ದಾರ್ ಶ್ರೀಯಾಂಕಾ ಧನಶ್ರೀ ಭೇಟಿ ನೀಡಿದ್ದರು. ಪುರಾತತ್ವ ಇಲಾಖೆಯ ಅಧಿಕಾರಿಗಳ ಗಮನಕ್ಕೆ ತರುವುದಾಗಿ ಹೇಳಿದ್ದರು. ಕಳೆದೆರಡು ದಿನಗಳಿಂದ ಸುರಿದ ಮಳೆಗೆ ತಿಂಗಳಲ್ಲಿ ಎರಡನೇ ಬಾರಿ ಕೋಟೆಯ ಗೋಡೆ ಉರುಳಿ ಬಿದ್ದಿದೆ.

## ಐಟಿ ಅಧಿಕಾರಿಗಳಿಂದ ದರ್ಶನ್ ವಿಚಾರಣೆ

• ಉದಯವಾಹಿನಿ, ಬಳ್ಳಾರಿ

ಕೊಲೆ ಪ್ರಕರಣದ ಆರೋಪದ ಮೇಲೆ ಸದ್ಯ ಬಳ್ಳಾರಿ ಜೈಲಿನಲ್ಲಿರುವ ಪ್ರಮುಖ ಆರೋಪಿ ನಟ ದರ್ಶನ್‌ನನ್ನು ಆದಾಯ ತೆರಿಗೆ ಅಧಿಕಾರಿಗಳು ವಿಚಾರಣೆ ನಡೆಸಿದ್ದಾರೆ ಅಂತ ತಿಳಿದು ಬಂದಿದೆ. ಇಂದಿನಿಂದ ಎರಡು ದಿನಗಳ ಕಾಲ ಬಳ್ಳಾರಿ ಜೈಲಿನಲ್ಲಿರುವ ಸಮಲೋಚಕರ ಕೊಠಡಿಯಲ್ಲಿ ಆದಾಯ ತೆರಿಗೆ ಇಲಾಖೆ ಅಧಿಕಾರಿಗಳು ದರ್ಶನ್ ಬಳಿ ರೇಣುಕಸ್ವಾಮಿ ಕೊಲೆಯಾದ ಬಳಿಕ ನಡೆದ ಹಣದ ವ್ಯವಹಾರದ ಬಗ್ಗೆ ಮಾಹಿತಿಯನ್ನು ಪಡೆದುಕೊಳ್ಳಲಾಗಿದ್ದಾರೆ ಅಂತ ತಿಳಿದು ಬಂದಿದೆ. ತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದಲ್ಲಿ ಸಾಕ್ಷ್ಯ ನಾಶ ಮಾಡಲು ಬಳಕೆ ಮಾಡಲಾಗಿದೆ ಎನ್ನಲಾದ 84 ಲಕ್ಷ ಹಣ ಮೂಲ ಪತ್ತೆ ಹಚ್ಚಲು ಆದಾಯ ತೆರಿಗೆ (ಐಟಿ) ಇಲಾಖೆ ಮುಂದಾಗಿದೆ. ಪವಿತ್ರಾ ಗೌಡ ಅವರ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಅವಹೇಳನಕಾರಿ ಹೇಳಿಕೆ ನೀಡಿ ನಟ ದರ್ಶನ್ ಅವರ ಅಭಿಮಾನಿ ರೇಣುಕಾಸ್ವಾಮಿ ಅವರನ್ನು ಹತ್ಯೆ ಮಾಡಲಾಗಿದೆ. ಕೊಲೆ ಪ್ರಕರಣಕ್ಕೆ ಸಂಬಂಧಿಸಿದಂತೆ ದರ್ಶನ್ ಮತ್ತು ಪವಿತ್ರಾ ಗೌಡ ಸೇರಿದಂತೆ ಹಲವರನ್ನು ಬಂಧಿಸಲಾಗಿತ್ತು.

# ವಿವಿಧ ಬೇಡಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿ ಮುಷ್ಕರ

## ಇಲಾಖೆಯಿಂದ ಅಭಿವೃದ್ಧಿಪಡಿಸಿರುವ ಮೊಬೈಲ್, ವೆಬ್ ತಂತ್ರಾಂಶಗಳ ಮೂಲಕ ಕರ್ತವ್ಯ ನಿರ್ವಹಿಸಲು ಒತ್ತಡ

• ಉದಯವಾಹಿನಿ ಮುದ್ದೇಬಿಹಾಳ


ಉದಯವಾಹಿನಿ ಚಿತ್ರ

ಕರ್ನಾಟಕ ರಾಜ್ಯ, ಗ್ರಾಮ ಆಡಳಿತ ಅಧಿಕಾರಿಗಳ ಮುದ್ದೇಬಿಹಾಳ ತಾಲ್ಲೂಕು ಘಟಕದಿಂದ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ತಾಲ್ಲೂಕು ಆಡಳಿತ ಸೌಧ ಮುಂದೆ ಕೈಗೆ ಕಪ್ಪು ಪಟ್ಟಿ ಧರಿಸಿ ಅನಿರ್ದಿಷ್ಟಾವಧಿ ಮುಷ್ಕರ ಮಾಡಲಾಗುತ್ತಿದೆ

ಈ ವೇಳೆ ಮಾತನಾಡಿದ ಗ್ರಾಮ ಆಡಳಿತ ಅಧಿಕಾರಿಗಳ ಜಿಲ್ಲಾಧ್ಯಕ್ಷ ಗಂಗಾಧರ ಜೋಲಗುಡ್ಡ ಇಲಾಖೆಯಿಂದ ಅಭಿವೃದ್ಧಿಪಡಿಸಿರುವ ಮೊಬೈಲ್, ವೆಬ್ ತಂತ್ರಾಂಶಗಳ ಮೂಲಕ ಕರ್ತವ್ಯ ನಿರ್ವಹಿಸಲು ಒತ್ತಡ ಹೇರಲಾಗುತ್ತಿದೆ. ಈ ತಂತ್ರಾಂಶಗಳ ನಿರ್ವಹಣೆಗೆ ಅವಶ್ಯಕವಾಗಿರುವ ಮೊಬೈಲ್, ಲ್ಯಾಪ್‌ಟಾಪ್, ಅದಕ್ಕೆ ಅವಶ್ಯವಿರುವ ಇಂಟರ್‌ನೆಟ್ ಹಾಗೂ ಸ್ಕ್ಯಾನರ್‌ಗಳನ್ನು ಒದಗಿಸದೇ ಕರ್ತವ್ಯ ನಿರ್ವಹಿಸುವಂತೆ ಒತ್ತಡ ಹೇರುತ್ತಿರುವುದರಿಂದ ಗ್ರಾಮ ಆಡಳಿತ ಅಧಿಕಾರಿಗಳು ಮಾನಸಿಕ ಹಿಂಸೆ ಅನುಭವಿಸುತ್ತಿದ್ದಾರೆ, ಪದೋನ್ನತಿಯಲ್ಲಿ ಸಾಕಷ್ಟು ಅನ್ಯಾಯವಾಗುತ್ತಿದೆ.

ಅನೇಕರು ನಿವೃತ್ತಿ ಅಂಚಿನಲ್ಲಿದ್ದಾರೆ. ಆದರೆ, ಪದೋನ್ನತಿ ಕೊಟ್ಟಿಲ್ಲ. ಇದನ್ನು ಸರಿಪಡಿಸಬೇಕು. ಪತಿ-ಪತ್ನಿ ಪ್ರಕರಣಗಳಲ್ಲಿ ವರ್ಗಾವಣೆ ಪ್ರಕ್ರಿಯೆ ತ್ವರಿತ ಗತಿಯಲ್ಲಿ ಪೂರ್ಣಗೊಳಿಸಬೇಕು.

ಕೆಲಸದ ಅವಧಿ ನಂತರ ವರ್ಚುವಲ್ ಸಭೆಗಳನ್ನು ನಡೆಸದಂತೆ ಆದೇಶ ಹೊರಡಿಸಬೇಕೆಂದು ಆಗ್ರಹಿಸಿದರು.

ಈ ವೇಳೆ ಸಂಘ ರಿಯಾಜ್ ನಾಯ್ಕೋಡಿ, ರಫಿಕ್ ಮುಲ್ಲಾ,ಕಂದಾಯ ನಿರೀಕ್ಷಿಕ ವೆಂಕಟೇಶ ಅಂಬಿಗೇರ , ಶ್ರೀನಿವಾಸ ಹುನಗುಂದ ಮಾತನಾಡಿ ಆಧುನಿಕ ತಂತ್ರಾಂಶಕ್ಕೆ ಸಂಬಂಧಿಸಿದಂತೆ ಅವಶ್ಯ ಸೌಲಭ್ಯವನ್ನು ಕಲ್ಪಿಸುವವರೆಗೆ ಹಾಗೂ ಆಧಾರ್ ಸೀಡ್, ಲ್ಯಾಂಡ್ ಬೀಟ್, ಬಗರ್‌ಹುಕುಂ, ಹಕ್ಕು ಪತ್ರ, ನಮೂನೆ 1-5 ವೆಬ್ ಅಪ್ಲಿಕೇಷನ್ ಮತ್ತು ಪೌತಿ ಆಂದೋಲನ ಆ್ಯಪ್ ತಂತ್ರಾಂಶಗಳ ಕೆಲಸವನ್ನು ಸ್ಥಗಿತಗೊಳಿಸಲಾಗಿದೆ. ಪದೋನ್ನತಿ, ವರ್ಗಾವಣೆ, ನೌಕರರ ಅಮಾನತ್ತು ಸೇರಿ ಹಲವಾರು ಬೇಡಿಕೆಗಳನ್ನು ಸರ್ಕಾರದ ಮುಂದಿಟ್ಟಿದ್ದು, ಅವುಗಳಗೆ ಸರ್ಕಾರ ಸ್ಪಂದಸದೇ ಇದ್ದಲ್ಲಿ ಸೆ. 26ರಿಂದ ಎಲ್ಲ ಬಗೆಯ ಮೊಬೈಲ್ ಆ್ಯಪ್ ಹಾಗೂ ನೆಟ್ ಅಪ್ಲಿಕೇಶನ್ ಸ್ಥಗಿತಗೊಳಿಸಿ ರಾಜ್ಯವ್ಯಾಪಿ ಮುಷ್ಕರ ನಡೆಸಲಾಗುವುದು' ಎಂದರು.

> 21 ಮೊಬೈಲ್ ಆ್ಯಪ್, ವೆಬ್ ಅಪ್ಲಿಕೇಶನ್‌ಗಳ ಮೂಲಕ ಹೆಚ್ಚಿನ ಸೌಕರ್ಯ ಕಲ್ಪಿಸಲಾಗುತ್ತಿದೆ. ಇದರಿಂದ ಸಿಬ್ಬಂದಿ ಮೇಲೆ ಹೆಚ್ಚಿನ ಕಾರ್ಯಭಾರದ ಒತ್ತಡ ಉಂಟಾಗಿ 50 ಜನರು ಮೃತರಾಗಿದ್ದಾರೆ
> -ಗಂಗಾಧರ ಜೋಲಗುಡ್ಡ ,ಜಿಲ್ಲಾಧ್ಯಕ್ಷರು

**ಸಿಬ್ಬಂದಿ ಮೇಲೆ ಹೆಚ್ಚಿನ ಕಾರ್ಯಭಾರದ ಒತ್ತಡ**

ಡಿಎಸ್‌ಎಸ್ ಜಿಲ್ಲಾ ಸಂಚಾಲಕ ಹರೀಶ ನಾಟಿಕಾರ ,ನೌಕರ ಸಂಘದ ಅಧ್ಯಕ್ಷ ಎಸ್ ಆರ್ ಕಟ್ಟಿಮನಿ ಮುಷ್ಕರದಲ್ಲಿ ಪಾಲ್ಗೊಂಡು ಗ್ರಾಮಾಡಳಿತ ಅಧಿಕಾರಿಗಳ ಹೋರಾಟಕ್ಕೆ ಬೆಂಬಲ ವ್ಯಕ್ತಪಡಿಸಿದರು .

ಸೆ 26 ರಿಂದ ಎಲ್ಲಾ ಬಗೆಯ ಮೊಬೈಲ್ ಅಪ್ಲಿಕೇಶನ್, ಲೇಖನಿ ಸ್ಥಗಿತಗೂಳಿಸುವ ಮೂಲಕ ರಾಜ್ಯಾದ್ಯಂತ ಮುಷ್ಕರ ಮಾಡಲಾಗುತ್ತಿದೆ ಇಂದು ಜಿಲ್ಲಾ ಮಟ್ಟದಲ್ಲಿ ಹೋರಾಟ ನಡೆಯಲಿದೆ ಅದಕ್ಕೂ ಸ್ಪಂದನೆ ಸಿಗದೆ ಇದ್ದರೆ ಬೆಂಗಳೂರು ಫ್ರೀಡಂ ಪಾರ್ಕಿನಲ್ಲಿ ಹೋರಾಟ ಮಾಡಲಾಗುತ್ತದೆ ಎಂದು ತಿಳಿಸಿದರು.

ಮುಷ್ಕರದಲ್ಲಿ ತಾಲೂಕ ಅಧ್ಯಕ್ಷ ಮನೋಜ ರಾಠೋಡ, ಉಪಾಧ್ಯಕ್ಷ ಆರ್ ಎಸ್ ಹೊಸೂರ, ಸುನಿಲ್ ಚವ್ಹಾಣ, ಬಾಬಾನಗರ, ದೇವಾರಾಜ ಗುರಿಕಾರ, ಉಮಾಪತಿ ರಾಠೋಡ ,ಅನಿಲ್ ಚವ್ಹಾಣ, ಸಚಿನ್ ಗೌಡರ, ಕುಮಾರ ಆಲಗೂರ, ಹರ್ಷಿತ, ಜಿಲ್ಲಾಉಪಾಧ್ಯಕ್ಷ ಅನುಪಮಾ ಪೂಜಾರಿ, ಆರತಿ ಬಳವಾಟ, ಗಂಗಮ್ಮ ಕುಂಬಾರ , ಜೈನಾಬಿ ಕಮತಗಿ, ಕಾವ್ಯ ಮುಲ್ಲಾಳ ಸೇರಿದಂತೆ ಗ್ರಾಮಾಡಳಿತ ಅಧಿಕಾರಿಗಳು,ಗ್ರಾಮ ಸಹಾಯಕರು ಭಾಗವಹಿಸಿದ್ದರು ಮುಷ್ಟರಕ್ಕೆ ದಲಿತಪರ ಪ್ರಗತಿಪರ ಸಂಘಟನೆಗಳು ಬೆಂಬಲ ವ್ಯಕ್ತಪಡಿಸಿದ್ದಾರೆ.

## ಜಿಲ್ಲಾ ಆಯುಷ್ ಇಲಾಖೆಯಿಂದ ಸ್ವಚ್ಚತೆ ಮತ್ತು ವೃಕ್ಷಾರೋಹಣ ಕಾರ್ಯಕ್ರಮ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಚಿತ್ರದುರ್ಗ

> ಸ್ವಚ್ಛತಾ ಹಿ ಸೇವಾ ಅಭಿಯಾನದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಚಿತ್ರದುರ್ಗ ಜಿಲ್ಲಾ ಆಯುಷ್ ಇಲಾಖೆ ಬದ್ಧವಾಗಿದ್ದು ಇದರ ಅಂಗವಾಗಿ ಆಯುಷ್ ಇಲಾಖೆಯ ಜೆ ಎನ್ ಕೋಟೆ , ಅಳಗವಾಡಿ ಜಿಲ್ಲಾ ಕೇಂದ್ರ ಸೇರಿದಂತೆ ಹಲವಾರು ಆಯುಷ್ ಚಿಕಿತ್ಸಾ ಕೇಂದ್ರಗಳಲ್ಲಿ ಸ್ವಚ್ಛತೆ ಮತ್ತು ಆಯುರ್ವೇದದ ಸಸಿಗಳನ್ನು ನೆಡುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ಇದಕ್ಕೆ ಸಾರ್ವಜನಿಕರ ಸಕ್ರಿಯ ಬೆಂಬಲ ಅನಿವಾರ್ಯ ಸ್ವಚ್ಛತೆ ಆಯುರ್ವೇದ ಚಿಕಿತ್ಸಾ ಪದ್ಧತಿಯ ಒಂದು ಭಾಗವಾಗಿದೆ ರೋಗಮುಕ್ತ ಜೀವನಕ್ಕಾಗಿ ದೇಹ ಶುದ್ಧಿ ಮನಸ್ಸಿನ ಶುದ್ಧಿ ಜೊತೆಗೆ ನಮ್ಮ ಸುತ್ತಲಿನ ಪರಿಸರ ಸ್ವಚ್ಛವಾಗಿಟ್ಟುಕೊಳ್ಳಬೇಕು
> -ಡಾ|| ಶಿವಕುಮಾರ್, ಆಯುಷ್ ಇಲಾಖೆಯ ಹಿರಿಯ ವೈದ್ಯಾಧಿಕಾರಿ

ದಿನಾಂಕ 25/09/2024 ರಂದು ಸ್ವಚ್ಛತಾ ಹೀ ಸೇವಾ ಅಭಿಯಾನದ ಅಡಿಯಲ್ಲಿ ಜಿಲ್ಲಾ ಆಯುಷ್ ಇಲಾಖೆ ಚಿತ್ರದುರ್ಗ, ಚಿನ್ಮಯ ಮಯೂರ ಯೋಗ ಕ್ರೀಡಾ ಸಾಂಸ್ಕೃತಿಕ ಸಂಸ್ಥೆ. ಮಲ್ಲಾಪುರ, ಭಾರತೀಯ ಯೋಗ ಶಿಕ್ಷಣ ಸಂಸ್ಥೆ, ಚಿತ್ರದುರ್ಗ ಹಾಗು ಸಾರ್ವಜನಿಕರ ಸಹಯೋಗದೊಂದಿಗೆ ಚಿತ್ರದುರ್ಗದ ಕೆಳಗೋಟೆಯಲ್ಲಿರುವ ಚನ್ನಕೇಶವ ದೇವಸ್ಥಾನದ ಆವರಣವನ್ನು ಸ್ವಚ್ಛಗೊಳಿಸಲಾಯಿತು.

ಕಾರ್ಯಕ್ರಮವನ್ನುದ್ದೇಶಿಸಿ ಮಾತನಾಡಿದ ಜಿಲ್ಲಾ ಆಯುಷ್ ಅಧಿಕಾರಿಗಳಾದ ಡಾ.ಚಂದ್ರಕಾಂತ ಎಸ್ ನಾಗಸಮುದ್ರ ಅವರು ಶರೀರ ಸ್ವಚ್ಛವಾದರೆ ದೈಹಿಕ ಆರೋಗ್ಯ, ಮನಸ್ಸು ಸ್ವಚ್ಛವಾಗಿದ್ದರೆ ಮಾನಸಿಕ ಆರೋಗ್ಯ ಹಾಗು ಪರಿಸರ ಸ್ವಚ್ಛವಾದರೆ ಸಮಾಜದ ಆರೋಗ್ಯ ಆದಕಾರಣ ಈ ಅಭಿಯಾನದ ಅಡಿಯಲ್ಲಿ ಧಾರ್ಮಿಕ ಸ್ಥಳವಾದ ಶ್ರೀ ಚನ್ನಕೇಶವ ದೇವಸ್ಥಾನದ ಆವರಣ ಸ್ವಚ್ಛ ಮಾಡಲಾಗುತ್ತಿದೆ. ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಆಯುಷ್ ಕಛೇರಿ ಸಿಬ್ಬಂದಿ,ಜಿಲ್ಲಾಸ್ಪತ್ರೆ ಆಯುಷ್ ವಿಭಾಗದ ಸಿಬ್ಬಂದಿ ಹಾಗು ಆಯುಷ್ ವೈದ್ಯಾಧಿಕಾರಿಗಳು, ಯೋಗ ಸಂಸ್ಥೆಗಳ ಪದಾಧಿಕಾರಿಗಳಾದ ಶ್ರೀ ರವಿ ಅಂಬೇಕರ್, ಶ್ರೀ ಮುರಳಿ, ಶ್ರೀಮತಿ ಸುನಿತಾ, ಶ್ರೀಮತಿ ಮಂಜುಳ, ಶ್ರೀಮತಿ ವಸಂತಲಕ್ಷ್ಮಿ, ಮಂಜುನಾಥ್ ಹಾಗು ಸದಸ್ಯರು ಮತ್ತು ಸಾರ್ವಜನಿಕರು ಸ್ವಚ್ಛತಾ ಕಾರ್ಯಕ್ಕೆ ಕೈಜೋಡಿಸಿದರು.

ಸ್ಥಳಿಯ ನಗರಸಭಾ ಸದಸ್ಯರಾದ ಮಂಜುನಾಥ್ ಹಾಗು ಮುಖಂಡರಾದ ಪ್ರಕಾಶ್ ರವರು ಕಾರ್ಯಕ್ರಮಕ್ಕೆ ನೀಡಿದರು.

## ಸಿದ್ದರಾಮಯ್ಯ ರಾಜೀನಾಮೆ ಕೊಡೋ ಪ್ರಶ್ನೆಯೇ ಇಲ್ಲ

• ಉದಯವಾಹಿನಿ, ಕೆಂಭಾವಿ



ಕೋರ್ಟ್ ತೀರ್ಪು ತನಿಖೆಯನ್ನು ನಡೆಸಿ ಹೇಳಿದ್ದಾರೆ ಅಷ್ಟೇ ಸಿದ್ದರಾಮಯ್ಯನವರು ಮುಡಾ ವಿಚಾರವಾಗಿ ಸಲ್ಲಿಸಿದ ಅರ್ಜಿಯನ್ನು ತಿರಸ್ಕರಿಸಿ ವಿಚಾರಣೆ ನಡೆಸುವಂತೆ ಸ್ಪಷ್ಟನೆ ನೀಡಿದೆ ಅಷ್ಟೇ ತನಿಖೆ ನಡೆಯಲಿ ಆ ತನಿಖೆಯಲ್ಲಿ ಸ್ಪಷ್ಟ ನಿರ್ಧಾರಗಳು ಬರುವವರೆಗೂ ವಿರೋಧ ಪಕ್ಷದವರಿಗೆ ರಾಜೀನಾಮೆ ಕೇಳುವ ನೈತಿಕತೆ ಇಲ್ಲ ಎಂದು ಶಿವರಾಜ ಬೂದೂರ ಈ ಕುರಿತು ಪ್ರತಿಕ್ರಿಯೆ ನೀಡಿರುವ ಅವರು ಕೇಂದ್ರ ಹಾಗೂ ರಾಜ್ಯ ಬಿಜೆಪಿ ನಾಯಕರು ರಾಜ್ಯಪಾಲರ ಹುದ್ದೆಯನ್ನು ಸಂಪೂರ್ಣವಾಗಿ ದುರು ಪಯೋಗ ಪಡಿಸಿಕೊಳ್ಳುತ್ತಿರುವುದು ಸ್ಪಷ್ಟವಾಗಿ ಎದ್ದು ಕಾಣುತ್ತಿದೆ.

ಇದನ್ನು ರಾಜ್ಯದ ಜನತೆ ಗಮನಿಸುತ್ತಿದೆ ಈ ಮೊದಲು ಬಿಜೆಪಿ ಜೆಡಿಎಸ್ ಮುಖಂಡರ ವಿರುದ್ಧ ಭ್ರಷ್ಟಾಚಾರ ಕುರಿತು ತನಿಖೆಗೆ ಆದೇಶವಿದ್ದರೂ ಅದನ್ನು ರಾಜ್ಯಪಾಲರು ಬದಿಗಿಟ್ಟು ಮುಖ್ಯ ಮಂತ್ರಿ ಸಿದ್ದರಾಮಯ್ಯನವರ ಪ್ರಕರಣವನ್ನು ಬೇಕು ಅಂತಲೇ ಕೈಗೆತ್ತಿಕೊಂಡು ದ್ವೇಷದ ರಾಜಕಾರಣ ಮಾಡಲು ಹೊರಟಿದ್ದಾರೆ ಕರ್ನಾಟಕದ ಜನತೆ ಕಾಂಗ್ರೆಸ್ ಪಕ್ಷಕ್ಕೆ ಸಂಪೂರ್ಣ ಬಹುಮತ ನೀಡಿದ್ದಾರೆ ಮುಖ್ಯಮಂತ್ರಿಗಳು ಭ್ರಷ್ಟಾಚಾರ ರಹಿತ ಪಾರದರ್ಶಕ ಆಡಳಿತ ನಡೆಸುತ್ತಿದ್ದಾರೆ .

ಬಡವರ ಪರ ಯೋಜನೆಗಳನ್ನು ಜಾರಿಗೆ ತರುವ ಮೂಲಕ ಬಡವರ ಪಾಲಿನ ಆಶಾಕಿರಣವಾಗಿದ್ದಾರೆ ಆ ಕಾರಣ ಸಿದ್ದರಾಮಯ್ಯನವರು ರಾಜೀನಾಮೆ ಕೊಡುವ ಪ್ರಶ್ನೆಯೇ ಇಲ್ಲ ಎಂದು ನಗನೂರ ಗ್ರಾಮದ ಕಾಂಗ್ರೆಸ್ ಪಕ್ಷದ ಮುಖಂಡ ಶಿವರಾಜ ಬೂದೂರ ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಚೂರಿ ಇರಿದು ಪರಾರಿಯಾಗಲು ಯತ್ನಿಸಿದವನಿಗೆ ಪೊಲೀಸರ ಗುಂಡೇಟು

• ಉದಯವಾಹಿನಿ, ಹುಬ್ಬಳ್ಳಿ


ಗುಂಡೇಟಿನಿಂದ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ

ತಾನು ಪ್ರೀತಿಸುತ್ತಿದ್ದ ಯುವತಿ ತಾಯಿಗೆ ಚಾಕುವಿನಿಂದ ಇರಿದಿದ್ದ ಪ್ರಕರಣದಲ್ಲಿ ಬಂಧನಕ್ಕೊಳಗಾದ ಆರೋಪಿಯನ್ನು ಸ್ಥಳ ಮಹಜರಿಗೆ ಕರೆದೊಯ್ಯುತ್ತಿದ್ದಾಗ ಸಿಬ್ಬಂದಿ ಮೇಲೆಯೇ ಹಲ್ಲೆ ನಡೆಸಿ ಪರಾರಿಯಾಗಲು ಯತ್ನಿಸಿದ ಆರೋಪಿ ಪೊಲೀಸರ ಗುಂಡೇಟಿನಿಂದ ಗಾಯಗೊಂಡು ಸಿಕ್ಕಿ ಬಿದಿದ್ದಾನೆ. ಆರೋಪಿ ಮಹೇಶ ಮೇಟಿ ಗುಂಡೇಟಿನಿಂದ ಗಾಯಗೊಂಡು ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾನೆ.

ಲೋಹಿಯಾ ನಗರದ ನಿವಾಸಿ ನೀಲಾ ಅವರಿಗೆ ನಾಲ್ಕು ಮಂದಿ ಮಕ್ಕಳಿದ್ದು, ಒಬ್ಬ ಮಗಳನ್ನು ಆರೋಪಿ ಪ್ರೀತಿಸುತ್ತಿದ್ದನು.

ಆದರೆ ಯುವತಿ ಹಾಗೂ ಆಕೆಯ ತಾಯಿಗೂ ಇಷ್ಟವಿರಲಿಲ್ಲ. ಆದರೂ ಆರೋಪಿ ಮಹೇಶ ಇವರ ಮನೆಗೆ ಹೋಗಿ ತಮ ಮಗಳನ್ನು ಮದುವೆ ಮಾಡಿಕೊಡುವಂತೆ ನೀಲಾ ಅವರನ್ನು ಪೀಡಿಸಿದ್ದಾನೆ. ಮಹೇಶನಿಗೆ ಬುದ್ದಿವಾದ ಹೇಳಿದ್ದಕ್ಕೆ ಕೋಪಗೊಂಡು ಯುವತಿಯ ತಾಯಿ ನೀಲಾ ಅವರಿಗೆ ಚಾಕುವಿನಿಂದ ಇರಿದು ಪರಾರಿಯಾಗಿದ್ದನು. ಚಾಕು ಇರಿತದಿಂದ ಗಂಭೀರ ಗಾಯಗೊಂಡಿರುವ ನೀಲಾ ಅವರನ್ನು ಕಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಚೇತರಿಸಿಕೊಳ್ಳುತ್ತಿದ್ದಾರೆ.

ಸುದ್ದಿ ತಿಳಿದು ಘಟನಾ ಸ್ಥಳಕ್ಕೆ ಹಿರಿಯ ಪೊಲೀಸರು ಭೇಟಿ ನೀಡಿ ಮಾಹಿತಿ ಪಡೆದಿದಿದ್ದಾರೆ. ಪ್ರಕರಣ ದಾಖಲಿಸಿಕೊಂಡ ಪೊಲೀಸರು ಘಟನೆ ಕುರಿತು ಮಾಹಿತಿ ಪಡೆದು ಆರೋಪಿಯ ಬಂಧನಕ್ಕೆ ಬಲೆ ಬೀಸಿ ನಿನ್ನೆ ಸಂಜೆ ಕೊನೆಗೂ ಬಂಧಿಸುವಲ್ಲಿ ಯಶಸ್ವಿಯಾಗಿದ್ದಾರೆ.

## ಸಾರ್ವಜನಿಕರ ಅಹವಾಲು ಸ್ವೀಕರಿಸಿದ ಲೋಕಾಯುಕ್ತ ಎಸ್ಪಿ

• ಉದಯವಾಹಿನಿ, ಸಿಂಧನೂರು


ಉದಯವಾಹಿನಿ ಚಿತ್ರ

ನಗರದ ಪ್ರಮುಖ ರಸ್ತೆಗಳ ಬದಿಯಲ್ಲಿ ಅನಧಿಕೃತ ಅಂಗಡಿಗಳ ಹಾಕಿದ್ದು ತಿಂಗಳಿಗೆ ಬಾಡಿಗೆ ರೂಪದಲ್ಲಿ ಸುಮಾರು ಒಂದು ವರಿ ಲಕ್ಷ ರುಪಾಯಿ ತೆಗೆದುಕೊಳ್ಳುತ್ತಾರೆ. ಇದರ ಬಗ್ಗೆ ಇಲಾಖೆ ಅಧಿಕಾರಿಗಳು ಗಮನ ಹರಿಸಿದೆ ಇರುವುದು ಅನಧಿಕೃತ ಅಂಗಡಿಗಳ ಹಾಕುವುದಕ್ಕೆ ಮಾರಕವಾಗಿದೆ. ನ್ಯಾಯಾಲಯ ತೆರವುಗೊಳಿಸುವುದಕ್ಕೆ ಆದೇಶ ಹೊರಡಿಸಿದ್ದರು ಸಹ ಕ್ಯಾರೇ ಎನ್ನುತ್ತಿಲ್ಲ. ಅದರಿಂದ ಸೂಕ್ತ ಕಾನೂನು ಕ್ರಮಕ್ಕೈಗೊಳ್ಳಬೇಕು ಎಂದು ರಾಜ್ಯ ಲೋಕಾಯುಕ್ತ ಎಸ್ಪಿ ಎಂ.ಎನ್ ಶಶಿಧರ್ ಹೇಳಿದರು

ನಗರದ ತಾಲ್ಲೂಕು ಕಛೇರಿಯಲ್ಲಿ ನಡೆದ ಸಾರ್ವಜನಿಕ ಅಹವಾಲು ಸ್ವೀಕಾರ ಮಾಡಿ ಮಾತನಾಡಿದ ಅವರು ಅಧಿಕಾರಿಗಳು ಸರ್ಕಾರ ಜಾಗ ಉಳಿಸುವ ನಿಟ್ಟಿನಲ್ಲಿ ಕೆಲಸ ಮಾಡಬೇಕು ಸೂಚಿಸಿದರು. ಇಲ್ಲಿ ಒಂದು ವಿಷಯ ಏನೆಂದರೆ ರಸ್ತೆ ಬದಿಯಲ್ಲಿ ಅಧಿಕೃತ ವ್ಯಾಪಾರ ಅಂಗಡಿಗಳಿಗೆ. ತೆರವು ಕಾರ್ಯಾಚರಣೆ ನಡೆಸಿ ಅಧಿಕಾರಿಗಳು ಮುಂದಾಗುತ್ತಿಲ್ಲ. ಯಾಕೆ ಎಂದು ಲೋಕಾಯುಕ್ತ ಎಸ್ಪಿ ಶಶಿಧರ್ ಅಧಿಕಾರಿಗಳನ್ನು ಕೇಳಿದರೆ. ಇದಕ್ಕೆ ಹಾರೈಕೆ ಉತ್ತರ ಕೊಡುತ್ತಾರೆ. ಯಾವುದೇ ಸಂಬಂಧವಿಲ್ಲ ಅಂಗಡಿಗಳಿಗೆ ಜೆಸ್ಕಾಂ ಅಧಿಕಾರಿಗಳು ವಿದ್ಯುತ್ ಸಂಪರ್ಕ ಕಲ್ಪಿಸಿ ಕೊಟ್ಟಿರುವುದು ಇದೆ ಎಂತಹಾ ವಿಪರ್ಯಾಸ ಸಂಗತಿಯಾಗಿದೆ. ಮತ್ತು ಇದಕ್ಕೆ ಅನಧಿಕೃತ ರಸೀದಿ ಬೆರೆ ಕೆಡು ಎಂದು ಆಕ್ರೋಶವನ್ನು ವ್ಯಕ್ತಪಡಿಸಿದರು.

> ಸ್ತ್ರೀ ಶಕ್ತಿ ಭವನ ಸರಿಯಾದ ಮಾಹಿತಿ ನೀಡಬೇಕು. ನಗರ ಸಭೆ ಹಾಗೂ. ಕಂದಾಯ ಇಲಾಖೆ. ಜೆಸ್ಕಾಂ ವಿಭಾಗ. ನೀರಾವರಿ ಸೇರಿದಂತೆ ವಿವಿಧ ಇಲಾಖೆಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರು ಅರ್ಜಿದಾರರೊಂದಿಗೆ ಸಮಾಲೋಚನೆ ನಡೆಸಿ. ಪರಿಹಾರ ಒದಗಿಸಿ ಕೊಡುವಂತೆ ಲೋಕಾಯುಕ್ತ ಎಸ್ಪಿ ಶಶಿಧರ ತಿಳಿಸಿದರು.
> -ಶಶಿಧರ, ಲೋಕಾಯುಕ್ತ ಎಸ್ಪಿ

ಈ ಸಂದರ್ಭದಲ್ಲಿ ತಹಶೀಲ್ದಾರ್ ಅರುಣ್ ಕುಮಾರ ಎಚ್. ದೇಸಾಯಿ ನಗರ ಸಭೆ ಪೌರಾಯುಕ್ತ ಮಂಜುನಾಥ ಗುಂಡೂರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಚಂದ್ರಶೇಖರ್ ಹಾಗೂ ವಿವಿಧ ಇಲಾಖೆಗಳು ಅಧಿಕಾರಿಗಳು ಸಿಬ್ಬಂದಿ ವರ್ಗ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಮುದ್ದೇಬಿಹಾಳ ಡಿಪೋದಿಂದ ನೂತನ ಬಸ್ ಸಂಚಾರಕ್ಕೆ ಚಾಲನೆ

• ಉದಯವಾಹಿನಿ, ಮುದ್ದೇಬಿಹಾಳ


ಉದಯವಾಹಿನಿ ಚಿತ್ರ

ಮುದ್ದೇಬಿಹಾಳ ಸಾರಿಗೆ ಘಟಕದಿಂದ ನೂತನ ನಾಲ್ಕು ಹೊಸ ಬಸ್ ಮಾರ್ಗಗಳಿಗೆ ಚಾಲನೆಯನ್ನು ಶಾಸಕ ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಸಿ.ಎಸ್ ನಾಡಗೌಡ ಅಪ್ಪಾಜಿ ನೀಡಿದರು

**ನೂತನ ಮಾರ್ಗ:** ಮುದ್ದೇಬಿಹಾಳ ಮೈಸೂರು, ಆಲೂರ ವಿಜಯಪುರ, ಮುದ್ದೇಬಿಹಾಳ ಬೆಳಗಾವಿ, ಮತ್ತು ಮುದ್ದೇಬಿಹಾಳ ಮಿರಜ್‌ಗೆ ಹೊಸ ಮಾರ್ಗ ಬಸ್ ಮತ್ತು ಟಿಕೆಟ್ ಬುಕ್ಕಿಂಗ್ ಕೌಂಟರ್ ಆರಂಭಿಸಲಾಗಿದೆ.

ಈ ವೇಳೆ ಪುರಸಭೆ ಅಧ್ಯಕ್ಷ ಮಹಿಬೂಬ ಗೊಳಸಂಗಿ,ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಗುರು ತಾರನಾಳ, ಕಾಮರಾಜ ಬಿರಾದಾರ,

ವಿಜಯಪುರ ಜಿಲ್ಲಾ ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾರಿ ನಾರಾತಣಪ್ಪ ಕುರುಬರ,ವಿಭಾಗೀಯ ಸಂಚಾರಿ ದೇವಾನಂದ ಬಿರಾದಾರ, ಬಾಪುಗೌಡ ಪಾಟೀಲ್, ಸಂಚಾರಿ ನಿರೀಕ್ಷಕ ಸಂಗಮೇಶ ಹೋಳಿ, ಕಾಂಗ್ರೆಸ್ ಮುಖಂಡರಾದ ಅಮರೇಶ ಗೂಳಿ, ಹುಸೇನ್ ಮುಲ್ಲಾ ಗೋಪಿ ಮಡಿವಾಳರ ಸೇರಿದಂತೆ ಪಟ್ಟಣದ ಗಣ್ಯ ನಾಗರಿಕರು ಭಾಗವಹಿಸಿದ್ದರು.

## ಭೀಕರ ಕಾರು ಅಪಘಾತ: ನಾಲ್ವರು ದುರ್ಮರಣ

• ಉದಯವಾಹಿನಿ, ಬಾಗಲಕೋಟೆ

ಕ್ಯಾಂಟರ್‌ಗೆ ಕಾರು ಡಿಕ್ಕಿ ಹೊಡೆದ ಪರಿಣಾಮ ನಾಲ್ವರು ಸ್ಥಳದಲ್ಲೇ ಸಾವನ್ನಪ್ಪಿರುವ ದಾರುಣ ಘಟನೆ ಹುನಗುಂದ ತಾಲ್ಲೂಕಿನ ಧನ್ನೂರು ಗ್ರಾಮದ ಬಳಿ ತಡರಾತ್ರಿ ನಡೆದಿದೆ. ವಿಜಯಪುರ ಜಿಲ್ಲೆಯ ಬಿದರಕುಂದಿ ಗ್ರಾಮದ ನಿವಾಸಿಗಳಾದ ಲಕ್ಷ್ಮಣ ವಡ್ಡರ್(55), ಬೈಲಪ್ಪ ಬಿರದಾರ್(45), ರಾಮಣ್ಣ ನಾಯಕ(50), ಚಾಲಕ ರಫಿಕ್ ಮುಲ್ಲಾ(25) ಮೃತಪಟ್ಟ ದುರ್ದೈವಿಗಳೆಂದು ತಿಳಿದುಬಂದಿದೆ. ಮೃತರು ಹೊಸಪೇಟೆ ಬಳಿಯ ಹುಲಿಗೆಮ್ಮ ದೇವಾಲಯಕ್ಕೆ ತೆರಳಿ ದರ್ಶನ ಮುಗಿಸಿಕೊಂಡು ತಡರಾತ್ರಿ 2 ಗಂಟೆ ಸುಮಾರಿನಲ್ಲಿ ವಾಪಸ್ ಬರುತ್ತಿದ್ದಾಗ ಮುದ್ದೆಬಿಹಾಳದಿಂದ ಹುನಗುಂದ ಕಡೆಗೆ ತೆರಳುತ್ತಿದ್ದ ಕ್ಯಾಂಟರ್‌ಗೆ ಕಾರು ಹಿಂದಿನಿಂದ ಡಿಕ್ಕಿ ಹೊಡೆದು ಈ ದುರಂತ ಸಂಭವಿಸಿದೆ. ತಡರಾತ್ರಿವರೆಗೂ ನಿರಂತರವಾಗಿ ಕಾರು ಚಾಲನೆ ಮಾಡಿಕೊಂಡು ಬಂದಿದ್ದು, ಒಂದು ಕ್ಷಣ ನಿದ್ದೆ ಮಂಪರಿಗೆ ಚಾಲಕ ಜಾರಿದ್ದರಿಂದ ಈ ದುರಂತ ಸಂಭವಿಸಿದೆ ಎಂದು ತಿಳಿದು ಬಂದಿದೆ. ಡಿಕ್ಕಿ ಹೊಡೆದ ರಭಸಕ್ಕೆ ಕಾರು ಸಂಪೂರ್ಣವಾಗಿ ನಜ್ಜುಗುಜ್ಜಾಗಿದ್ದು, ಹುನಗುಂದ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.

# ಕಾನೂನು ಮಹಾವಿದ್ಯಾಲಯ ಹೆಚ್ಚಿಸಿರುವ ಶುಲ್ಕ ರದ್ದುಪಡಿಸಲು ಆಗ್ರಹ

## ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯಲ್ಲಿ ಇರುವ ಏಕೈಕ ವುಂಕಿ ಸಣ್ಣರುದ್ರಪ್ಪ ಕಾನೂನು ಮಹಾವಿದ್ಯಾಲಯ

• ಉದಯವಾಹಿನಿ, ಬಳ್ಳಾರಿ


ಉದಯವಾಹಿನಿ ಚಿತ್ರ

ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಯಲ್ಲಿ ಇರುವ ಏಕೈಕ ಕಾನೂನು ಮಹಾವಿದ್ಯಾಲಯ ನಗರದ ವುಂಕಿ ಸಣ್ಣರುದ್ರಪ್ಪ, ಕಾನೂನು ಮಹಾ. ವಿದ್ಯಾಲಯವಾಗಿದೆ. ಇದರ ಲಾಭವನ್ನು ಪಡೆಯುವ ಉದ್ದೇಶದಿಂದ ಕಳೆದ ಎರಡು, ಮೂರು ವರ್ಷಗಳಿಂದ ಈ ಶಿಕ್ಷಣ ಸಂಸ್ಥೆ ಸೇವೆಯನ್ನು ಉದ್ಯಮವಾಗಿ ಮಾಡಿಕೊಂಡು ವಿದ್ಯಾರ್ಥಿಗಳಿಂದ ದುಪ್ಪಟ್ಟು ವಸೂಲಿ ಮಾಡುತ್ತಿದ್ದಾರೆ ಇದರಿಂದ ವಿದ್ಯಾರ್ಥಿಗಳಿಗೆ ಅದರಲ್ಲೂ ಬಡ ವಿದ್ಯಾರ್ಥಿಗಳಿಗೆ ಕಾನೂನಿನಲ್ಲಿ ಶಿಕ್ಷಣ ಪಡೆಯುವುದು ಅಸಾಧ್ಯವಾಗುತ್ತದೆ ಕಾರಣ ಪರಿಷ್ಕೃತ ಶುಲ್ಕವನ್ನು ರದ್ದುಪಡಿಸಿ ಮೊದಲಿದ್ದಂತೆ ಶುಲ್ಕವನ್ನು ನಿಗದಿಪಡಿಸಬೇಕೆಂದು ಮಹಾ ನಾಯಕ ಅಂಬೇಡ್ಕರ್ ಸಂಘರ್ಷ ಸಮಿತಿಯ ರಾಜ್ಯ ಅಧ್ಯಕ್ಷರಾದ ಕುರುವಳ್ಳಿ ಮಹೇಶ್ ಆಗ್ರಹಿಸಿದ್ದಾರೆ.

ಅವರು ಇಂದು ಜಿಲ್ಲಾಧಿಕಾರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಿ ಮಾತನಾಡಿ 2021-22ನೇ ಶೈಕ್ಷಣಿಕ ಸಾಲಿನ ಪ್ರಥಮ ವರ್ಷದ ವಿದ್ಯಾರ್ಥಿಗಳ ಶುಲ್ಕ ಸುಮಾರು ರೂ.17,000/- ರಿಂದ ರೂ. 18,000/- ಸಾವಿರದವರೆಗೆ ನಿಗಧಿಪಡಿಸಲಾಗಿತ್ತು ಮರುವರ್ಷ ಅಂದರೆ 2022-20ನೇ ಶಾಸನ ಶೈಕ್ಷಣಿಕ ಪ್ರಥಮ ವರ್ಷದ ರೂ 19.000/- ನಿಗಧಿಪಡಿಸಲಾಗಿತ್ತು, ಅದೇ ರೀತಿಯಾಗಿ 2023-24ನೇ ಸಾಲಿನ ಶೈಕ್ಷಣಿಕವರ್ಷದಲ್ಲಿ 21,000/- ಸಾವಿರದವರೆಗೆ ಅಂದರೆ ಸುಮಾರು 24.000/- ಮತ್ತು ರೂ 25,000/- ಸಾವಿರದ ವರೆಗೆ ನಿಗಧಿಪಡಿಸಲಾಗಿತ್ತು, ಇದೇ ರೀತಿಯಾಗಿ ಪ್ರತಿ ವರ್ಷದ ಶೈಕ್ಷಣಿಕ ಸಾಲಿನಲ್ಲಿ ಸುಮಾರು ರೂ. 1000/- ರಿಂದ ರೂ. 2000/- ದವರೆಗೆಕ್ರಮೇಣವಾಗಿ ಪ್ರತಿ ವರ್ಷ ಶುಲ್ಕವನ್ನು ಹೆಚ್ಚಿಸುತ್ತಾ ಬಂದಿರುತ್ತಾರೆ. ಆದರೆ ಪ್ರಸ್ತುತ2024-25ನೇ ಸಾಲಿನ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳ ಶುಲ್ಕವನ್ನು ದಿಢೀರನೆ 46,460/- ಗಳಿಗೆ (ರೂ.5000/- ಗೋಲ್ಡನ್ ಜುಬಿಲಿ) ಒಟ್ಟಾರೆಯಾಗಿ ರೂ.51,460/- ರೂಪಾಯಿಗಳಾಗಿ ಶುಲ್ಕವನ್ನು ನಿಗದಿ ಪಡಿಸಿದ್ದಾರೆ. ಇದರ ಜೊತೆಗೆ ಒಟ್ಟಾರೆಯಾಗಿ ರೂ. 1,00,000/- ಲಕ್ಷದವ ರೆಗೆ ದೇಣಿಗೆಯನ್ನು ಸಹ ಪಡೆಯುತ್ತಿದ್ದಾರೆ.

**ವಿದ್ಯಾರ್ಥಿಗಳ ಮೇಲೆ ಆರ್ಥಿಕ ಸುಲುಗೆ**

ಅದೇ ರೀತಿ ಇಂದಿನ ವರ್ಷವೇ, 5 ವರ್ಷದ ಎಲ್.ಎಲ್.ಬಿ ಪ್ರಾರಂಭವಾಗಿದ್ದು, ಇದರ ಪ್ರಥಮ ವರ್ಷದ ಶುಲ್ಕವನ್ನು ಏಕಾವಿಕಿಯಾಗಿ ರೂ.49,060/- ಗಳು ಮತ್ತು (ರೂ.5000:- ಗೋಲ್ಡನ್ ಬಿಲಿ)ಒಟ್ಟಾರೆಯಾಗಿ ರೂ. 55,060) ಗಳನ್ನು ಶುಲ್ಕವಾಗಿ ಸಿಗದಿಪಡಿಸಿದ್ದಾರೆ. ಮತ್ತು ಇದರಲ್ಲಿ ಪರಿಶಿಷ್ಟ ಜಾತಿ ವಂಶಿಷ್ಟ ಪಂಗಡದ ವಿದ್ಯಾರ್ಥಿಗಳಗು ಶುಲ್ಕದಲ್ಲಿ ರಿಯಾತಿಯನ್ನೂ ಸಹ ನೀಡಿರುವುದಿಲ್ಲ, ಈ ರೀತಿಯಾಗಿ ದುಪ್ಪಟ್ಟು ಮತ್ತು ದುಬಾರಿ ಶುಲ್ಕವನ್ನು ಪಾವತಿಸದೇ ವಿದ್ಯಾರ್ಥಿಗಳು ಪರದಾಡುವ ಪರಿಸ್ಥಿತಿ ಎದುರಾಗಿದೆ. ಆದರೆ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ2024-25ನೇ ಸಾಟನ ಶೈಕ್ಷಣಿಕ ವರ್ಷದ ಆದೇಶದ ಪ್ರಕಾರ 3 ವರ್ಷದ ಕಾನೂನು ವಿದ್ಯಾರ್ಥಿಗಳಗೆ ರೂ. 750/- ಮತ್ತು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ 5152/- ಶುಲ್ಕವನ್ನು ನಿಗದಿಪಡಿಸಲಾಗಿದೆ (ಆದೇಶ ಸಂಖ್ಯೆ: KSLU/Rep/Acad/Adms-fees/224-25) .ಆದ್ದರಿಂದ ಮಾನ್ಯ ಜಿಲ್ಲಾಧಿಕಾರಿಗಳಲ್ಲಿ ಮತ್ತು ನಿಮ್ಮ ಮುಖಾಂತರವಾಗಿ ಮಾನ್ಯ, ಗೌರಾವಾನ್ವಿತ ಉನ್ನತ ಮತ್ತು ಪ್ರೌಢಶಿಕ್ಷಣ ಸಚಿವರು, ಮಾನ್ಯ ಸಮಾಜ ಕಲ್ಯಾಣ ಇಲಾಖೆ ಸಜವರು, ಕಾನೂನು ಸಚಿವರು ಕರ್ನಾಟಕ ರಾಜ್ಯ, ಸರ್ಕಾರ, ಮತ್ತು ಮಾನ್ಯ ಕುಲಪತಿಗಳು, ಕರ್ನಾಟಕ ರಾಜ್ಯ, ಕಾನೂನು ವಿಶ್ವವಿದ್ಯಾಲಯ (ಹುಬ್ಬಳ್ಳಿ) ಮತ್ತು ಮಾನ್ಯ ಅಧ್ಯಕ್ಷರು ವೀರಶೈವ ವಿದ್ಯಾವರ್ಧಕ ಸಂಘ ಬಳ್ಳಾರಿ ಇವರಲ್ಲಿ ಶುಲ್ಕವನ್ನು ಕಡಿಮೆಗೊಳಿಸುವಂತೆ ಮನವಿ ಮಾಡುತ್ತಾ ಮಾನ್ಯರಲ್ಲಿ ಮಹಾ ನಾಯಕ ಸಂಘರ್ಷ ಸಮಿತಿಯ ರಾಜ್ಯಾಧ್ಯಕ್ಷರಾದ ಕುರುವಳ್ಳಿ ಮಹೇಶ್ ಆಗ್ರಪಡಿಸುತ್ತೇವೆ ಎಂದು ತಿಳಿಸಿದ್ದಾರೆ.

ಮಹಾ ನಾಯಕ ಅಂಬೇಡ್ಕರ್ ಸಂಘರ್ಷ ಸಮಿತಿಯ ರಾಜ್ಯಾಧ್ಯಕ್ಷ ಮಹೇಶ್ ಕುರುವಳ್ಳಿ, ಜಿಲ್ಲಾಧ್ಯಕ್ಷ ಉಮೇಶ್ ಉಪಾಧ್ಯಕ್ಷರಾದ ಮಹೇಶ್ ದಶರಥರಾಮ್ ಪ್ರಧಾನ ಕಾರ್ಯದರ್ಶಿ ಏರಿಸ್ವಾಮಿ ತಿಪ್ಪೇಸ್ವಾಮಿ ಆರ್ ಮಲ್ಲಿಕಾರ್ಜುನ ಮಹಾಂತೇಶ್ ರಾಮ್ ಕುಮಾರ್ ಖಜಾಂಚಿ ಪ್ರಶಾಂತ್ ಸೇರಿದಂತೆ ಹಲವರಿದ್ದರು.

> **ಬೇಡಿಕೆಗಳು** ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯು ದಿನಾಂಕ 22-05-2024ರಂದು ನೀಡಿರುವ ಆದೇಶದಂತೆ ಶುಲ್ಕವನ್ನು ನಿಗದಿಪಡಿಸಬೇಕು ವುಂಕಿ ಸಣ್ಣ ರುದ್ರಪ್ಪ ಕಾನೂನು ಮಹಾವಿದ್ಯಾಲಯ ಪ್ರಾಂಶುಪಾಲರು ದಿನಾಂಕ06-09-2024 ರಂದು ಹೊರಡಿಸಿರುವ ಶುಲ್ಕದ ಆದೇಶವನ್ನು ಹಿಂಪಡೆಯಬೇಕು. 2024-25 ನೇ ಸಾಲಿನಲ್ಲಿ ತೇರ್ಗಡೆಗೊಂಡ ವಿದ್ಯಾರ್ಥಿಗಳು ಪಾವತಿಸಿದ ಹೆಚ್ಚಿನಶುಲ್ಕವನ್ನು ವಿದ್ಯಾರ್ಥಿಗಳಿಗೆ ಹಿಂತಿರುಗಿಸಬೇಕು. ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಶುಲ್ಕದಲ್ಲಿ ರಿಯಾಯಿತಿ ನೀಡಬೇ5). ದೇಣಿಗೆ ಹೆಸರಿನಲ್ಲಿ ವಿದ್ಯಾರ್ಥಿಗಳ ಮೇಲೆ ಆರ್ಥಿಕ ಸುಲುಗೆಯನ್ನು ನಿಲ್ಲಸಬೇಕು ಎಂದು ಮಹಾ ನಾಯಕ ಸಂಘಟನೆಯ ರಾಜ್ಯಾಧ್ಯಕ್ಷ ಕುರುವಳ್ಳಿ ಮಹೇಶ್ ಆಗ್ರಹಿಸಿದ್ದಾರೆ.

